ಕನ್ನಡ ದಿನಪತ್ರಿಕೆ
05 ಎಪ್ರಿಲ್ । ಶುಕ್ರವಾರ
05 APRIL 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

₹4 ಸಂಪುಟ – 5 ಸಂಚಿಕೆ – 41 ಪುಟ – 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

## ಗ್ಯಾರಂಟಿ ಯೋಜನೆಗಳಿಗೆ ಸಿದ್ದರಾಮಯ್ಯನವರೇ ಗ್ಯಾರಂಟಿ: ಸಚಿವ ಸತೀಶ್ ಜಾರಕಿ ಹೊಳಿ



ಚಾಮರಾಜನಗರ: ಗ್ಯಾರಂಟಿ ಯೋಜನೆಗಳಿಗೆ ಸಿದ್ದರಾಮಯ್ಯನವರೇ ಗ್ಯಾರಂಟಿ ಎಂದು ಸಚಿವ ಸತೀಶ್ ಜಾರಕಿ ಹೊಳಿ ಹೇಳಿಕೆ ನೀಡಿದ್ದಾರೆ.

ನಗರದಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ಅವರ ಹೆಸರು ಹೇಳಿಕೊಂಡು ಮತ ನೀಡುತ್ತಿದ್ದಾರೆ. ಗ್ಯಾರಂಟಿ ಯೋಜನೆಗಳಿಗೆ ಸಿದ್ದರಾಮಯ್ಯನವರೇ ಗ್ಯಾರಂಟಿ ಆದ್ದರಿಂದ ಸಿದ್ದರಾಮಯ್ಯ ಅವರಿಂದ ಈಡಿ ರಾಜ್ಯ ಗೆಲ್ಲುತ್ತಾ ಇರೋದು. 6 ತಿಂಗಳು ಗ್ಯಾರಂಟಿ ಕೊಟ್ಟಿದ್ದೀವಿ ಮುಂದೇನು ಕೂಡ ಕೊಡ್ತೀವಿ ಎಂದರು.

ಇನ್ನೂ ಗೋ ಬ್ಯಾಕ್ ಸುನೀಲ್ ಬೋಸ್ ಪೋಸ್ಟರ್ ವಿಚಾರಕ್ಕೆ ಒಂದು ನಾಲ್ಕು ಜನ ಹೇಳಿದ್ರೆ ಅದಕ್ಕೆ ಬೆಲೆ ಇರೋಲ್ಲ, ನಮ್ಮವರು ಮಾಡಿದ್ರೂ ಅದು ಅವರ ವೈಯಕ್ತಿಕ ವಿಚಾರ ಎಂದು ಹೇಳಿದರು.

## ಸದಾ ಜನರೊಂದಿಗಿದ್ದು, ಜನರ ಸಮಸ್ಯೆಗಳಿಗೆ ನಿರಂತರ ಸ್ಪಂದಿಸಲಾಗುವುದು: ಮೃಣಾಲ ಹೆಬ್ಬಾಳಕರ್

### ಆನಿಗೋಳ, ಕೆಂಗಾನೂರ್, ಸಂಗೊಳ್ಳಿ ಗ್ರಾಮ, ತುರಕರಶೀಗಿಹಳ್ಳಿ ಮೊದಲಾದ ಗ್ರಾಮಗಳಲ್ಲಿ ಭರ್ಜರಿ ಪ್ರಚಾರ



ಬೆಳಗಾವಿ: ಚುನಾವಣೆಯ ನಂತರ ನಮ್ಮ ವಿಳಾಸವನ್ನು ಹುಡುಕಿಕೊಂಡು ಹೋಗುವಂತಹ ಪರಿಸ್ಥಿತಿ ಬರುವುದಿಲ್ಲ. ಸದಾ ಜನರೊಂದಿಗಿದ್ದು, ಜನರ ಸಮಸ್ಯೆಗಳಿಗೆ ನಿರಂತರ ಸ್ಪಂದಿಸಲಾಗುವುದು ಎಂದು ಬೆಳಗಾವಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್‌ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ತಿಳಿಸಿದ್ದಾರೆ.

ಬೈಲಹೊಂಗಲ ವಿಧಾನಸಭಾ ಕ್ಷೇತ್ರದ ಆನಿಗೋಳ, ಕೆಂಗಾನೂರ್, ಸಂಗೊಳ್ಳಿ ಗ್ರಾಮ, ತುರಕರಶೀಗಿಹಳ್ಳಿ ಮೊದಲಾದ ಗ್ರಾಮಗಳಲ್ಲಿ ಬುಧವಾರ ಸಂಜೆ ಲೋಕಸಭೆ ಚುನಾವಣೆಯ ಪ್ರಚಾರ ಕೈಗೊಂಡು ಅವರು ಮಾತನಾಡಿದರು. ಬೆಳಗಾವಿ ಗ್ರಾಮೀಣ ಕ್ಷೇತ್ರದ ಶಾಸಕರಾಗಿರುವ ತಾಯಿ ಲಕ್ಷ್ಮೀ ಹೆಬ್ಬಾಳಕರ್ ಅವರು ನಿರಂತರವಾಗಿ ಕ್ಷೇತ್ರದ ಜನರೊಂದಿಗಿರುತ್ತಾರೆ. ಅವರು ಕೆಲಸದ ನಿಮಿತ್ತ ಬೆಂಗಳೂರು, ಉಡ–ುಪಿಗೆ ಹೋದಾಗ ನಾನು ಮತ್ತು ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಅವರು ಜನರ ಸಮಸ್ಯೆಗಳಿಗೆ ಸ್ಪಂದಿಸುತ್ತೇವೆ. ಯಾವುದೇ ಸಂದರ್ಭದಲ್ಲಿ ಜನರಿಗೆ ನಿರಾಸೆ ಮೂಡುವಂತಹ ಪರಿಸ್ಥಿತಿ ಎದುರಾಗಲಿಲ್ಲ. ಅದೇ ಮಾದರಿಯಲ್ಲಿ ಮುಂದಿನ ದಿನಗಳಲ್ಲಿ ಸಹ ಕೆಲಸ ಮಾಡುತ್ತೇವೆ. ದಿನದ 24 ಗಂಟೆಯೂ ಜನರ ಮಧ್ಯೆ ಇರುತ್ತೇವೆ ಎಂದು ಅವರು ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಮಾತನಾಡಿ, ಮೃಣಾಲ ಹೆಬ್ಬಾಳಕರ್ ಕಳೆದ 10 ವರ್ಷದಿಂದ ನನ್ನೊಂದಿಗೇ ಕ್ಷೇತ್ರದ ಕೆಲಸ ಮಾಡುತ್ತಿದ್ದಾನೆ. ಜನರ ಜೊತೆ ನಿಕಟವಾದ ಸಂಪರ್ಕ ಹೊಂದಿದ್ದಾನೆ.

ಬಡವರ ಬಗ್ಗೆ ಅಪಾರ ಕಳಕಳಿ ಹೊಂದಿದ್ದಾನೆ. ವಿದ್ಯಾವಂತನಾಗಿರುವುದ–ರಿಂದ ಅಭಿವೃದ್ಧಿ ಯೋಜನೆಗಳ ಸ್ಪಷ್ಟ ಕಲ್ಪನೆ ಹೊಂದಿದ್ದಾನೆ. ಕ್ಷೇತ್ರದ ಶಾಸಕರಾಗಿರುವ ಮಹಾಂತೇಶ ಕೌಜಲಗಿ ಅವರ ಜೊತೆ ಸೇರಿ, ರಾಜ್ಯ ಮತ್ತು ಕೇಂದ್ರ ಸರಕಾರದಿಂದ ಕ್ಷೇತ್ರಕ್ಕೆ ಸಾಕಷ್ಟು ಅನುದಾನ ತರಲಾಗುವುದು ಎಂದು ಭರವಸೆ ನೀಡಿದರು.

ಶಾಸಕ ಮಹಾಂತೇಶ ಕೌಜಲಗಿ ಮಾತನಾಡಿ, ಲಕ್ಷ್ಮೀ ಹೆಬ್ಬಾಳಕರ್, ಚನ್ನರಾಜ ಹಟ್ಟಿಹೊಳಿ ಮತ್ತು ಮೃಣಾಲ ಹೆಬ್ಬಾಳಕರ್ ಅವರನ್ನು ಬಹಳ ವರ್ಷದಿಂದ ನೋಡುತ್ತಿದ್ದೇನೆ. ಅವರು ಸದಾ ಜನಪರ, ಅಭಿವೃದ್ಧಿ ಪರ ಧೋರಣೆ ಹೊಂದಿರುವವರು. ಅಂತವರನ್ನು ನಮ್ಮ ಪ್ರತಿನಿಧಿಯನ್ನಾಗಿ ಆಯ್ಕೆ ಮಾಡಿದರೆ ಕ್ಷೇತ್ರದ ಅಭಿವೃದ್ಧಿಗೆ ವೇಗ ಸಿಗಲಿದೆ. ಹಾಗಾಗಿ ಮೇ 7ರಂದು ನಡೆಯಲಿರುವ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿರುವ ಮೃಣಾಲ ಹೆಬ್ಬಾಳಕರ್ ಅವರಿಗೆ ಮತ ನೀಡುವ ಮೂಲಕ ಹೆಚ್ಚಿನ ಅಂತರದಿಂದ ಗೆಲ್ಲಿಸೋಣ ಎಂದರು.

ಇದೇ ವೇಳೆ ಸಂಗೊಳ್ಳಿ ಗ್ರಾಮದಲ್ಲಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನವರ ಮೂರ್ತಿಗೆ ಮಾಲಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಲಾಯಿತು.

ಎಲ್ಲ ಗ್ರಾಮಗಳಲ್ಲೂ ಜನರು ಅಪಾರ ಪ್ರೀತಿ, ವಿಶ್ವಾಸದಿಂದ ಭಾಗವಹಿಸಿ, ಈ ಚುನಾವಣೆಯಲ್ಲಿ ಮೃಣಾಲ್ ಹೆಬ್ಬಾಳಕರ್ ಅವರನ್ನು ಹೆಚ್ಚಿನ ಬಹುಮತದಿಂದ ಗೆಲ್ಲಿಸಲಾಗುವುದು ಎಂದು ಭರವಸೆ ನೀಡಿದರು.

ಬೆಳಗಾವಿ ಜಿಲ್ಲಾ ಯುವ ಕಾಂಗ್ರೆಸ್ ನ ಅಧ್ಯಕ್ಷ ಕಾರ್ತಿಕ ಪಾಟೀಲ, ಪಾರ್ವತೆವ್ವ ತಳವಾರ, ಸತ್ಯವ್ವ ಮಾದರ್, ಬೊಮ್ಮನಾಯ್ಕ ಪಾಟೀಲ, ಲಕ್ಷ್ಮಣ ಬಿಸ್ತನ್ನವರ್, ರಾಮನಗೌಡ ಪಾಟೀಲ, ಆಯಾ ಗ್ರಾಮಗಳ ಹಿರಿಯರು, ಪಕ್ಷದ ಕಾರ್ಯಕರ್ತರು ಇದ್ದರು.

## ಕಳೆದ 10 ವರ್ಷಗಳ ನಮ್ಮ ಸಾಧನೆ ಬರೀ ಟ್ರೈಲರ್: ಪ್ರಧಾನಿ ಮೋದಿ



ಬಿಹಾರ: ಕಳೆದ 10 ವರ್ಷಗಳಲ್ಲಿ ಕೇಂದ್ರದಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಮಾಡಿರೋದು ಕೇವಲ 'ಟ್ರೇಲರ್' ಅಷ್ಟೇ, ಮೂರನೇ ಅವಧಿಗೆ ತಾವೂ ಪ್ರಧಾನಿ ಪ್ರಧಾನಿಯಾದರೆ ಮತ್ತಷ್ಟು ಅಭಿವೃದ್ಧಿಯಾಗಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಜಮುಯಿಯಲ್ಲಿ ಚುನಾವಣಾ ಪ್ರಚಾರ ಸಭೆಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ, "ಬಿಜೆಪಿ ಮತ್ತು ಎನ್‌ಡಿಎ ಪರ ಅಲೆ ಬಿಹಾರ ಮಾತ್ರವಲ್ಲದೇ, ದೇಶದ ಮೂಲೆ ಮೂಲೆಗಳಲ್ಲಿಯೂ ಸದ್ದು ಮಾಡುತ್ತಿವೆ.

ಕಳೆದ 10 ವರ್ಷಗಳಲ್ಲಿ ಏನಾಯಿತು ಎಂಬುದು ಕೇವಲ ಟ್ರೇಲರ್, ಇನ್ನೂ ಸಾಕಷ್ಟು ಮಾಡಬೇಕಾಗಿದೆ. ದೇಶವನ್ನು ಮುಂದಕ್ಕೆ ಕೊಂಡೊಯ್ಯಲು ನಾವೆಲ್ಲರೂ ಒಗ್ಗೂಡಬೇಕಾಗಿದೆ ಎಂದರು.

ಕೇಂದ್ರದಲ್ಲಿ 'ಘಮಾಂಡಿಯಾ' ಮೈತ್ರಿಕೂಟದ ಪಾಲುದಾರರು ಅಧಿಕಾರದಲ್ಲಿದ್ದ ದಿನದಲ್ಲಿ, ರೈಲುಗಳು ಅತ್ಯಂತ ಕೆಟ್ಟದಾಗಿದ್ದವು. ಈಗ, ಬಿಹಾರದ ಜನರು ವಂದೇ ಭಾರತ್‌ನಲ್ಲಿ ಪ್ರಯಾಣಿಸುತ್ತಿದ್ದಾರೆ.

ರೈಲ್ವೆಯಲ್ಲಿ ಬಡವರಿಗೆ ಉದ್ಯೋಗ ನೀಡುವ ಹೆಸರಿನಲ್ಲಿ ಭೂಮಿ ಕಬಳಿಸಿದವರು ಬಿಹಾರದ ಜನರಿಗೆ ಎಂದಿಗೂ ಒಳ್ಳೆಯದನ್ನು ಮಾಡಲಿಲ್ಲ ಎಂದು ಇಂಡಿಯಾ ಮೈತ್ರಿಕೂಟವನ್ನು ತರಾಟೆಗೆ ತೆಗೆದುಕೊಂಡರು.

ಕೇಂದ್ರದಲ್ಲಿ ಯುಪಿಎ ಸರ್ಕಾರ ಅಧಿಕಾರದಲ್ಲಿದ್ದಾಗ ಭಾರತವನ್ನು ವಿಶ್ವದ ದೃಷ್ಟಿಯಲ್ಲಿ 'ದುರ್ಬಲ' ಎಂದು ಪರಿಗಣಿಸಲಾಗಿತ್ತು. ಆದರೆ ಈಗ ದೇಶವು ಜಾಗತಿಕ ನಾಯಕ ಎಂದು ಕರೆಸಿಕೊಳ್ಳುತ್ತಿದೆ.

ಇಡೀ ಜಗತ್ತು ನಮ್ಮನ್ನು ಗಮನಿಸುತ್ತಿದೆ. ಜಾಗತಿಕವಾಗಿ ದೇಶದ ಪ್ರತಿಷ್ಠೆ ಹೆಚ್ಚಿದ್ದು, ನಾವು ಐದನೇ ಅತಿದೊಡ್ಡ ಜಾಗತಿಕ ಆರ್ಥಿಕತೆಯಾಗಿದ್ದೇವೆ.

ವಿಕಸಿತ ಭಾರತ ಗುರಿಯತ್ತ ಬಿಜೆಪಿ ಹಾಗೂ ಎನ್ ಡಿಎ ಕಾರ್ಯೋನ್ಮುಖವಾಗಿರುವುದಾಗಿ ಅವರು ತಿಳಿಸಿದರು.



## ರಾಜ್ಯಸಭಾ ಸದಸ್ಯರಾಗಿ ಸೋನಿಯಾ ಗಾಂಧಿ ಪ್ರಮಾಣ ವಚನ ಸ್ವೀಕಾರ

ನವದೆಹಲಿ: ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರು ಏಪ್ರಿಲ್ 3 ರಂದು ತಮ್ಮ ಅಧಿಕಾರಾವಧಿಯನ್ನು ಪೂರ್ಣಗೊಳಿಸಿದ ನಂತರ ತೆರವಾದ ಸ್ಥಾನವನ್ನು ತುಂಬಲು ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ ಗುರುವಾರ ರಾಜಸ್ಥಾನದಿಂದ ಮೊದಲ ಬಾರಿಗೆ ರಾಜ್ಯಸಭಾ ಸಂಸದರಾಗಿ ಪ್ರಮಾಣ ವಚನ ಸ್ವೀಕರಿಸಿದರು.

ಸದನದ ನಾಯಕ ಪಿಯೂಷ್ ಗೋಯಲ್ ಮತ್ತು ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರ ಸಮ್ಮುಖದಲ್ಲಿ ಸೋನಿಯಾ ಗಾಂಧಿ ರಾಜ್ಯಸಭಾ ಸಂಸದರಾಗಿ ಪ್ರಮಾಣ ವಚನ ಸ್ವೀಕರಿಸಿದರು. ಅವರ ಮಗಳು ಪ್ರಿಯಾಂಕಾ ಗಾಂಧಿ ವಾದ್ರಾ, ರಾಜ್ಯಸಭಾ ಉಪಾಧ್ಯಕ್ಷ ಹರಿವಂಶ್ ಮತ್ತು ಪ್ರಧಾನ ಕಾರ್ಯದರ್ಶಿ ಪಿ.ಸಿ.ಮೋದಿ ಉಪಸ್ಥಿತರಿದ್ದರು.



## ದಾಖಲೇ ಇಲ್ಲದೇ ಸಾಗಿಸುತ್ತಿದ್ದ ಬರೋಬ್ಬರಿ 45 ಲಕ್ಷ ಹಣ ಜಪ್ತಿ

ಚಿಕ್ಕಮಗಳೂರು: ದಾಖಲೇ ಇಲ್ಲದೇ ಸಾಗಿಸುತ್ತಿದ್ದ ಬರೋಬ್ಬರಿ 45 ಲಕ್ಷ ಹಣವನ್ನು ವಶಕ್ಕೆ ಪಡೆಯಲಾಗಿದೆ.

ಯಾವುದೇ ದಾಖಲೆ ಇಲ್ಲದೇ ನಿಯಮ ಉಲ್ಲಂಘಿಸಿ ಬಾಣಾವರಿಂದ ದೇವನೂರು ಗ್ರಾಮದಲ್ಲಿರುವ ಬ್ಯಾಂಕ್ ಆಫ್ ಬರೋಡ ಬ್ಯಾಂಕ್ ಶಾಖೆಗೆ 45 ಲಕ್ಷ ನಗದು ಹಣವನ್ನು ಸಾಗಿಸಲಾಗುತ್ತಿತ್ತು. ಕಡೂರು ತಾಲೂಕಿನ ದೇವನೂರು ಗ್ರಾಮದ ಬಳಿಯ ಮಾಚಗೊಂಡನಹಳ್ಳಿ ಚೆಕ್ ಪೋಸ್ಟ್ ಬಳಿ ತಪಾಸಣೆ ನಡೆಸಿದಾಗ ಬ್ಯಾಗ್ ನಲ್ಲಿ 45 ಲಕ್ಷ ಪತ್ತೆಯಾಗಿದೆ. ಸದ್ಯ, ಪೊಲೀಸರು ಹಣವನ್ನು ವಶಕ್ಕೆ ಪಡೆದು ಮುಂದಿನ ಕ್ರಮ ಕೈಗೊಂಡಿದ್ದಾರೆ.

## ಲಿಫ್ಟ್ ನಲ್ಲಿ ಸಿಲುಕಿದ ಗೋವಾ ಸಿಎಂ ಸೇರಿ ಹಲವು ಗಣ್ಯರು

ಮಂಡ್ಯ: ಮಂಡ್ಯ ನಗರದ ಅಮರಾವತಿ ಹೋಟೆಲ್ ನಲ್ಲಿ ಗೋವಾ ಸಿ.ಎಂ ಗೋವಾ ಸಿಎಂ ಪ್ರಮೋದ್ ಸಾವಂತ್, ಯದುವೀರ್ ,ಮಾಜಿ ಸಚಿವ ಪುಟ್ಟರಾಜು ಸೇರಿ ಹಲವು ಗಣ್ಯರು ಸಿಲುಕಿರುವ ಘಟನೆ ನಡೆದಿದೆ.

ಮಂಡ್ಯ ಲೋಕಸಭೆ ಚುನಾವಣಾ ಹಿನ್ನೆಲೆಯಲ್ಲಿ ಮಂಡ್ಯ ನಗರಕ್ಕೆ ಆಗಮಿಸಿದ್ದ ಗೋವಾ ಸಿ.ಎಂ, ಯದುವೀರ್ ,ಮಾಜಿ ಸಚಿವ ಪುಟ್ಟರಾಜು ಸೇರಿ ಹಲವು ಗಣ್ಯರು ಲಿಫ್ಟ್ ನಲ್ಲಿ ಸಿಲುಕಿಕೊಂಡಿದ್ದಾರೆ. ಸ್ಥಳದಲ್ಲಿ ಕೆಲ ಕಾಲ ಗೊಂದಲ, ಆತಂಕದ ವಾತಾವರಣ ನಿರ್ಮಾಣವಾಗಿತ್ತು.

## 98.52 ಕೋಟಿ ರೂ. ಮೊತ್ತದ ಬಿಯರ್ ಜಪ್ತಿ ಮಾಡಿದ ಅಬಕಾರಿ ಅಧಿಕಾರಿಗಳು



ಮೈಸೂರು: ಇಲ್ಲಿನ ತಾಂಡ್ಯ ಕೈಗಾ–ರಿಕಾ ಪ್ರದೇಶದಲ್ಲಿರುವ ಯುನೈಟೆಡ್ ಬ್ರಿವರೀಸ್ ಲಿಮಿಟೆಡ್ ಘಟಕದ ಮೇಲೆ ಅಬಕಾರಿ ಜಂಟಿ ಆಯುಕ್ತರು ದಾಳಿ ನಡೆಸಿದ್ದು, ಒಟ್ಟು 98.52 ಕೋಟಿ ರೂ. ಮೊತ್ತದ ಬಿಯರ್ ದಾಸ್ತಾನು ಜಪ್ತಿ ಮಾಡಿದ್ದಾರೆ.

ಮೈಸೂರು ಜಿಲ್ಲೆಯ ತಾಂಡ್ಯ ಕೈಗಾರಿಕಾ ಪ್ರದೇಶದಲ್ಲಿರುವ ಬಿಯರ್ (Beer) ತಯಾರಿಕಾ ಘಟಕದಲ್ಲಿ ಸರ್ಕಾರಕ್ಕೆ ತೋರಿಸಿರುವ ದಾಸ್ತಾನು ಲೆಕ್ಕಕ್ಕಿಂತ ಅಧಿಕ ದಾಸ್ತಾನು ಸಂಗ್ರಹ ಪತ್ತೆಯಾಗಿದೆ. 7000 ಸಾವಿರ ವಿವಿಧ ಬ್ರಾಂಡಿನ ಪೆಟ್ಟಿಗೆಗಲ್ಲಿ ಬಿಯರ್ ಬಾಟಲಿಗಳು ಪತ್ತೆಯಾಗಿದೆ. ಯುಟಿ ಟ್ಯಾಂಕ್, ಸೈಲೋಸ್ ಟ್ಯಾಂಕ್‌ಗಳಲ್ಲಿರುವ ಕಚ್ಚಾ ವಸ್ತು ಸಮೇತ ಜಪ್ತಿ ಮಾಡಿದ್ದು, ಈ ಸಂಬಂಧ 17 ಮಂದಿ ವಿರುದ್ಧ ಪ್ರಕರಣ ದಾಖಲಿಸಲಾಗಿದೆ.

ಜಿಲ್ಲಾ ಚುನಾವಣಾಧಿಕಾರಿಗಳ ಕಚೇರಿಗೆ ಬಂದ ಅನಾಮಧೇಯ ಕರೆಯ ಮೇರೆಗೆ ಚುನಾವಣಾಧಿಕಾರಿಗಳು ಹಾಗೂ ಅಬಕಾರಿ ಜಂಟಿ ಆಯುಕ್ತರು ಘಟಕಕ್ಕೆ ಭೇಟಿ ನೀಡಿ ದಾಖಲೆ ಪರಿಶೀಲಿಸಿದಾಗ ಲೆಕ್ಕಪುಸ್ತಕದ ದಾಸ್ತಾನಿಗಿಂತ ಹೆಚ್ಚಿನಅ ಬಿಯರ್ ದಾಸ್ತಾನು ಕಂಡುಬಂದಿದೆ. ಈ ಹಿನ್ನೆಲೆ ಅವುಗಳನ್ನು ಜಪ್ತಿ ಮಾಡಿ ಪ್ರಕರಣ ದಾಖಲಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ತಿಳಿಸಿದ್ದಾರೆ.

## ಸಾವು ಗೆದ್ದ ಬಂದ 2 ವರ್ಷದ ಬಾಲಕ ಸಾತ್ವಿಕ್



ವಿಜಯಪುರ: ಜಿಲ್ಲೆಯ ಇಂಡಿ ತಾಲೂಕು ಲಚ್ಯಾಣ ಗ್ರಾಮದ ಬಳಿ ಕೊಳವೆಬಾವಿಗೆ ಬಿದ್ದಿದ್ದ 2 ವರ್ಷದ ಬಾಲಕ ಸಾತ್ವಿಕ್‌ನನ್ನು ಯಶಸ್ವಿಯಾಗಿ ಹೊರ ತೆಗೆಯಲಾಗಿದೆ. ಕೊನೆಗೂ ಸಾವಿರಾರು ಜನರ ಪ್ರಾಥ–ರ್ನೆಗಳು ಫಲಿಸಿದೆ. ಪುಟ್ಟ ಬಾಲಕ ಸಾವು ಗೆದ್ದು ಬದುಕಿ ಬಂದಿದ್ದಾನೆ. ಅಗ್ನಿಶಾಮಕ ದಳದ ಸಿಬ್ಬಂದಿ ತಡರಾತ್ರಿಯಲ್ಲೂ ಕಾರ್ಯಾಚರಣೆ ಮಾಡಿ ಮಗುವನ್ನು ರಕ್ಷಿಸಿದ್ದಾರೆ.

ಸತೀಶ್ ಮತ್ತು ಪೂಜಾ ದಂಪತಿಯ ಪುತ್ರ ಸಾತ್ವಿಕ್ ಮುಜಗೊಂಡ (2) ಎಂಬ ಬಾಲಕನು ಬುಧವಾರ (ಏಪ್ರಿಲ್ 3) ಆಟವಾಡಲು ಹೋಗಿದ್ದ ವೇಳೆ ಆಯತಪ್ಪಿ ಕೊಳವೆ ಬಾವಿಗೆ ಬಿದ್ದಿದ್ದ. ಶಂಕರಪ್ಪ ಮುಜಗೊಂಡ ಎಂಬುವರು ತಮ್ಮ ಜಮೀನಿನಲ್ಲಿ ಕೊಳವೆ ಬಾವಿ ಕೊರೆಸಿದ್ದರು. 500 ಅಡಿಯಷ್ಟು ಕೊರೆದರೂ ನೀರು ಬಂದಿರಲಿಲ್ಲ. ಹಾಗಾಗಿ ಮುಚ್ಚದೇ ಹಾಗೆಯೇ ಬಿಟ್ಟಿದ್ದರು.

ಮಗುವಿಗೆ ಉಸಿರಾಟದ ಸಮಸ್ಯೆಯಾಗದಂತೆ ಅಧಿಕಾರಿಗಳು ನಿರಂತರವಾಗಿ ಆಕ್ಸಿಜನ್ ಪೂರೈಕೆ ಮಾಡುತ್ತಿದ್ದರು. ಕಾರ್ಯಾಚರಣೆ ವೇಳೆ ಮಗುವಿನ ಮೇಲೆ ಮಣ್ಣು ಬಿದ್ದಿತ್ತು.

ಎಲ್ಲವನ್ನೂ ಕ್ಯಾಮೆರಾ ಮೂಲಕ ನಿಗಾ ವಹಿಸಲಾಗಿತ್ತು ಮಗುವಿನ ಎರಡು ಕಾಲುಗಳು ಕ್ಯಾಮೆರಾ ಕಣ್ಣಿಗೆ ಬಿದ್ದಿದ್ದು ಕಾಲುಗಳು ಅಲ್ಲಾಡುತ್ತಿವೆ ಎಂಬುದು ಪತ್ತೆಯಾಗಿತ್ತು. ಕೊಳವೆ ಬಾವಿಯ 16 ಅಡಿಯಲ್ಲಿ ಮಗು ಸಿಲುಕಿದ್ದ ಮಗುವನ್ನು ಅಕ್ಕಪಕ್ಕದಲ್ಲಿ ಮಣ್ಣು ತೆರೆವುಗೊಳಿಸಿ ಮಗುವನ್ನ ಹೊರ ತೆಗೆಯಲಾಗಿದ್ದು, ಆಂಬುಲೆನ್ಸ್ ಮೂಲಕ ಸ್ಥಳೀಯ ಆಸ್ಪತ್ರೆಗೆ ಮಗುವನ್ನು ಕರೆದ್ಯೊಯಲಾಗಿದೆ.

## ರಾತ್ರಿ ಪಾಳಿ ಮುನ್ನ ಕೆಎಸ್‌ಆರ್‌ಟಿಸಿ ಚಾಲಕರಿಗಿನ್ನು 9 ಗಂಟೆ ವಿಶ್ರಾಂತಿ



ಬೆಂಗಳೂರು: ಕೆಎಸ್ಸಾರ್ಟಿಸಿ ಬಸ್ ಅಪಘಾತಕ್ಕೆ ಚಾಲಕರ ಮೇಲಿನ ಕಾರ್ಯದೊತ್ತಡವೂ ಕಾರಣ ಎಂದು ಮನಗಂಡಿರುವ ನಿಗಮದ ಆಡಳಿತ ಮಂಡಳಿ, ಅದಕ್ಕಾಗಿ ಚಾಲಕರನ್ನು ರಾತ್ರಿ ಸೇವೆ ಮತ್ತು ದೂರದ ಮಾರ್ಗಗಳಿಗೆ ಕರ್ತವ್ಯಕ್ಕೆ ಕಳುಹಿಸುವುದಕ್ಕೂ ಮುಂಚೆ ಕನಿಷ್ಠ 9 ಗಂಟೆಗಳ ಕಾಲ ವಿಶ್ರಾಂತಿ ನೀಡುವಂತೆ ವಿಭಾಗೀಯ ನಿಯಂತ್ರಣಾಧಿಕಾ–ರಿಗಳಿಗೆ ಸೂಚಿಸಿದೆ.

ಕೆಎಸ್ಸಾರ್ಟಿಸಿ ಬಸ್‌ಗಳಿಂದ ಉಂಟಾಗಿರುವ ಅಪಘಾತ ಪ್ರಕರಣ ವಿಶ್ಲೇಷಣಾ ಸಭೆಯಲ್ಲಿ ಚಾಲಕರ ಮೇಲಾಗುತ್ತಿರುವ ಕಾರ್ಯದೊತ್ತಡದ ಕುರಿತು ಚರ್ಚಿಸಲಾಗಿದೆ.

ಈ ವೇಳೆ ಚಾಲಕರಿಗೆ ವಿಶ್ರಾಂತಿ ಇಲ್ಲದೆ ಮೇಲಿಂದ ಮೇಲೆ ಕರ್ತವ್ಯಕ್ಕೆ ನಿಯೋಜಿಸುವುದರಿಂದ ಚಾಲಕರಿಗೆ ಸುಸ್ತಾಗುತ್ತಿದ್ದು, ಅದು ಅಪಘಾತಗಳಿಗೆ ಕಾರಣವಾಗುತ್ತಿದೆ.

ಹೀಗಾಗಿ ಮೋಟಾರು ಸಾರಿಗೆ ಕಾರ್ಮಿಕರ ಕಾಯ್ದೆ 1961ರಲ್ಲಿ ಇರುವಂತೆ ಚಾಲಕರಿಗೆ ನಿಯಮಿತವಾಗಿ ವಿಶ್ರಾಂತಿ ನೀಡಲು ಎಲ್ಲ ವಿಭಾಗೀಯ ನಿಯಂತ್ರಣಾಧಿಕಾ–ರಿಗಳು ಕ್ರಮ ಕೈಗೊಳ್ಳಬೇಕು ಎಂದು ಸಭೆಯಲ್ಲಿ ನಿರ್ಧ–ರಿಸಲಾಗಿದೆ.


## ಸಿಂಧಿ ಸಮಾಜದ ಪ್ರಮುಖರ ಜೊತೆ ಶೆಟ್ಟರ್ ಸಭೆ



ಬೆಳಗತಾವಿ: ಲೋಕಸಭಾ ಚುನಾವಣೆ ಅಂಗವಾಗಿ ಬೆಳಗಾವಿ ವಿನಾಯಕ ಕಾಲೋನಿಯ ಸಿಂಧಿ ಭವನದಲ್ಲಿ "ಸಿಂಧಿ ಸಮಾಜದ" ಪ್ರಮುಖರ ಸಭೆ ನಡೆಸಿ, ಸಮಾಜದ ಏಳಿಗೆಗೆ ನಿರಂತರವಾಗಿ ಶ್ರಮಿಸಲಾಗುವುದು ಎಂದು ಮತಯಾಚನೆ ನಡೆಸಲಾಯಿತು.

ಈ ಸಂದರ್ಭದಲ್ಲಿ ಬಿಜೆಪಿ ರಾಜ್ಯ ಉಪಾಧ್ಯಕ್ಷರಾದ ಶ್ರೀ ಅನಿಲ ಬೆನಕೆ, ವಿಧಾನಪರಿಷತ್ ಸದಸ್ಯರಾದ ಶ್ರೀ ಹಣಮಂತ ನಿರಾಣಿ, ಪಾಲಿಕೆ ಸದಸ್ಯರಾದ ಶ್ರೀಮತಿ ವೀಣಾ ವಿಜಾಪುರೆ, ಶ್ರೀ ಸಂದೀಪ ಜಿರಗಿಹಾಳ, ಶ್ರೀ ಸಂತೋಷ ಪೇಡನಕರ್, ಮಂಡಲ ಅಧ್ಯಕ್ಷ ಶ್ರೀ ರಾಮ ಜಮುನಾನೆ, ಪ್ರಮುಖರಾದ ಶ್ರೀ ಮುರುಘರ ಪಾಟೀಲ್, ಶ್ರೀ ಮತಿ ಸೋನಾಲಿ ಸರಣುಮತ್, ಶ್ರೀ ಅನಿಕೇತ ಧರ್ಮದಾಸಿನೆ, ಶ್ರೀ ನರೇಶ್ ಗೊದ್ವಾನೆ, ಶ್ರೀ ನರೇಶ್ ಮೂಲಾನಿ ಸೇರಿದಂತೆ ಇನ್ನಿತರ ಮುಖಂಡರು ಉಪಸ್ಥಿತರಿದ್ದರು.

## ವಿವಾದಕ್ಕೆ ಎಡೆ ಮಾಡಿಕೊಟ್ಟ ಜೈನ್ ಕಾಲೇಜು




ಬೆಂಗಳೂರು: ಲೋಕಸಭಾ ಚುನಾವಣೆಯಲ್ಲಿ ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸಿರುವ ತೇಜಸ್ವಿ ಸೂರ್ಯ ನಾಮಪತ್ರ ಸಲ್ಲಿಕೆ ವೇಳೆ ಕಡ್ಡಾಯವಾಗಿ ಹಾಜರಿರಬೇಕು ಎಂದು ಜೈನ್ ಕಾಲೇಜು ವಿದ್ಯಾರ್ಥಿಗಳಿಗೆ ಸೂಚಿಸಿರುವುದು ವಿವಾದಕ್ಕೆ ಎಡೆ ಮಾಡಿಕೊಟ್ಟಿದೆ.

ವಿವಿಪುರಂ ನಲ್ಲಿರುವ ಜೈನ್ ಕಾಲೇಜು ವಾಟ್ಸಪ್ ಗ್ರೂಪ್ನಲ್ಲಿ ಈ ರೀತಿಯ ಸಂದೇಶ ಹರಿದಾಡುತ್ತಿರುವುದು ಕಂಡು ಬಂದಿದೆ. ಸಂದೇಶದಲ್ಲಿ ಇಂದು ತೇಜಸ್ವಿ ಸೂರ್ಯ ನಾಮಪತ್ರ ಸಲ್ಲಿಸುವ ಸಂದರ್ಭದಲ್ಲಿ ಕಡ್ಡಾಯವಾಗಿ ಹಾಜರಿರಬೇಕು ಎಂದು ಸೂಚಿಸಲಾಗಿದೆ ಎಂದು ಕೆಲ ವಿದ್ಯಾರ್ಥಿಗಳು ಆರೋಪಿಸಿದ್ದಾರೆ.ವಿದ್ಯಾರ್ಥಿ ಪರಿಷತ್ತಿನ ಸದಸ್ಯರು ಸೇ–ರಿದಂತೆ ಎಲ್ಲ ವಿದ್ಯಾರ್ಥಿಗಳು ಬೆಳಗ್ಗೆ 9 ಗಂಟೆಗೆ ಜಯನಗರದ ಮೈಯ್ಯಾಸ್ ಹೋಟೆಲ್ ಬಳಿ ಸೇರಬೇಕು. ಅಲ್ಲಿ ನಿಮಗೆ ಟಿ–ಶರ್ಟ್ ನೀಡಲಾಗುವುದು. ಆದ್ದರಿಂದ ತಡ ಮಾಡಬಾರದು ಎಂದು ಸಂದೇಶದಲ್ಲಿ ಹೇಳಲಾಗಿದೆ.

ನಾಮಪತ್ರ ಸಲ್ಲಿಕೆ ವೇಳೆ ಕಡ್ಡಾಯವಾಗಿ ವಿದ್ಯಾರ್ಥಿಗಳು ಭಾಗವಹಿಸಬೇಕು. ಇದ–ರಿಂದ ಯಾವುದೇ ವಿನಾಯಿತಿಯನ್ನು ನೀಡಲಾಗುವುದಿಲ್ಲ.ಇದಕ್ಕಾಗಿ ನೀವು ಹಾಜರಾತಿ ಪಡೆಯುತ್ತೀರಿ ಎಂದು ಕಾಲೇಜಿನ ಪ್ರತಿಯೊಂದು ತರಗತಿಯ ವಾಟ್ಸಪ್ ಗ್ರೂಪ್ನಲ್ಲೂ ಈ ಸಂದೇಶ ರವಾನೆಯಾಗಿದೆ.

ಅಲ್ಲದೇ, ಕಾಲೇಜಿನ ಆಡಳಿತ ಮಂಡಳಿಯ ಸೂಚನೆಯ ಹಿನ್ನೆಲೆಯಲ್ಲಿ ಪ್ರತಿಯೊಂದು ವಿಭಾಗದ ತರಗತಿಗಳಿಗೆ ತೆರಳಿ ಮೌಖಿಕವಾಗಿ ನಾಮಪತ್ರ ಸಲ್ಲಿಕೆ ಸಂದರ್ಭದಲ್ಲಿ ಹಾಜರಿರಬೇಕು ಎಂದು ಸೂಚನೆ ನೀಡಿರುವುದಕ್ಕೆ ಹಲವು ವಿದ್ಯಾರ್ಥಿಗಳು ಈ ಬಗ್ಗೆ ಸೋಷಿಯಲ್ ಮೀಡಿಯಾದಲ್ಲಿ ತಮ್ಮ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

## ಚಿತ್ರದುರ್ಗದಲ್ಲಿ ಬಿ.ಎನ್. ಚಂದ್ರಪ್ಪ 2 ಲಕ್ಷಕ್ಕೂ ಹೆಚ್ಚು ಅಂತರದಿಂದ ಗೆಲ್ಲುತ್ತಾರೆ: ಸಿಎಂ ಸಿದ್ಧರಾಮಯ್ಯ

ಚಿತ್ರದುರ್ಗ: ಆಪರೇಷನ್ ಕಮಲಕ್ಕೆ ಸಾವಿರಾರು ಕೋಟಿ ಎಲ್ಲಿಂದ ಬಂತು ಮಿಸ್ಟರ್ ಮೋದಿಯವರೇ? ಕಾಂಗ್ರೆಸ್ ಮತ್ತು ಬೇರೆ ಪಕ್ಷದ ಶಾಸಕರುಗಳಿಗೆ ಕೋಟಿ ಕೋಟಿ ಕೊಡುವುದಕ್ಕೆ ಸಾವಿರಾರು ಕೋಟಿ ಹಣ ಎಲ್ಲಿಂದ ಬಂತು. ಅದು ಕಪ್ಪು ಹಣ ಅಲ್ಲವೇ ದೇಶದ ಜನಕ್ಕೆ ಉತ್ತರಿಸಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆಗ್ರಹಿಸಿದರು.

ಚಿತ್ರದುರ್ಗ ಲೋಕಸಭಾ ಅಭ್ಯರ್ಥಿ ಚಂದ್ರಪ್ಪ ಅವರ ಪರವಾಗಿ ಆಯೋಜಿಸಿದ್ದ ಬೃಹತ್ ಬಹಿರಂಗ ಸಭೆಯನ್ನು ಉದ್ಘಾಟಿಸಿ ಮಾತನಾಡಿದರು.

ವಿದೇಶದಿಂದ ಕಪ್ಪು ಹಣ ತಂದು ಪ್ರತಿಯೊಬ್ಬ ಭಾರತೀಯನ ಕುಟುಂಬಕ್ಕೆ 15 ಲಕ್ಷ ರೂಪಾಯಿ ಕೊಡ್ತೀವಿ ಅಂ–ದ್ರಲ್ಲಾ ಕೊಟ್ರಾ? ರೈತರ ಆದಾಯ ದುಪ್ಪಟ್ಟು ಮಾಡ್ತೀವಿ ಅಂತ ಭಾಷಣ ಮಾಡಿದ್ರು. ಆದಾಯ ಒಂದು ರೂಪಾಯಿ ಕೂಡ ಹೆಚ್ಚಾಗಲಿಲ್ಲ. ವರ್ಷಕ್ಕೆ 2 ಕೋಟಿ ಉದ್ಯೋಗ ಸೃಷ್ಟಿ ಮಾಡ್ತೀವಿ ಅಂದ್ರಲ್ಲಾ? ಮಾಡಿದ್ರಾ ಮೋದಿಯವರೇ? ಎಂದು ಪ್ರಧಾನಿ ಮೋದಿ ಅವರನ್ನು ಪ್ರಶ್ನಿಸಿದರು.

ನಿಮ್ಮ ಕಾಲದಲ್ಲಿ ಆದ ಬೆಲೆ ಏರಿಕೆಯಿಂದ ಸಂಕಷ್ಟಕ್ಕೆ ಸಿಲುಕಿದ್ದ ಕುಟುಂಬಗಳಿಗೆ ಕೊಂಚ ನೆಮ್ಮದಿ ನೀಡಬೇಕು ಎನ್ನುವ ಕಾರಣದಿಂದ ಐದು ಗ್ಯಾರಂಟಿ ಜಾರಿ ಮಾಡಿದೆವು. ಪ್ರತೀ ಕುಟುಂಬಕ್ಕೆ 4 ರಿಂದ 6 ಸಾವಿರ ರೂಪಾಯಿ ಉಳಿತಾಯವಾಗಿ ನನ್ನ ಜನರ ಕೊಳ್ಳುವ ಶಕ್ತಿ ಹೆಚ್ಚಾಯಿತು. ಇದು ನಮ್ಮ ಸಾಧ್ಯವಾಗಿದ್ದು ಕಾಂಗ್ರೆಸ್ ಸರ್ಕಾರದಿಂದ ಮಿಸ್ಟರ್



ಮೋದಿಯವರೇ.

ಈ ದೇಶದ ಶೇ 95 ರಷ್ಟು ಬಹುಸಂಖ್ಯಾತ ಜನ ಸಮುದಾಯಕ್ಕೆ ಸಾಮಾಜಿಕ ನ್ಯಾಯ ಮತ್ತು ಸಮಾನ ಅವಕಾಶಗಳನ್ನು ಒದಗಿಸುತ್ತಿರುವುದು ನಮ್ಮ ಸಂವಿಧಾನ.

ಈ ಸಂವಿಧಾನವನ್ನು ಬದಲಾಯಿಸುತ್ತೀವಿ ಎನ್ನುವುದು ಬಿಜೆಪಿಯ ಅಜೆಂಡಾ. ಇದನ್ನು ಬಿಜೆಪಿ ಕೇಂದ್ರ ಸಚಿವರಾಗಿದ್ದವರೇ ಬಹಿರಂಗವಾಗಿ ಹೇಳಿದ್ದಾರೆ.

ಆದ್ದರಿಂದ ದೇಶದ ಸಂವಿಧಾನವನ್ನು ಬದಲಾಯಿಸಿ ಮನುಸ್ಮೃತಿ ಜಾ–ರಿಗೆ ತರಲು ಅವಕಾಶ ಕೊಡಬೇಡಿ ಎಂದರು.

ಅಧಿಕಾರದಲ್ಲಿದ್ದಾಗ ಹಣ ಲೂಟಿ ಮಾಡೋದು, ಆಮೇಲೆ ಜನರನ್ನು ಭಾವನಾತ್ಮಕವಾಗಿ ಕೆರಳಿಸಿ ಬಕ್ರಾ ಮಾಡೋದು ಅವರ ಅವಕಾಶ. ಚಿತ್ರದುರ್ಗದ ಬಿಜೆಪಿ ಅಭ್ಯರ್ಥಿ ಕಾರಜೋಳ ಅವರು ಇಲ್ಲಿಯವರಲ್ಲ. ಕಾಂಗ್ರೆಸ್ ಚಂದ್ರಪ್ಪ ಅವರು ಸೋತಾಗಲೂ ಜನರ ನಡುವೆ ಇದ್ದು ತಪಸ್ಸಿನಂತೆ ಜನರ ಸಮಸ್ಯೆಗಳಿಗೆ ಸ್ಪಂದಿಸಿದ್ದಾರೆ.

ಸಮಾಜ ಕಲ್ಯಾಣ ಸಚಿವರಾಗಿ ಕಾರಜೋಳ ಅವರು ಹಿಂದುಳಿದವರು, ದಲಿತರು, ಶ್ರಮಿಕರು, ದುಡಿಯುವ ವರ್ಗಗಳಿಗೆ ಏನೇನೂ ಮಾಡಿಲ್ಲ. ಕಾರಜೋಳ ಅವರ ಬಳಿ ಸಿಕ್ಕಾಪಟ್ಟೆ ಹಣ ಇರಬಹುದು.

ಆದರೆ ಚಂದ್ರಪ್ಪ ಅವರಲ್ಲಿ ಜನಸೇವೆ ಮಾಡುವ ಸಜ್ಜನಿಕೆ, ಕಾಳಜಿ ಇದೆ. ಆದ್ದರಿಂದ ಚಿತ್ರದುರ್ಗದ ಜನತೆ ಮಿಸ್ಟರ್ ಕಾರಜೋಳ್ ಪ್ಲೀಸ್ ಗೋ ಬ್ಯಾಕ್ ಎಂದು ಒಕ್ಕೊರಲಿನಿಂದ ಹೇಳಬೇಕು ಎಂದು ಕರೆ ನೀಡಿದರು.

ಇವತ್ತಿನವರೆಗೂ ಬಿಜೆಪಿ ರಾಜ್ಯದಲ್ಲಿ ಸ್ವಂತ ಶಕ್ತಿಯಿಂದ ಅಧಿಕಾರಕ್ಕೆ ಬಂದಿಲ್ಲ. ಎರಡೂ ಬಾರಿ ಹಿಂಬಾಗಿಲಿನಿಂದಲೇ ಅಧಿಕಾರಕ್ಕೆ ಬಂದಿದ್ದಾರೆ.

ವಾಮ ಮಾರ್ಗದ ಬಿಜೆಪಿಗೆ ನಾಡಿನ ಜನತೆ ತಕ್ಕ ಪಾಠ ಕಲಿಸಿದ್ದಾರೆ ಎಂದರು.

ಬಿಜೆಪಿ ರಾಜ್ಯಕ್ಕೆ ಮಾಡಿದ ದ್ರೋಹ ಒಂದೆರಡಲ್ಲ. ರಾಜ್ಯಕ್ಕೆ ಪ್ರವಾಹ ಬಂದಾಗ, ಬರಗಾಲ ಬಂದಾಗ ರಾಜ್ಯದ ಜನರ ಕಡೆ ತಿರುಗಿ ಕೂಡ ನೋಡಲಿಲ್ಲ.

ರಾಜ್ಯದ ಪಾಲಿನ ಬರಗಾಲದ ಅನುದಾನವನ್ನು ಒಂದು ರೂಪಾಯಿ ಕೂಡ ಕೊಡಲಿಲ್ಲ. ರಾಜ್ಯಕ್ಕೆ ಆದ ಅನ್ಯಾಯವನ್ನು ಬಿಜೆಪಿ ಸಂಸದರು ನೆಪಕ್ಕೂ ಪ್ರಶ್ನಿಸಲಿಲ್ಲ.

ರಾಜ್ಯದ ನೀರಾವರಿಗೆ ಹಣ ಕೊಡ್ತೀವಿ ಅಂತ ಕೇಂದ್ರ ಬಜೆಟ್ ನಲ್ಲೂ ಘೋಷಿಸಿದರು. ಅದರಲ್ಲಿ ಒಂದು ರೂಪಾಯಿಯನ್ನೂ ನಮ್ಮ ರಾಜ್ಯಕ್ಕೆ ಕೊಡಲಿಲ್ಲ.

ಮೇಲಿಂದ ಮೇಲೆ ರಾಜ್ಯಕ್ಕೆ ದ್ರೋಹ ಮಾಡುತ್ತಿರುವ ತಕ್ಕ ಪಾಠ ಕಲಿಸಿ ಎಂದರು.

ಸಚಿವರಾದ ಸತೀಶ್ ಜಾರಕಿಹೊಳಿ, ಡಿ.ಸುಧಾಕರ್, ಲೋಕಸಭಾ ಅಭ್ಯರ್ಥಿ ಚಂದ್ರಪ್ಪ, ದೆಹಲಿಯ ವಿಶೇಷ ಪ್ರತಿನಿಧಿ ಟಿ.ಬಿ.ಜಯಚಂದ್ರ, ಶಾಸಕರಾದ ಎನ್.ವೈ.ಗೋಪಾಲಕೃಷ್ಣ, ರಘುಮೂರ್ತಿ, ವೀರೇಂದ್ರ ಪಪ್ಪಿ, ಪಾವಗಡ ವೆಂಕಟೇಶ್, ಗೋವಿಂದಪ್ಪ, ಬಸಂತಪ್ಪ ಸೇರಿ ಚಿತ್ರದುರ್ಗ ದಾವಣಗೆರೆ ಜಿಲ್ಲೆಯ ಶಾಸಕರುಗಳು, ಮಾಜಿ ಶಾಸಕರುಗಳು ಹಾಗೂ ಜಿಲ್ಲೆ ಮತ್ತು ತಾಲ್ಲೂಕು , ಬ್ಲಾಕ್ ಮುಖಂಡರುಗಳು ಉಪಸ್ಥಿತರಿದ್ದರು.

# ರಾಜ್ಯದಲ್ಲಿ ಮೊದಲ ಹಂತದ ನಾಮಪತ್ರ ಸಲ್ಲಿಕೆ ಅಂತ್ಯ

ಬೆಂಗಳೂರು: ಪ್ರಸಕ್ತ ಲೋಕಸಭಾ ಸಾರ್ವತ್ರಿಕ ಚುನಾವಣೆಯ ರಾಜ್ಯದ ಮೊದಲ ಹಂತದ 14 ಕ್ಷೇತ್ರಗಳಿಗೆ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಗುರುವಾರಮುಕ್ತಾಯವಾಗಿದ್ದು, ರಾಜಕೀಯ ಪಕ್ಷಗಳ ಪ್ರಚಾರದ ಅಬ್ಬರ ಪ್ರಾರಂಭವಾಗಿದೆ. ನಾಮಪತ್ರ ಸಲ್ಲಿಕೆಗೆ ಕಡೆ ದಿನವಾದ ಇಂದು ಬಹುತೇಕ ಎಲ್ಲಾ ಅಭ್ಯರ್ಥಿಗಳು ತನ್ನ ಉಮೇದುವಾರಿಕೆಯನ್ನು ಸಲ್ಲಿಸಿದರು.

ರೋಡ್ ಶೋ, ಬಹಿರಂಗ ಸಮಾವೇಶಗಳ ಮೂಲಕ ಚುನಾವಣೆಯ ಕಣ ರಂಗೇರಿತ್ತು. ಕೊನೆ ದಿನವಾದ್ದ-ರಿಂದ ನಾಮಪತ್ರಗಳ ಸಲ್ಲಿಕೆಗಳ ಭರಾಟೆಯೂ ಜೋರಾಗಿತ್ತು. ಉಡುಪಿ-ಚಿಕ್ಕಮಗಳೂರು, ಹಾಸನ, ದಕ್ಷಿಣ ಕನ್ನಡ, ಚಿತ್ರದುರ್ಗ, ತುಮಕೂರು, ಮಂಡ್ಯ, ಮೈಸೂರು, ಚಾಮರಾಜನಗರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ಉತ್ತರ, ಬೆಂಗಳೂರು ಕೇಂದ್ರ, ಬೆಂಗಳೂರು ದಕ್ಷಿಣ, ಚಿಕ್ಕಬಳ್ಳಾಪುರ ಹಾಗೂ ಕೋಲಾರ ಲೋಕಸಭಾ ಕ್ಷೇತ್ರಗಳಿಗೆ ಇಂದು ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಮುಕ್ತಾಯಗೊಂಡಿದೆ.

ಸಲ್ಲಿಕೆಯಾದ ನಾಮಪತ್ರಗಳ ಪರಿಶೀಲನೆ ನಾಳೆ ನಡೆಯಲಿದ್ದು, ಸಂಜೆ ವೇಳೆಗೆ ಕ್ರಮಬದ್ಧವಾದ ಹಾಗೂ ನಾಮಪತ್ರಗಳ ಪ್ರಕಟಣೆ ಮಾಡಲಾಗುತ್ತದೆ.

ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ, ಜಯದೇವ ಹೃದ್ರೋಗ ಆಸ್ಪತ್ರೆಯ ನಿವೃತ್ತ ನಿರ್ದೇಶಕ ಡಾ.ಸಿ.ಎನ್.ಮಂಜುನಾಥ್, ಮಾಜಿ ಸಂಸದ ಎಸ್.ಪಿ.ಮುದ್ದಹನುಮೇಗೌಡ, ಸಂಸದರಾದ ಪ್ರಜ್ವಲ್ ರೇವಣ್ಣ , ತೇಜಸ್ವಿ ಸೂರ್ಯ, ಮಾಜಿ ಉಪಮುಖ್ಯಮಂತ್ರಿ ಗೋವಿಂದ ಕಾರಜೋಳ, ಮಾಜಿ ಸಚಿವ ಡಾ.ಕೆ.ಸುಧಾಕರ್, ಕ್ಯಾಪ್ಟನ್ ಬ್ರಿಜೇಶ್ ಚೌಟ, ಎಂ.ಮಲ್ಲೇಶ್ ಬಾಬು ಸೇರಿದಂತೆ ಹಲವರು ಇಂದು ತಮ್ಮ ಉಮೇದುವಾರಿಕೆಯನ್ನು ಸಲ್ಲಿಸಿದ್ದಾರೆ.

ನಾಮಪತ್ರ ಸಲ್ಲಿಕೆಗೂ ಮುನ್ನ ಕೆಲವು ಅಭ್ಯರ್ಥಿಗಳು ದೇವಾಲಯಗಳಿಗೆ ತೆರಳಿ ವಿಶೇಷ ಪೂಜೆ ಸಲ್ಲಿಸಿದರು. ಮತ್ತೆ ಕೆಲವರು ರೋಡ್ ಶೋ ನಡೆಸುವ ಮೂಲಕ ಶಕ್ತಿ ಪ್ರದರ್ಶನ ಮಾಡಿದರು.ಕಾಂಗ್ರೆಸ್, ಬಿಜೆಪಿ, ಜೆಡಿ-ಎಸ್ ಅಭ್ಯರ್ಥಿಗಳು ಸೇರಿದಂತೆ ರಾಜಕೀಯ ಪಕ್ಷಗಳ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸುವ ವೇಳೆ ಆಯಾ ಪಕ್ಷಗಳ ನಾಯಕರು ಮತ್ತು ಮುಖಂಡರು ಉಪಸ್ಥಿತ-ರಿದ್ದರು.

ನಾಮಪತ್ರ ಸಲ್ಲಿಸಿದ ಬಳಿಕ ಕೆಲವರು ಕ್ಷೇತ್ರಗಳಲ್ಲಿ ಸಾರ್ವಜನಿಕ ಸಮಾವೇಶಗಳನ್ನು ನಡೆಸಿ ಅಭ್ಯರ್ಥಿಗಳ ಪರ ಪ್ರಚಾರ ಹಾಗೂ ಮತ ಯಾಚನೆ ಮಾಡಲಾಯಿತು. ಈಗಾಗಲೇ ನಾಮಪತ್ರ ಸಲ್ಲಿಸಿದ್ದ ಕೆಲವು ಅಭ್ಯರ್ಥಿಗಳು ಅಬ್ಬರದ ರೋಡ್ ಶೋ ನಡೆಸಿ, ಶಕ್ತಿ ಪ್ರದರ್ಶನ ಮಾಡಿ ಮತ್ತೆ ನಾಮಪತ್ರ ಸಲ್ಲಿಸಿದರೆ, ಮತ್ತೆ ಕೆಲವರು ಸಾಂಕೇತಿ-ಕವಾಗಿ ನಾಮಪತ್ರ ಸಲ್ಲಿಕೆ ಮಾಡಿದರು.



ಮಂಡ್ಯ ಲೋಕಸಭಾ ಕ್ಷೇತ್ರದ ಎನ್ಡಿಎ ಅಭ್ಯರ್ಥಿಯಾಗಿ ಕುಮಾರಸ್ವಾಮಿ ನಾಮಪತ್ರ ಸಲ್ಲಿಸಿದರು. ಈ ಸಂದರ್ಭದಲ್ಲಿ ಗೋವಾ ಮುಖ್ಯಮಂತ್ರಿ ಪ್ರಮೋದ್ ಸಾವಂತ್, ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಮೈಸೂರು ಬಿಜೆಪಿ ಅಭ್ಯರ್ಥಿ ಯದುವೀರ್ ಕೃಷ್ಣ ರಾಜದತ್ತ ಒಡೆಯರ್ ಸೇರಿದಂತೆ ಬಿಜೆಪಿ-ಜೆಡಿಎಸ್ನ ಪ್ರಮುಖ ನಾಯಕರು ಉಪಸ್ಥಿತರಿದ್ದರು. ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿ ಡಾ.ಸಿ.ಎನ್.ಮಂಜುನಾಥ್, ರಾಮನಗರ ಜಿಲ್ಲಾಕಾರಿ ಅವಿನಾಶ್ ಮೆನನ್ ಅವರಿಗೆ ತಮ್ಮ ಉಮೇದುವಾರಿಕೆಯನ್ನು ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಂಜುನಾಥ್‌ರವರ ಪತ್ನಿ ಅನಸೂಯ, ಶಾಸಕರಾದ ಡಾ.ಸಿ.ಎನ್.ಅಶ್ವತ್ಥ ನಾರಾಯಣ, ಮುನಿರತ್ನ, ಎಂ.ಕೃಷ್ಣಪ್ಪ ಮತ್ತಿತರರು ಉಪಸ್ಥಿತರಿದ್ದರು.ಈಗಾಗಲೇ ಉಮೇದುವಾರಿಕೆಯನ್ನು ಸಲ್ಲಿಸಿದ್ದ ಡಿ.ಕೆ.ಸುರೇಶ್‌ರವರೂ ಸಹ ಇಂದು ಮತ್ತೊಮ್ಮೆ ಈ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿ ನಾಮಪತ್ರವನ್ನು ಸಲ್ಲಿಸಿದರು.

ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿ ಮಾಜಿ ಸಚಿವ ಡಾ.ಕೆ.ಸುಧಾಕರ್, ಶಾಸಕ ಎಸ್.ಆರ್‌ವಿಶ್ವನಾಥ್ ಸೇರಿದಂತೆ ಪಕ್ಷದ ಮುಖಂಡರೊಂದಿಗೆ ತಮ್ಮ ಉಮೇದುವಾರಿಕೆಯನ್ನು ಸಲ್ಲಿಸಿದರು.

ಸಂಸದ ತೇಜಸ್ವಿ ಸೂರ್ಯ ಅವರು ಮಾಜಿ ಸಚಿವರಾದ ವಿ.ಸುನೀಲ್‌ಕುಮಾರ್, ಎಸ್.ಸುರೇಶ್ ಕುಮಾರ್, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್‌ರೊಂದಿಗೆ ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿ ತಮ್ಮ ಉಮೇದುವಾರಿಕೆ ಸಲ್ಲಿಸಿದರು.

ಇದೇ ಕ್ಷೇತ್ರದಿಂದ ಕನ್ನಡ ಹೋರಾಟಗಾರ ವಾಟಾಳ್ ನಾಗರಾಜ್ ಅವರೂ ಸಹ ತಮ್ಮ ಉಮೇದುವಾರಿಕೆಯನ್ನು ಇಂದು ಸಲ್ಲಿಸಿದರು. ಮಾಜಿ ಉಪಮುಖ್ಯಮಂತ್ರಿ ಗೋವಿಂದ ಕಾರಜೋಳ ಅವರು ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿ ಹಾಗೂ ಕಾಂಗ್ರೆಸ್ ಅಭ್ಯರ್ಥಿಯಾಗಿ ಬಿ.ಎನ್.ಚಂದ್ರಪ್ಪ ನಾಮಪತ್ರ ಸಲ್ಲಿಸಿದರು. ಈ ಸಂದರ್ಭದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಬಿ.ಶ್ರೀರಾಮುಲು, ಜೆ.ಸಿ.ಮಾಧುಸ್ವಾಮಿ ಉಪಸ್ಥಿತರಿದ್ದರು. ಈಗಾಗಲೇ ತಮ್ಮ ಉಮೇದುವಾರಿಕೆ ಸಲ್ಲಿಸಿರುವ ಪ್ರಜ್ವಲ್ ರೇವಣ್ಣ ಅವರು ಹಾಸನ ಲೋಕಸಭಾ ಕ್ಷೇತ್ರದ ಜೆಡಿಎಸ್ ಅಭ್ಯರ್ಥಿಯಾಗಿ ಇಂದು ನಾಮಪತ್ರ ಸಲ್ಲಿಸಿದರು.

ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು, ಮಾಜಿ ಸಚಿವ ಎಚ್.ಡಿ.ರೇವಣ್ಣ ಹಾಗೂ ಅವರ ಪತ್ನಿ ಭವಾನಿ ರೇವಣ್ಣ ಮತ್ತಿತರರು ಉಪಸ್ಥಿತರಿದ್ದರು. ತುಮಕೂರು ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮಾಜಿ ಸಂಸದ ಎಸ್.ಪಿ.ಮುದ್ದಹನುಮೇಗೌಡ ನಾಮಪತ್ರ ಸಲ್ಲಿಸಿದರು. ಈ ವೇಳೆ ಸಚಿವರಾದ ಡಾ.ಜಿ.ಪರಮೇಶ್ವರ್, ಕೆ.ಎನ್.ರಾಜಣ್ಣ ಹಾಜರಿದ್ದರು.

ಕೋಲಾರ ಕಾಂಗ್ರೆಸ್ ಅಭ್ಯರ್ಥಿ ಕೆ.ವಿ.ಗೌತಮ್ ಅವರು ತಮ್ಮ ಉಮೇದುವಾರಿಕೆ ಸಲ್ಲಿಸಿದರು.ಮಾ.28 ರಿಂದ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಆರಂಭಗೊಂಡಿದ್ದು, ನಿನ್ನೆಯವರೆಗೆ ಒಟ್ಟು 199 ಅಭ್ಯರ್ಥಿಗಳು 268 ನಾಮಪತ್ರ ಸಲ್ಲಿಸಿದ್ದಾರೆ.184 ಪುರುಷ ಹಾಗೂ 15 ಮಹಿಳಾ ಅಭ್ಯರ್ಥಿಗಳು ತಮ್ಮ ಉಮೇದುವಾರಿಕೆ ಸಲ್ಲಿಸಿದ್ದಾರೆ.

ಬಿಜೆಪಿ 24, ಕಾಂಗ್ರೆಸ್ 29, ಬಿಎಸ್ಪಿ 13, ಸಿಪಿಐಎಂ 1, ಜೆಡಿಎಸ್ 2, ಪಕ್ಷೇತರ 109 , ನೋಂದಾಯಿತ ಮತ್ತು ನೋಂದಾವಣೆಯಾಗದ ಪಕ್ಷಗಳ ಅಭ್ಯರ್ಥಿಗಳಿಂದ 90 ಸೇರಿದಂತೆ ಒಟ್ಟು 268 ನಾಮಪತ್ರಗಳು ಸಲ್ಲಿಕೆಯಾಗಿದ್ದವು.

## ಲೋಕಸಭಾ ಚುನಾವಣಾ ಪ್ರಚಾರಕ್ಕೆ ಹೆಲಿಕಾಪ್ಟರ್‌ಳಿಗೆ ಭಾರಿ ಬೇಡಿಕೆ




ಬೆಂಗಳೂರು: ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ರಾಜಕೀಯ ಪಕ್ಷಗಳಲ್ಲಿ ಬಿರುಸಿನ ಚಟುವಟಿಕೆಗಳು ಕಂಡುಬರುತ್ತಿದ್ದರೆ, ಮತ್ತೊಂದೆಡೆ ಪ್ರಚಾರ ಕಾರ್ಯಕ್ಕಾಗಿ ಹೆಲಿಕಾಪ್ಟರ್‌ಗಳಿಗೆ ಬೇಡಿಕೆ ಹೆಚ್ಚುತ್ತಿದೆ.

ರಾಜಕೀಯ ಪಕ್ಷಗಳು ತಮ್ಮ ಉನ್ನತ ನಾಯಕರು, ತಾರಾ ಪ್ರಚಾರಕರನ್ನು ಕರೆದೊಯ್ಯುವುದಕ್ಕಾಗಿ ಹೆಲಿಕಾಪ್ಟರ್‌ಗಳನ್ನು ಬಾಡಿಗೆಗೆ ಪಡೆಯುತ್ತವೆ. ಸಿಂಗಲ್ ಇಲ್ಲವೇ ಡಬಲ್ ಎಂಜಿನ್ ಚಾಲಿತ ಹೆಲಿಕಾಪ್ಟರ್‌ಗಳು, ಮೂರು, ಆರು ಅಥವಾ ಎಂಟರಿಂದ ಹಿಡಿದು 11 ಆಸನಗಳ ಸಾಮರ್ಥ್ಯದ ಹೆಲಿಕಾಪ್ಟರ್‌ಗಳನ್ನು ಬಾಡಿಗೆ ಪಡೆಯಲಾಗುತ್ತದೆ' ಎಂದು ಇವೇ ಮೂಲಗಳು ಹೇಳಿವೆ. ಬೆಲ್, ಯುರೋಕಾಪ್ಟರ್, ಡಾಫಿನ್, ರಾಬಿನ್‌ಸನ್, ಸಿಕೋರ್‌ಸ್ಕೈ, ಆಗಸ್ಟ್, ಹೆಲಿಕಾಪ್ಟರ್ ತಯಾರಿಸುವ ಪ್ರಮುಖ ಕಂಪನಿಗಳಾಗಿವೆ. ಸದ್ಯ ಲಭ್ಯವಿರುವ ಮಾಹಿತಿ ಪ್ರಕಾರ, ಹೆಲಿಕಾಪ್ಟರ್‌ಗಳ ಮಾದರಿ, ಅದನ್ನು ತಯಾರಿಸಿದ ಕಂಪನಿ ಆಧಾರದ ಮೇಲೆ ಪ್ರತಿ ಗಂಟೆಗೆ 3 ಲಕ್ಷದಿಂದ 5 ಲಕ್ಷ ಬಾಡಿಗೆ ವಿಧಿಸಲಾಗುತ್ತಿದೆ ಎಂದು ಹೆಲಿಕಾಪ್ಟರ್‌ಗಳನ್ನು ಬಾಡಿಗೆ ನೀಡುವ ಕಂಪನಿಯೊಂದರ ಮೂಲಗಳು ಹೇಳಿವೆ.

ಈಗಾಗಲೇ 150 ಹೆಲಿಕಾಪ್ಟರ್ ಹಾಗೂ ಮಿನಿ ವಿಮಾನ ಬುಕ್ ಆಗಿವೆ. ಹೆಲಿಕಾಪ್ಟರ್ಗಳ ಬಾಡಿಗೆ ದರದಲ್ಲಿ ಶೇ 20ರಿಂದ 30ರಷ್ಟು ಹೆಚ್ಚಾದರೂ ರಾಜಕೀಯ ನಾಯಕರು ತಲೆಕೆಡಿಸಿಕೊಳ್ಳಲ್ಲ. ಆದರೆ ಹೆಲಿಕಾಪ್ಟರ್ ಬಾಡಿಗೆ ಕೇಳಿದರೆ ನೀವು ಶಾಕ್ ಆಗ್ತಿರಾ,

2 ಸೀಟ್ನ ಹೆಲಿಕಾಪ್ಟರ್ ಗಂಟೆಗೆ 2.10 ಲಕ್ಷ ರೂ.
4 ಆಸನದ ಹೆಲಿಕಾಪ್ಟರ್ ಗಂಟೆಗೆ 2.50 ಲಕ್ಷ ರೂ.
6 ಆಸನದ ಮಿನಿ ವಿಮಾನ ಗಂಟೆಗೆ 3 ಲಕ್ಷ ರೂ.
8 ಆಸನದ ಮಿನಿ ವಿಮಾನ ಗಂಟೆಗೆ 3.5 ಲಕ್ಷ ರೂ.
13 ಆಸನದ ಮಿನಿ ವಿಮಾನ ಗಂಟೆಗೆ 4 ಲಕ್ಷ ರೂ.ಆಗಿದೆ.

## ಎಸ್‌ಎಸ್‌ಎಲ್ಸಿ ಪರೀಕ್ಷೆ ಹಿಂದಿ ಹಾಗೂ ಎನ್‌ಎಸ್ಕ್ಯೂಎಫ್ ಪರೀಕ್ಷೆಗೆ 28,071 ವಿದ್ಯಾರ್ಥಿಗಳು ಹಾಜರು: 366 ಗೈರು

ಧಾರವಾಡ: ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಗಳು ಉತ್ತಮ ರೀತಿಯಲ್ಲಿ ನಡೆದಿದ್ದು, ಇಂದಿನ ಹಿಂದಿ (ತೃತೀಯ ಭಾಗಫ) ಹಾಗೂ ಎನ್.ಎಸ್.ಕ್ಯೂ.ಎಫ್ ವಿಷಯಗಳ ಪರೀಕ್ಷೆಗೆ ಜಿಲ್ಲೆಯ ಪರೀಕ್ಷಾ ಕೇಂದ್ರಗಳಿಗೆ 28,071 ವಿದ್ಯಾರ್ಥಿಗಳು ಹಾಜರಾಗಿದ್ದರು. ಮತ್ತು ವಿವಿಧ ಪರೀಕ್ಷಾ ಕೇಂದ್ರಗಳಲ್ಲಿ 366 ವಿದ್ಯಾರ್ಥಿಗಳು ಗೈರು ಹಾಜರಾಗಿದ್ದರು ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಸ್.ಎಸ್. ಕೆಳದಿಮಠ ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಜಿಲ್ಲೆಯ 7 ತಾಲೂಕುಗಳ 101 ಪರೀಕ್ಷಾ ಕೇಂದ್ರಗಳಲ್ಲಿ ನಿಯಮಾನುಸಾರ ಪರೀಕ್ಷೆ ನಡೆದಿವೆ. ಜಾಗೃತ ದಳದ ಅಧಿಕಾರಿಗಳು ನಕಲು ತಡೆಯಲು ಉತ್ತಮ ತಪಾಸಣೆ ಕೈಗೊಂಡಿದ್ದಾರೆ ಎಂದು ಅವರು ತಿಳಿಸಿದ್ದಾರೆ.

## ಕನ್ನಡಿಗರ ನಾಡಿಮಿಡಿತ ಅಮಿತ್ ಶಾಗೆ ಗೊತ್ತಿಲ್ಲ: ಡಿ.ಕೆ. ಸುರೇಶ್

ರಾಮನಗರ: ಬೆಂಗಳೂರು ಗ್ರಾಮಾಂತರ ಕ್ಷೇತ್ರದ ಕಾಂಗ್ರೆಸ್ ಲೋಕಸಭಾ ಅಭ್ಯರ್ಥಿ ಡಿ.ಕೆ. ಸುರೇಶ್ ಗುರುವಾರ ತಮ್ಮ ಉಮೇದುವಾರಿಕೆಯನ್ನು ಘೋಷಿಸಿ ನಾಮಪತ್ರ ಸಲ್ಲಿಸಿದರು. ಈ ವೇಳೆ ಮಾತನಾಡಿದ ಅವರು, ಅಮಿತ್ ಶಾ ಅವರಿಗೆ ಕನ್ನಡಿಗರ, ಕರ್ನಾಟಕದ, ಕನ್ನಡ ಭಾಷೆಯ ನಾಡಿ ಮಿಡಿತ ಗೊತ್ತಿಲ್ಲ. ಹೀಗಾಗಿ ತಮ್ಮ ಅಭ್ಯರ್ಥಿ ಗೆಲ್ಲುವುದಾಗಿ ಹೇಳಿಕೆ ನೀಡಿದ್ದಾರೆ ಎಂದು ಟೀಕಿಸಿದರು.



ಇಂದು ದಿನ, ಘಳಿಗೆ ಚೆನ್ನಾಗಿದೆ. ಹೀಗಾಗಿ ಇಂದು ನಾಮಪತ್ರ ಸಲ್ಲಿಸಿದ್ದೇನೆ. ಇದೇ ವೇಳೆ ಬಿಜೆಪಿ ಅಭ್ಯರ್ಥಿ ಡಾ. ಮಂಜುನಾಥ್ ಕೂಡ ಎದುರಾದರು. ಅವರಿಗೆ ಆಲ್ ದ ಬೆಸ್ಟ್ ಎಂದು ಶುಭ ಕೋರಿದೆ ಎಂದು ಡಿ.ಕೆ. ಸುರೇಶ್ ಹೇಳಿದರು. ಇಂದೇ ನಾಮಪತ್ರ ಸಲ್ಲಿಸಿದ್ದೇನೆ. ಇನ್ನೂ ಚುನಾವಣಾ ಪ್ರಚಾರ ಪ್ರಾರಂಭಿಸಿಲ್ಲ. ನನ್ನ ಪ್ರಕಾರ ಕಾಂಗ್ರೆಸ್ ಪಕ್ಷಕ್ಕೆ ಚುನಾವಣಾ ಪ್ರಚಾರವೇ ಬೇಕಿಲ್ಲ ಎಂದು ಸುರೇಶ್ ವಿಶ್ವಾಸ ವ್ಯಕ್ತಪಡಿಸಿದರು.

ಬೆಂಗಳೂರು ಗ್ರಾಮಾಂತರ ಕ್ಷೇತ್ರವನ್ನೇ ಟಾರ್ಗೆಟ್ ಮಾಡಿಕೊಳ್ಳಲಾಗಿದೆಯೇ? ಎಂಬ ಪ್ರಶ್ನೆಗೆ ಉತ್ತರಿಸಿದ ಡಿ.ಕೆ ಸುರೇಶ್, ಕೇಂದ್ರ ಗೃಹಸಚಿವ ಅಮಿತ್ ಶಾ, ಚನ್ನಪಟ್ಟಣದಿಂದ ಚುನಾವಣಾ ಪ್ರಚಾರ ಆರಂಭಿಸಿದ್ದಾರೆ. ಈ ಪ್ರಶ್ನೆಯನ್ನು ನೀವು ಅವರಲ್ಲಿ ಕೇಳಬೇಕು ಎಂದು ಉತ್ತರ ನೀಡಿದರು.

## ಧಾರವಾಡ ಲೋಕಸಭಾ ಸಾರ್ವತ್ರಿಕ ಎಂಸಿಸಿ ತಪಾಸಣೆಯಲ್ಲಿ ವಶಕ್ಕೆ ಪಡೆದ ಹಣ ಬಿಡುಗಡೆಗೆ ಅಗತ್ಯ ದಾಖಲೆ ಪಡೆದು ಕ್ರಮವಹಿಸಲು ಜಿಲ್ಲಾ ಮಟ್ಟದ ಕ್ಯಾಶ್ ರಿಲೀಜ್ ಕಮಿಟಿ ರಚನೆ: ಡಿಸಿ ದಿವ್ಯ ಪ್ರಭು

ಧಾರವಾಡ: ರಾಜ್ಯ ಮುಖ್ಯ ಚುನಾವಣಾಧಿಕಾರಿಗಳ ನಿರ್ದೇಶನದಂತೆ ಮಾದರಿ ನೀತಿ ಸಂಹಿತೆ ಜಾರಿ ಇರುವ ಸಂದರ್ಭದಲ್ಲಿ ಚೆಕ್ಪೋಸ್ಟ್ ಹಾಗೂ ಇತರ ಸ್ಥಳಗಳಲ್ಲಿನ ತಪಾಸಣೆಯಲ್ಲಿ ದಾಖಲೆ ಹೊಂದಿರದ ಹಣವನ್ನು ವಶಕ್ಕೆ ಪಡೆದು ಸೀಜ್ ಮಾಡಲಾಗುತ್ತದೆ. ಸಂಬಂಧಿಸಿದವರು ಸೀಜ್ ಮಾಡಿದ ಹಣಕ್ಕೆ ಅಗತ್ಯ ದಾಖಲೆಗಳನ್ನು ಸಲ್ಲಿಸಿದರೇ, ಪರಿಶೀಲಿಸಿ ಸದರಿ ಹಣ ಬಿಡುಗಡೆ ಮಾಡಲು ಜಿಲ್ಲಾಮಟ್ಟದ ಕ್ಯಾಶ್ ರಿಲೀಜ್ ಕಮಿಟಿಯನ್ನು ರಚಿಸಿ, ಜಿಲ್ಲಾ ಚುನಾವಣಾ ಅಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಆದೇಶ ಹೊರಡಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಜಿಲ್ಲಾ ಮಾದರಿ ನೀತಿ ಸಂಹಿತೆ ನೋಡಲ್ ಅಧಿಕಾರಿ ಆಗಿರುವ ಕೈಮಗ್ಗ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕಿ ಮೋನಾ ರೋತ್ (85279819880) ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಕ್ಯಾಶ್ ರಿಲೀಜ್ ಕಮಿಟಿ ರಚಿಸಲಾಗಿದೆ. ಮತ್ತು ಈ ಕಮಿಟಿ ಸಂಚಾಲಕರಾಗಿ ಚುನಾವಣಾ ವೆಚ್ಚದ ಉಸ್ತುವಾರಿ ಜಿಲ್ಲಾ ನೋಡಲ್



ಅಧಿಕಾರಿ ಆಗಿರುವ ಎಚ್.ಡಿ.ಎಂ.ಸಿ.ಯ ಮುಖ್ಯ ಲೆಕ್ಕಾಧಿಕಾರಿ ವಿಶ್ವನಾಥ ಪಿ.ಬಿ. (9844679079) ಹಾಗೂ ಜಿಲ್ಲಾ ಖಜಾನೆ ಅಧಿಕಾರಿ ವೈ.ವೈ ಹೊನ್ನಳ್ಳಿ (0836-2448251, 9449739914) ಅವರು ಸದಸ್ಯರಾಗಿದ್ದಾರೆ.

ಮಾದರಿ ನೀತಿ ಸಂಹಿತೆ ಉಲ್ಲಂಘನೆಯ ಪ್ರಕರಣಗಳಲ್ಲಿ ವಶಪಡಿಸಿಕೊಂಡಿದ್ದ ಹಣ-ಕ್ಕೆ ದಾಖಲೆಯೊಂದಿಗೆ ಮನವಿ ಸಲ್ಲಿಸದಲ್ಲಿ ಅದನ್ನು ಕೂಲಂಕುಷವಾಗಿ ಪರಿಶೀಲಿಸಿ,

ನೀತಿ ಸಂಹಿತೆ ಉಲ್ಲಂಘನೆಗೆ ಇದು ಒಳಪಡುವುದಿಲ್ಲ ಎಂಬುವುದನ್ನು ಖಾತರಿ ಮಾಡಿಕೊಂಡು ಜಿಲ್ಲಾ ಕ್ಯಾಶ್ ರಿಲೀಜ್ ಕಮಿಟಿ ಹಣ ಮರಳಿ ನೀಡಲು ಕ್ರಮಕೈಗೊಳ್ಳುತ್ತದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ತಿಳಿಸಿದ್ದಾರೆ.

## ಸಿರುಗುಪ್ಪ: ಮತದಾನ ಜಾಗೃತಿಗೆ ಸೈಕಲ್ ಜಾಥಾ




ಬಳ್ಳಾರಿ: ಜಿಲ್ಲಾ ಚುನಾವಣಾಧಿಕಾರಿಗಳ ಕಚೇರಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಸ್ವೀಪ್ ಸಮಿತಿ ಮತ್ತು ಸಿರುಗುಪ್ಪ ತಾಲ್ಲೂಕು ಆಡಳಿತ, ನಗರಸಭೆ ಕಾರ್ಯಾಲಯ, ತಾಲ್ಲೂಕು ಪಂಚಾಯಿತಿ ಇವರ ಸಹಯೋಗದಲ್ಲಿ ಲೋಕಸಭಾ ಸಾರ್ವತ್ರಿಕ ಚುನಾವಣೆ ಅಂಗವಾಗಿ ಮತದಾನದ ಮಹತ್ವ ಸಾರಲು ಗುರುವಾರ ಪಟ್ಟದದಲ್ಲಿ ಸೈಕಲ್ ಜಾಥಾ ಹಮ್ಮಿಕೊಳ್ಳಲಾಯಿತು.

ನಮ್ಮ ಮತ ನಮ್ಮ ಭವಿಷ್ಯವಾಗಿದ್ದು, ನಮ್ಮ ಮತ ಮಾರಾಟಕ್ಕಾಗಿ ಇರುವುದಿಲ್ಲ, ನಿಮ್ಮ ಮತದಾನವೇ ನಿಮ್ಮ ಧ್ವನಿ, ಯಾವುದೇ ಆಮಿಷಕ್ಕೆ ಒಳಗಾಗದೆ ನ್ಯಾಯ ಸಮ್ಮತವಾಗಿ ಮತ ಚಲಾಯಿಸಿ ಎನ್ನುವ ಭಿತ್ರಿ ಪತ್ರಗಳನ್ನೊಳಗೊಂಡ ಫಲಕಗಳನ್ನು ಹಿಡಿದು, ಘೋಷಣೆ ಕೂಗುತ್ತಾ ಪಟ್ಟಣದ ವಿವಿಧೆಡೆ ಸಂಚರಿಸಿ ಮೂಲಕ ಸಾರ್ವಜನಿಕರು ಮತದಾನದಿಂದ ಹೊರಗುಳಿಯಬಾರದು ಎಂದು ಮತದಾನ ಅರಿವು ಮೂಡಿಸಲಾಯಿತು.

ಬಳಿಕ ಮತದಾನ ಕುರಿತು ಸಾರ್ವಜನಿಕರಿಗೆ ಜಾಗೃತಿ ಮೂಡಿಸುವ "ನಾನು ಹೆಮ್ಮೆಯ ಮತದಾರ" ಎನ್ನುವ ಸೆಲ್ಫಿ ಬೂತ್ ಹಾಕಲಾಗಿತ್ತು. ಅಧಿಕಾರಿಗಳು, ಸಾರ್ವಜನಿಕರು ಸೆಲ್ಫಿ ಕ್ಲಿಕ್ಕಿಸಿಕೊಂಡು ಸಂಭ್ರಮಿಸಿದರು.

ಈ ಸಂದರ್ಭದಲ್ಲಿ ಸಿರುಗುಪ್ಪ ನಗರಸಭೆಯ ಪೌರಾಯುಕ್ತ ಗುರು ಪ್ರಸಾದ್, ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿ ಪವನ್ ಕುಮಾರ್.ಎಸ್ ದಂಡಪ್ಪನವರ ಸೇರಿದಂತೆ ತಾಲ್ಲೂಕು ವ್ಯಾಪ್ತಿಯ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು, ವಿವಿಧ ಸಂಘ ಸಂಸ್ಥೆಯ ಪದಾಧಿಕಾರಿಗಳು ಮತ್ತು ಸಾರ್ವಜನಿಕರು ಬಾಗವಹಿಸಿದ್ದರು.

## ಕುರುಗೋಡು: ಮದುವೆ ಮನೆಯಲ್ಲಿ ಮತದಾನ ಜಾಗೃತಿ

ಬಳ್ಳಾರಿ: ಲೋಕಸಭೆ ಸಾರ್ವತ್ರಿಕ ಚುನಾವಣೆ ನಿಮಿತ್ತ ಮತದಾನದ ಮಹತ್ವ ಸಾರಲು ವಿಭಿನ್ನವಾಗಿ ಕುರುಗೋಡು ತಾಲ್ಲೂಕಿನ ಬಾದನಹಟ್ಟಿ ಗ್ರಾಮದಲ್ಲಿ ಏಳುಬೆಂಚಿ ಗ್ರಾಪಂ ಸಿಬ್ಬಂದಿಯವರ ವಿವಾಹ ಸಮಾರಂಭದಲ್ಲಿ ನೆರೆದಿದ್ದ ಜನ ಸಮೂಹದಲ್ಲಿ ಕಡ್ಡಾಯವಾಗಿ ಮತದಾನ ಮಾಡುವಂತೆ ಕು-ರಿತು ಜಾಗೃತಿ ಮೂಡಿಸಿದ ಕಾರ್ಯ ವಿಶೇಷವಾಗಿ ಕಂಡುಬಂತು.

ಬಾದನಹಟ್ಟಿ ಗ್ರಾಮದಲ್ಲಿ ಗುರುವಾರ ನಡೆದ ಮದುವೆ ಸಮಾರಂಭದಲ್ಲಿ ಕುರುಗೋಡು ತಾಲ್ಲೂಕು ಸ್ವೀಪ್ ಸಮಿತಿ ನೋಡಲ್ ಅಧಿಕಾರಿ ಹಾಗೂ ತಾಪಂ ಇಒ ನಿರ್ಮಲಾ ಅವರ ನೇತೃತ್ವದಲ್ಲಿ ನಡೆದ ಮತದಾನ ಜಾಗೃತಿ ಕಾರ್ಯಕ್ರಮ ಎಲ್ಲರ ಗಮನ ಸೆಳೆಯಿತು.

ಮದುವೆ ಸಮಾರಂಭದಲ್ಲಿ 'ಚುನಾವಣಾ ಪರ್ವ ದೇಶದ ಗರ್ವ' ಚುನಾವಣಾ ಘೋಷಕ್ಯವುಳ್ಳ ಭಿತ್ತಿಪತ್ರಗಳನ್ನು ವಧು ವರರಿಗೆ ನೀಡಿ



ಮತದಾನ ಅರಿವು ಮೂಡಿಸಲಾಯಿತು. ಅಲ್ಲದೇ ಸಮಾರಂಭದಲ್ಲಿ ನೆರೆದಿದ್ದ ಸಾವಿರಾರು ಜನರಿಗೆ ಲೋಕಸಭಾ ಸಾರ್ವತ್ರಿಕ ಚುನಾವಣೆಯಲ್ಲಿ ತಪ್ಪದೇ ಮತದಾನ ಮಾಡುವಂತೆ ಜಾಗೃತಿ ಮೂಡಿಸಲಾಯಿತು.

ಬಳಿಕ ಮಾತನಾಡಿದ ತಾಲ್ಲೂಕು ಸ್ವೀಪ್ ಸಮಿತಿ ನೋಡಲ್ ಅಧಿಕಾರಿ ಹಾಗೂ ತಾಪಂ ಇಒ ನಿರ್ಮಲಾ ಅವರು, ಮತದಾನ ಪ್ರತಿ ಅರ್ಹ ವ್ಯಕ್ತಿಯ ಕರ್ತವ್ಯವಾಗಿದೆ.

ಎಲ್ಲರೂ ಮತದಾನ ಪ್ರಕ್ರಿಯೆಯಲ್ಲಿ ಭಾಗವಹಿಸುವ ಮೂಲಕ ಸಂವಿಧಾನದ ಆಶಯವನ್ನು ಎತ್ತಿಹಿಡಿಯಬೇಕು. ಮತದಾನ ಎಂಬುದು ಸಂವಿಧಾನ ನಮಗೆ ಕೊಟ್ಟ ಪರಮೋಚ್ಚ ಅಧಿಕಾರವಾಗಿದೆ. ಇದನ್ನು ಸರಿಯಾಗಿ ಬಳಸಿಕೊಂಡು ಅರ್ಹರನ್ನು ಚುನಾಯಿಸಬೇಕು ಎಂದು ಹೇಳಿದರು.

ಮತದಾರರು ಹಣ, ಉಡುಗೊರೆ ಆಮಿಷಗಳಿಗೆ ಬಲಿಯಾಗದೇ ಉತ್ತಮ ಅಭ್ಯರ್ಥಿಗೆ ಮತ ಚಲಾಯಿಸಬೇಕು. ಮತದಾನದ ದಿನ ರಜೆ ಮೇಲೆ ಯಾವುದೇ ಊರಿಗೆ ತೆರಳದೇ ಅಂ-ದು ಮತದಾನ ಮಾಡಬೇಕು ಎಂದು ಮದುವೆಗೆ ಬಂದ ಅಥಿತಿಗಳಿಗೆ ಜಾಗೃತಿ ಸಂದೇಶ ನೀಡಿದರು.

# ಕ್ಷೇತ್ರ ಅಭಿವೃದ್ಧಿಗೆ ಕೈ ಪಕ್ಷಕ್ಕೆ ಮತ ನೀಡಿ: ಕೈ ಅಭ್ಯರ್ಥಿ ನಿಂಬಾಳ್ಕರ್

ಶಿರಸಿ: ನಮ್ಮ ನೆಲ, ನಮ್ಮ ಜಲ ರಕ್ಷಣೆಯ ಜೊತೆಗೆ ನಮ್ಮ ಸಂಸ್ಕೃತಿಯನ್ನ ಜಗತ್ತಿಗೆ ಪರಿಚಯಿಸುವ ಕೆಲಸ ಮಾಡುವ ಹಂಬಲವಿದೆ; ಇದು ನನ್ನ ಗ್ಯಾರಂಟಿಯಾಗಿದ್ದು, ಇದಕ್ಕಾಗಿ ನಿಮ್ಮ ಆಶೀರ್ವಾದ ಬೇಕಿದೆ ಎಂದು ಉತ್ತರಕನ್ನಡ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಡಾ.ಅಂಜಲಿ ನಿಂಬಾಳ್ಕರ್ ಮನವಿ ಮಾಡಿದರು.

ಶಿರಸಿಯ ಅಂಬೇಡ್ಕರ್ ಭವನದಲ್ಲಿ ಹಮ್ಮಿಕೊಂಡಿದ್ದ ಬ್ಲಾಕ್ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ನಮ್ಮ ಜನರ ಜಮೀನು ನಮ್ಮವ-ರಿಗೇ ಸಿಗಬೇಕು. ಅವರಿಗೆ ಅವರ ಹಕ್ಕು ದೊರಕಿಸಿಕೊಡುವ ಕಾರ್ಯ ಮಾಡಬೇಕಿದೆ. ನಮ್ಮ ಜನರಿಗೆ ಉದ್ಯೋಗ ದೊರಕಬೇಕಿದೆ. ಉತ್ತರ ಕನ್ನಡದ ವಿವಿಧ ಸಂಸ್ಕೃತಿಗಳನ್ನ ರಾಷ್ಟ್ರ- ಅಂತರರಾಷ್ಟ್ರೀಯ ಮಟ್ಟಕ್ಕೆ ಪರಿಚಯಿಸುವ ಕಾರ್ಯವಾಗಬೇಕಿದೆ. ಆ ನಿಟ್ಟಿನಲ್ಲಿ ಕಾರ್ಯನಿರ್ವಹಿಸಲು ಈ ಸ್ಪರ್ಧೆಯಾಗಿದೆ ಎಂದರು.

ಇದು ಬಿಜೆಪಿ- ಕಾಂಗ್ರೆಸ್ ಚುನಾವಣೆಯಲ್ಲ, ಯಾರಿಗೂ ಅವಮಾನ ಮಾಡುವ ಚುನಾವಣೆಯಲ್ಲ. ಸೋಲು- ಗೆಲುವಿನ ಚುನಾವಣೆಯೂ ಅಲ್ಲ. ಬಡವರಿಗೆ ಆಗುತ್ತಿರುವ ಅನ್ಯಾಯಕ್ಕೆ ಸಂಸತ್ ನಲ್ಲಿ ಧ್ವನಿಯಾಗುವ ಚುನಾವಣೆ. ಜಿಲ್ಲೆಯ ಬಿಜೆಪಿ ಅಭ್ಯರ್ಥಿ ಆರು ಬಾರಿ ಗೆದ್ದು ಬಂದಿರುವವರು. ಅವರು ಹಿರಿಯರು, ಅವರ ಮುಂದೆ ನಾನು ತುಂಬಾ ಚಿಕ್ಕವಳು. ಆದರೆ 25 ವರ್ಷಗಳಿಂದ ಜನಸೇವೆ ಮಾಡಿಕೊಂಡು ಬಂದಿದ್ದೇನೆ. ಜನರ ಕಷ್ಟ- ಸುಖಗಳನ್ನ ಅರಿತಿದ್ದೇನೆ ಎಂದ ಅವರು, ಖಾನಾಪುರಕ್ಕೂ ಶಿರಸಿಗೂ ಹೆಚ್ಚೇನು ವ್ಯತ್ಯಾಸವಿಲ್ಲ. ಅರಣ್ಯ ಅತಿ-ಕ್ರಮಣ ಸಮಸ್ಯೆ ಎರಡೂ ಕಡೆ ಇದೆ. ಇಡೀ ಉತ್ತರಕನ್ನಡ ಜಿಲ್ಲೆಯ ಜನಕ್ಕೆ ಭರವಸೆ ನೀಡುತ್ತೇನೆ, ನಿಮ್ಮ ಧ್ವನಿಯಾಗಿ ಸಂಸತ್ ನಲ್ಲಿ ಮಾತಾಡುತ್ತೇನೆ. ಅರಣ್ಯ ಅತಿಕ್ರಮಣದ ಬಗ್ಗೆ ಮೊದಲ ಅಧಿವೇಶನದಲ್ಲೇ ಮಾತಾಡುತ್ತೇನೆ. ಇದಕ್ಕಾಗಿ ನಿಮ್ಮ ಕೈಗೆ ಕೈಜೋಡಿಸಿ ಹೋರಾಟ ಮಾಡುತ್ತೇನೆ ಎಂದು ಭರವಸೆ ನೀಡಿದರು.

ರಾಜ್ಯ ಆಡಳಿತಕ್ಕೆ ಸುಧಾರಣಾ ಆಯೋಗದ ಅಧ್ಯಕ್ಷರೂ, ಹಳಿಯಾಳ ಶಾಸಕರಾದ ಆರ್ವಿ. ದೇಶಪಾಂಡೆ ಮಾತನಾಡಿ, ಡಾ.ಬಾಬಾ ಸಾಹೇಬ ಅಂಬೇಡ್ಕರ್ ಅವರು ಈ ರಾಷ್ಟ್ರಕ್ಕೆ ನೀಡಿದ ಪವಿತ್ರ ಗ್ರಂಥದಿಂದ ಪ್ರಜಾಪ್ರಭುತ್ವ ನಡೆಯುತ್ತಿದೆ. ಆದರೆ ಬಹುಮತ ಬಂದರೆ ಸಂವಿಧಾನವನ್ನೇ ಬದಲಾವಣೆ ಮಾಡುತ್ತೇವೆಂದು ಇಲ್ಲಿನ ಸಂಸದರು ಹೇಳುತ್ತಾರೆ. ಗ್ಯಾರಂಟಿಯನ್ನ ತಮಾಷೆ ಮಾಡಿದ್ದ ಪ್ರಧಾನಿ, ಈಗ 'ಯೇ ಮೋದೀ ಕೀ ಗ್ಯಾರಂಟಿ ಹೈ' ಎನ್ನುತ್ತಿದ್ದಾರೆ. ಹುಬ್ಬಳ್ಳಿ-ಅಂಕೋಲಾ ರೈಲ್ವೆ ಯೋಜನೆ ಅನುಷ್ಠಾನಕ್ಕೆ ಸಂಸದರು ಪ್ರಯತ್ನಿಸಿಲ್ಲ, ನೀವೂ ಕೇಳಿಲ್ಲ. ಪ್ರಧಾನಿ ಉದ್ಯೋಗ ಸೃಷ್ಟಿಯ ಭರವಸೆ ನೀಡಿದ್ದರು; ಆದರೀಗ ಇದು ಜ್ವಲಂತ ಸಮಸ್ಯೆಯಾಗಿ ಪರಿಣಮಿಸಿದೆ. ಕಾಂಗ್ರೆಸ್ ಸತ್ಯಕ್ಕೆ




ದೂರವಾದುದನ್ನ ಹೇಳುವುದಿಲ್ಲ; ಹೇಳಿದ್ದನ್ನ ಮಾಡುತ್ತದೆ. ಡಾ.ಅಂಜಲಿ ಖಾನಾಪುರ, ಶಿರಸಿಯ ಅಭ್ಯರ್ಥಿಯಲ್ಲ; ಕಾಂಗ್ರೆಸ್ ಅಭ್ಯರ್ಥಿ, ಈ ಜಿಲ್ಲೆಯ ಅಭ್ಯರ್ಥಿ. ಅವರನ್ನ ಗೆಲ್ಲಿಸಿಕೊಂಡುವ ಬರುವ ಜವಾಬ್ದಾರಿ ನಮ್ಮೆಲ್ಲರದು ಎಂದರು.

ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ವೈದ್ಯ ಮಾತನಾಡಿ, ಬಿಜೆಪಿಯವರು ಸುಳ್ಳನ್ನ ಬಿಟ್ಟು ಅಭಿವೃದ್ಧಿ ಮಾಡಿದ ಇತಿಹಾಸವಿಲ್ಲ. ನಾವು ಅಭಿವೃದ್ಧಿಗೆ ಇರುವವರಲ್ಲ ಎಂದು ಸಾರ್ವಜನಿಕವಾಗೇ ಅವರು ಹೇಳಿಕೊಂಡಿದ್ದಾರೆ. ಏನು ಮಾಡಿದರೂ ನಡೆಯುತ್ತದೆಂಬ ಸ್ಥಿತಿಗೆ ಬಿಜೆಪಿಗರು ಜಿಲ್ಲೆಯನ್ನ ತಂದಿಟ್ಟಿದ್ದಾರೆ. ಈಗಾಗಲೇ 30 ವರ್ಷ ಕಳೆದುಕೊಂಡಿದ್ದೇವೆ, ಮತ್ತೆ ಕಳೆದುಕೊಳ್ಳಬಾರದು. ಚುನಾವಣೆಗಾಗಿ ಮತ್ತೆ ಯಾವುದಾದರೂ ಸುಳ್ಳು ತಯಾರು ಮಾಡಿಕೊಂಡು ಬಿಜೆಪಿಗರು ಬರುತ್ತಾರೆ. ಅವರಲ್ಲಿ ಕಾರ್ಯಕರ್ತನಿಂದ ಹಿಡಿದು ಪ್ರಧಾನಿಯವರೆಗೂ ಎಲ್ಲರೂ ಸುಳ್ಳು ಹೇಳುವವರೇ. ಸತ್ಯ ಹೇಳಿದ್ದು ಇತಿಹಾಸವೇ ಇಲ್ಲ ಎಂದು ವಾಗ್ದಾಳಿ ನಡೆಸಿದರು.

2005- 06ರಲ್ಲಿ ಅರಣ್ಯ ಅತಿಕ್ರಮಣದಾರ-ರಿಗೆ ಹಕ್ಕುಪತ್ರ ಕೊಟ್ಟಿದ್ದು ಬಿಟ್ಟರೆ ಈವರೆಗೆ ಆ ಸಮಸ್ಯೆ ಪರಿಹಾರವಾಗಿಲ್ಲ. ಈ ಬಗ್ಗೆ ಜಿಲ್ಲೆಯ ಪ್ರತಿನಿಧಿಯಾಗಿ ಸಂಸದರು ಒಂದೇ ಒಂದು ದಿನ ಸಂಸತ್ ನಲ್ಲಿ ಕೇಳಿಲ್ಲ. ಹೀಗಾಗಿ ಯೋಚನೆ ಮಾಡಿ ಮತ ಹಾಕಬೇಕಿದೆ. ಅಂದು ಖಾಲಿ ಗ್ಯಾರಂಟಿ ಕಾರ್ಡ್ ತೋರಿಸಿ ಅಧಿಕಾರಕ್ಕೆ ಬಂದಿದ್ದೆವು. ಈಗ ಆ ಐದು ಗ್ಯಾರಂಟಿಯನ್ನ ಅನುಷ್ಠಾನ ಮಾಡಿ, ನುಡಿದಂತೆ ನಡೆದು ಮತ್ತೆ ಮತ ಕೇಳಲು ಬಂದಿದ್ದೇವೆ. ಈ ಬಾರಿ ನಮ್ಮ ಅಭ್ಯರ್ಥಿ ಡಾ.ಅಂಜಲಿ ನಿಂಬಾಳ್ಕರ್ ಅವರನ್ನ ಗೆಲ್ಲಿಸಬೇಕಿದೆ ಎಂದು ಕೋರಿದರು.

ಶಿರಸಿ ಶಾಸಕ ಭೀಮಣ್ಣ ನಾಯ್ಕ, 10 ವರ್ಷಗಳಿಂದ ಅಧಿಕಾರ ನಡೆಸಿದ ಬಿಜೆಪಿಯ ಅಭಿವೃದ್ಧಿ ಶೂನ್ಯ. ಅಧಿಕಾರಕ್ಕಾಗಿ ಧರ್ಮ ಧರ್ಮಗಳ ನಡುವೆ ಕಿಚ್ಚು ಹಚ್ಚಿ, ಸುಳ್ಳುಗಳಿಂದಲೇ ಜನರನ್ನ ನಂಬಿಸುತ್ತಾ ಬಂದಿರುವ ಬಿಜೆಪಿಯನ್ನ ಅಧಿಕಾರದಿಂದ ದೂರವಿಡಬೇಕೆಂಬ ಕೂಗು ಇಡೀ ದೇಶದಲ್ಲಿ ಕೇಳಿಬರುತ್ತಿದೆ. ದಿನಬಳಕೆಯ ವಸ್ತುಗಳ ದರ ಬಿಜೆಪಿಯ ಆಡಳಿತದಲ್ಲಿ ಗಗನಕ್ಕೇರಿದೆ. ಜಿಲ್ಲೆಯ ಹಾಗೂ ದೇಶದ ಸರ್ವಾಂಗೀಣ ಅಭಿವೃದ್ಧಿಗೆ ಕಾಂಗ್ರೆಸ್ ಅಭ್ಯರ್ಥಿಯನ್ನ ಬೆಂಬಲಿಸಬೇಕಿದೆ. ನಮ್ಮ ಪಕ್ಷದ ಅಭ್ಯರ್ಥಿ ಗೆಲುವು ಶತಃಸಿದ್ಧ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ಕಾಂಗ್ರೆಸ್ ಜಿಲ್ಲಾಧ್ಯಕ್ಷ ಸಾಯಿ ಗಾಂವ್ಕರ್ ಪ್ರಾಸ್ತಾವಿಕ ಮಾತನಾಡಿ, ಬಹಳ ಮಂದಿ ಆಕಾಂಕ್ಷಿಗಳಿದ್ದರೂ ಇದ್ದ ಟಿಕೆಟ್ ಒಂದೇ. ಆಕಾಂಕ್ಷಿಗಳಿದ್ದವರೆಲ್ಲ ಟಿಕೆಟ್ ಘೋಷಣೆಯಾದ ಬಳಿಕ ನಮ್ಮ ಅಭ್ಯರ್ಥಿಯನ್ನ ಬೆಂಬಲಿಸುತ್ತಿದ್ದಾರೆ. ಆರು ಬಾರಿ ಆರಿಸಿ ಬಂದರೂ ಬಿಜೆಪಿ ಸಂಸದರಿಗೆ ಟಿಕೆಟ್ ನಿರಾಕರಿಸಲಾಗಿದೆ. ಈಗಿನ ಬಿಜೆಪಿ ಅಭ್ಯರ್ಥಿ ವಿಶ್ವೇಶ್ವರ ಹೆಗಡೆ ಕಾಗೇರಿಯವರೂ ಆರು ಬಾರಿ ಆರಿಸಿ ಬಂದರೂ ಅಭಿವೃದ್ಧಿ ಶೂನ್ಯ. ಸಂಸದರ ಮಾತು ಹೆಚ್ಚು ಕೆಲಸ ಕಡಿಮೆ; ಕಾಗೇರಿಯವರದ್ದು ಮಾತೂ ಕಡಿಮೆ, ಕೆಲಸವೂ ಕಡಿಮೆ. ಹೀಗಾಗಿ ಕಾಂಗ್ರೆಸ್ ಪಕ್ಷದ ಸಮರ್ಥ ಅಭ್ಯರ್ಥಿ ಡಾ.ಅಂಜಲಿಯವರನ್ನ ಆರಿಸಿ ಸಂಸತ್ ಗೆ ಕಳುಹಿಸಬೇಕಿದೆ ಎಂದರು.

ವಕೀಲ ಜಿ.ಟಿ.ನಾಯ್ಕ ಮಾತನಾಡಿ, ಸುಳ್ಳು ಭರವಸೆ ನೀಡುತ್ತಿರುವ ಬಿಜೆಪಿ 10 ವರ್ಷ ದೇಶ ಆಳಿದೆ. ನಿಷ್ಕ್ರಿಯ ಸಂಸದರು 30 ವರ್ಷ ಜಿಲ್ಲೆಯನ್ನಾಳಿದ್ದಾರೆ. ಪಕ್ಕದ ಜಿಲ್ಲೆ ಅಭಿವೃದ್ಧಿಯಾದಷ್ಟು ನಮ್ಮ ಜಿಲ್ಲೆ ಅಭಿವೃದ್ಧಿ ಆಗಿಲ್ಲ. ಜಿಲ್ಲೆಯನ್ನ ಸಂಸತ್ ನಲ್ಲಿ ಪ್ರತಿನಿಧಿಸಬೇಕಾದವರು ಪ್ರತಿನಿಧಿಸಿಲ್ಲ. ದೇಶದ ಸಂವಿಧಾನ ಉಳಿಯಬೇಕು. ಸಾಲ ಮುಕ್ತವಾಗಿ ಸುಭದ್ರವಾಗಿರಬೇಕು. ಬಡ-ಹಿಂದುಳಿದ ವರ್ಗದವರ ಏಳ್ಗೆಯಾಗಬೇಕು. ರೈತರು ಸಬಲರಾಗಬೇಕಾದರೆ ಕಾಂಗ್ರೆಸ್ ನ ಬೆಂಬಲಿಸಬೇಕಿದೆ. ಅಚ್ಛೆ ದಿನ್ ಎಂಬ ಸುಳ್ಳು ಭರವಸೆಯಲ್ಲಿ ಅಧಿಕಾರಕ್ಕೆ ಬಂದ ಬಿಜೆಪಿಗರು, ಪ್ರತಿಯೊಬ್ಬರಿಗೂ ಪಕ್ಕಾ ಮನೆ ಕೊಡುತ್ತೇವೆಂದು ಕಳೆದ ಚುನಾವಣೆಯಲ್ಲಿ ಭರವಸೆ ನೀಡಿ ಈಡೇರಿಸಿಲ್ಲ. ಸ್ವಿಸ್ ಬ್ಯಾಂಕ್ ನಲ್ಲಿನ ಕಪ್ಪು ಹಣ ತಂದು ಎಲ್ಲರ ಖಾತೆಗೆ 15 ಲಕ್ಷ ಹಾಕುತ್ತೇವೆ ಎಂದು ಜನರನ್ನ ನಂಬಿಸಿ ವಂಚಿಸಿದರು. 30 ವರ್ಷಗಳ ಕಾಲ ಸಂಸದರಾಗಿದ್ದವರು ಮಾಡಿದ್ದೇನಿಲ್ಲ ಎಂದರು.

ಅಭಿವೃದ್ಧಿಪರ ಸರ್ಕಾರ, ಅಭಿವೃದ್ಧಿ ಮಾಡುವವರನ್ನ ಅಧಿಕಾರಕ್ಕೆ ತರಬೇಕು. ಹಂಚಿದ ಗ್ಯಾರಂಟಿ ಕಾರ್ಡ್ ನಲ್ಲಿ ಭರವಸೆಯನ್ನ ಕಾಂಗ್ರೆಸ್ ಸರ್ಕಾರ ಈಡೇ-ರಿಸಿದೆ. ಮೋದಿ 10 ವರ್ಷಗಳಲ್ಲಿ ಕೊಟ್ಟ ಗ್ಯಾರಂಟಿ ಈಡೇರಿಸಿಲ್ಲ, ಈಗ ಮತ್ತೆ ಗ್ಯಾರಂಟಿ ಎಂದು ಬರುತ್ತಿದ್ದಾರೆ. ಜ್ವಲಂತ ಸಮಸ್ಯೆಗಳ ಪರಿಹಾರಕ್ಕಾಗಿ ನಮ್ಮ ಅಭ್ಯರ್ಥಿಯನ್ನ ಗೆಲ್ಲಿಸುವ ಮೂಲಕ ಉತ್ತರ ಪಡೆಯಬೇಕಿದೆ. ಹೋರಾಟ ಮಾಡಿದ ರೈತರನ್ನ ಭಯೋತ್ಪಾದಕರೆಂದು ಸಂಬೋಧಿಸಿದರು. ಬಿಜೆಪಿ ಅಧಿಕಾರಕ್ಕೆ ಬಂದರೆ ಚುನಾವಣೆಯಾಗುವ ಸಾಧ್ಯತೆಯೂ ಕಡಿಮೆಯಾಗುತ್ತದೆ ಎಂದು ಕಳವಳ ವ್ಯಕ್ತಪಡಿಸಿದರು.

## ಕೌಶಲ್ಯ ಆಧಾರಿತ ತರಬೇತಿಗೆ ಅರ್ಜಿ ಆಹ್ವಾನ

ಬೆಳಗಾವಿ: ಉತ್ತರ ಕನ್ನಡ ಜಿಲ್ಲೆಯ ಹಳಿಯಾಳದ ನಮ್ಮ ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟಿ ತರಬೇತಿ ಸಂಸ್ಥೆಯಲ್ಲಿ 18 ರಿಂದ 45 ವಯಸ್ಸಿನ ಗ್ರಾಮೀಣ ನಿರುದ್ಯೋಗಿ ಯುವಕ-ಯುವತಿಯರಿಗಾಗಿ ಏಪ್ರಿಲ್‌ನಲ್ಲಿ ಘರೇಲು ವಿದ್ಯುತ್ ಉಪಕರಣ ಸೇವಾ ಉದ್ಯಮಿ ತರಬೇತಿ ಹಾಗೂ ಮೇ ನಲ್ಲಿ ಪ್ರಾರಂಭವಾಗುವ ತರಬೇತಿ ಮೊಬೈಲ್ ರಿಪೇರಿ ತರಬೇತಿಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿಯು ಊಟ ವಸತಿ ಸಂಪೂರ್ಣ ಉಚಿತವಾಗಿದ್ದು, ಗ್ರಾಮೀಣ ವಿಭಾಗದ ಯುವಕ ಯುವತಿಯರಿಗೆ ಆದ್ಯತೆ ನೀಡಲಾಗುವುದು. ಕೌಶಲ್ಯ, ಸಾಫ್ಟ್ ಸ್ಕಿಲ್ಸ್, ಯೋಗ ತರಬೇತಿ, ಬ್ಯಾಂಕಿನಿಂದ ಸಾಲ ಪಡೆದು ಸ್ವ-ಉದ್ಯೋಗ ಪ್ರಾರಂಭಿಸಲು ಬೇಕಾಗುವ ಜ್ಞಾನ, ಸರ್ಕಾರಿ ಯೋಜನೆಗಳು ಹಾಗೂ ಯೋಜನಾ ವರದಿ ತಯಾರಿಕೆ ಮಾಹಿತಿಯನ್ನು ಉಚಿತವಾಗಿ ನೀಡಲಾಗುತ್ತದೆ.

ಆಸಕ್ತರು ಏ.20 ಒಳಗಾಗಿ ಅರ್ಜಿಯನ್ನು ಉತ್ತರ ಕನ್ನಡ ಜಿಲ್ಲೆಯ ಹಳಿಯಾಳದ ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ಸಂಸ್ಥೆಯ ಕಚೇರಿಗೆ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ದೂರವಾಣಿ: 9980510717 ಅಥವಾ 9483485489 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಉತ್ತರ ಕನ್ನಡ ಜಿಲ್ಲೆಯ ಹಳಿಯಾಳದ ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕ್ಷೇತ್ರದ ಅಭಿವೃದ್ಧಿ ವಿಷಯದ ಮೇಲೆ ಮತ ಯಾಚನೆ: ಮೃಣಾಲ ಹೆಬ್ಬಾಳಕರ್



ಬೆಳಗಾವಿ : ನಾನು ಎಂಜಿನಿಯರಿಂಗ್ ಪದವೀಧರ ನಾಗಿದ್ದು, ಬೆಳಗಾವಿ ಜಿಲ್ಲೆಯ ಕುರಿತು ಸ್ಪಷ್ಟ ಕಲ್ಪನೆ ಹೊಂದಿದ್ದೇನೆ. ಜಿಲ್ಲೆಯ ಸಮಗ್ರ ಅಭಿವೃದ್ಧಿಯ ವಿಷಯವನ್ನು ಮುಂದಿಟ್ಟುಕೊಂಡು ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಮತ ಕೇಳುವುದಾಗಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ತಿಳಿಸಿದ್ದಾರೆ.

ಬೆಳಗಾವಿ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಮುತಗಾ, ಶಿಂದೊಳ್ಳಿ, ಬಸರಿಕಟ್ಟಿ ಮೊದಲಾದ ಗ್ರಾಮಗಳಲ್ಲಿ ಅವರು ಗುರುವಾರ ಪ್ರಚಾರ ಕೈಗೊಂಡು, ಮತಯಾಚನೆ ಮಾಡಿದರು. ಈ ದೇಶವನ್ನು ಕಟ್ಟುವಲ್ಲಿ ಕಾಂಗ್ರೆಸ್ ಪಕ್ಷದ ಕೊಡುಗೆ ಸಾಕಷ್ಟಿದೆ. ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದಾಗಲೆಲ್ಲ, ದೇಶ ಮತ್ತು ರಾಜ್ಯದಲ್ಲಿ ಅಭಿವೃದ್ಧಿ ಮಾಡಿದೆ. ತಾಯಿ ಲಕ್ಷ್ಮೀ ಹೆಬ್ಬಾಳಕರ್ ಅರು ಬೆಳಗಾವಿ ಗ್ರಾಮೀಣ ಕ್ಷೇತ್ರದಲ್ಲಿ ಸಾಕಷ್ಟುಅಭಿವೃದ್ಧಿ ಮಾಡಿದ್ದಾರೆ. ಮುಂಬರುವ ದಿನಗಳಲ್ಲಿ ಬೆಳಗಾವಿ ಲೋಕಸಭಾ ಕ್ಷೇತ್ರಕ್ಕೆ ಹಲವಾರು ಯೋಜನೆಗಳನ್ನು ತರುವ ಮೂಲಕ ಕ್ಷೇತ್ರವನ್ನು ಸಮಗ್ರ ಅಭಿವೃದ್ಧಿಯತ್ತ ಕೊಂಡೊಯ್ಯಲಾಗುವುದು ಎಂದು ಅವರು ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಮಾತನಾಡಿ, ಕಾಂಗ್ರೆಸ್ ಪಕ್ಷ ದೇಶವನ್ನಾಗಲಿ, ಜನರನ್ನಾಗಲಿ ಎಂದೂ ಒಡೆಯುವ ಕೆಲಸ ಮಾಡುವುದಿಲ್ಲ. ನಾವು ಜೋಡಿಸುವ ಕೆಲಸ ಮಾಡುತ್ತೇವೆ. ಎಲ್ಲರನ್ನೂ ಒಟ್ಟಾಗಿ ಕರೆದೊಯ್ಯುವ, ತಾರತಮ್ಯವಿಲ್ಲದೆ ಅಭಿವೃದ್ಧಿ ಮಾಡುವ ಪಕ್ಷ ನಮ್ಮದು. ಹಾಗಾಗಿಯೇ ಯಾವುದೇ ತಾರತಮ್ಯ ಮಾಡದೆ ಸಮಾಜದ ಎಲ್ಲರಿಗೂ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದ್ದೇವೆ. ರಾಜ್ಯದ ಪ್ರತಿಯೊಂದು ಕುಟುಂಬವೂ ಗ್ಯಾರಂಟಿ ಯೋಜನೆಗಳ ಲಾಭ ಪಡೆದುಕೊಂಡಿವೆ. ಮುಂದಿನ ದಿನಗಳಲ್ಲಿ ನಮ್ಮ ಯುವಕರಿಗೆ ಉದ್ಯೋಗ ನೀಡುವ ಯೋಜನೆಗಳನ್ನು ತರುವ ಕನಸಿದೆ. ಹಾಗಾಗಿ ಯುವಕನಾಗಿರುವ ಮೃಣಾಲ ಹೆಬ್ಬಾಳಕರ್ ಗೆ ಮತ ನೀಡುವ ಮೂಲಕ ಸಮಗ್ರ ಅಭಿವೃದ್ಧಿಗೆ ಸಹಕರಿಸಿ ಎಂದು ವಿನಂತಿಸಿದರು.

**ಕೇಂದ್ರದ ಅನುದಾನ ತರಲು ಕ್ರಮ -ಚನ್ನರಾಜ ಹಟ್ಟಿಹೊಳಿ**

ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಮಾತನಾಡಿ, ವಿಧಾನಸಭೆಯ ಚುನಾವಣೆಯಲ್ಲಿ ಸುಳ್ಳು ಹೇಳುತ್ತ ಪ್ರಚಾರ ಮಾಡಿದವರನ್ನು ನೋಡಿದ್ದೀರಿ ಮತ್ತು ಅವರಿಗೆ ತಕ್ಕ ಪಾಠ ಕಲಿಸಿದ್ದೀರಿ.

ಈ ಬಾರಿಯೂ ಅದೇ ರೀತಿಯಲ್ಲಿ ನಮ್ಮನ್ನು ಬೆಂಬಲಿಸುವ ಮೂಲಕ ಕ್ಷೇತ್ರವನ್ನು ಮತ್ತು ಜಿಲ್ಲೆಯನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಲು ಸಹಾಕರ ನೀಡಿ ಎಂದು ವಿನಂತಿಸಿದರು.

ರಾಜ್ಯಸರಕಾರದ ಎಲ್ಲ ಯೋಜನೆಗಳನ್ನೂ ಬಳಸಿಕೊಂಡು ನಾವು ಕ್ಷೇತ್ರವನ್ನು ಅಭಿವೃದ್ಧಿಪಡಿಸಿದ್ದೇವೆ. ಮೃಣಾಲ ಹೆಬ್ಬಾಳಕರ್ ಅವರನ್ನು ಆಯ್ಕೆ ಮಾಡಿ ಕಲಿಸಿದಲ್ಲಿ ಮುಂದಿನ ದಿನಗಳಲ್ಲಿ ರಾಜ್ಯ ಸರಕಾರದ ಯೋಜನೆಗಳ ಜೊತೆಗೆ ಕೇಂದ್ರದಿಂದಲೂ ಹೆಚ್ಚಿನ ಅನುದಾನ ತರಲಿದ್ದಾನೆ.

ಹಾಗಾಗಿ ದೊಡ್ಡ ಪ್ರಮಾಣದ ಅಂತರದಿಂದ ಮೃಣಾಲ ಹೆಬ್ಬಾಳಕರ್ ಅವರನ್ನು ಆಯ್ಕೆ ಮಾಡಿ ಎಂದು ಚನ್ನರಾಜ ಹೇಳಿದರು.

ನಾಗೇಶ್ ದೇಸಾಯಿ, ಶ್ಯಾಮ್ ಮುತಗೇಕರ್, ಗಜಾನನ ಕಣಬರ್ಕರ್, ಶ್ಯಾಮರಾವ್ ಪಾಟೀಲ, ಪಿಂಟು ಮಲ್ಲವ್ವಗೋಳ, ಭರಮಾ ಮಲ್ಲವ್ವಗೋಳ, ವಿಶಾಲ ಪಾಟೀಲ, ಭೀಮ ಓಬಣ್ಣಗೋಳ, ಸ್ನೇಹಲ್ ಪೂಜಾರಿ, ಮಾಧುರಿ ಮುತಗೇಕರ್, ಶೀಲಾ ಮಲ್ಲವ್ವಗೋಳ, ಕೃಷ್ಣ ಮಲ್ಲವ್ವಗೋಳ, ಶಿವು ಸೈಬಣ್ಣವರ, ರಾಜೇಶ್ ಪಾಟೀಲ, ಸುರೇಶ ಪಾಟೀಲ, ಶೀಲಾ ತಿಪ್ಪಣ್ಣಗೋಳ, ಮಲ್ಲಪ್ಪ ಶಹಾಪೂರಕರ್, ಬೀರಾ ಅನಗೋಳ್ಕರ್, ಕೃಷ್ಣ ಅನಗೋಳ್ಕರ್, ದಿಲೀಪ್ ಕೊಂಡಸಕೊಪ್ಪ, ಹೊಳೆಪ್ಪ ಪೂಜೇರಿ, ಬಸವಣ್ಣಿ ಕೊಂಡಸಕೊಪ್ಪ, ಸಿದ್ರಾಯಿ ನಾಗರೊಳ್ಳಿ, ಪರುಶರಾಮ ಕಲ್ಲನಾಂಚೆ, ಯಶವಂತ ಕೋಲಕಾರ, ದೇವೇಂದ್ರ ಸುಳೇಭಾವಿ, ಪಾಪು ಕೋಲಕಾರ, ಯಲ್ಲಪ್ಪ ಸಾಂಬ್ರೇಕರ್, ಯಲ್ಲಪ್ಪ ಚೌಗುಲೆ, ರಾಮಾ ಬೈಲವಾಡ, ಗೋವಿಂದ ಮೊದಲಾದವರು ಉಪಸ್ಥಿತರಿದ್ದರು.

## ನದಿಗೆ ನೀರು ಹರಿಸಿದ ಸಚಿವ ಸತೀಶ್ ಜಾರಕಿಹೊಳಿ ಅವರಿಗೆ ಅಭಿನಂದನೆ ಸಲ್ಲಿಸಿದ ರೈತರು



ಬೆಳಗಾವಿ: ಜಲಾಶಯ ಆಶ್ರಯಿಸಿರುವ ರೈತರಿಗೆ, ಜನರಿಗೆ ಕುಡಿವ ನೀರು ಲಭ್ಯವಾಗುವಂತೆ ಅಗತ್ಯ ಕ್ರಮ ಕೈಗೊಳ್ಳಲು ಲೋಕೋಪಯೋಗಿ ಸಚಿವ ಸತೀಸ್ ಜಾರಕಿಹೊಳಿ ಅವರ ಸೂಚನೆ ಮೇರೆಗೆ ಇಂದು ಹುಕ್ಕೇರಿ ತಾಲೂಕಿನ ಯರನಾಳ ಬ್ಯಾರೇಜನಿಂದ ಹಿರಣ್ಯಕೇಶಿ ನದಿಗೆ ನೀರು ತುಂಬಿಸುವ ಸಲುವಾಗಿ 10 ಎಚ್.ಪಿ. ಸಾಮರ್ಥ್ಯದ 3 ಮೋಟಾರುಗಳನ್ನು ಅಳವಡಿಸುವ ಮೂಲಕ ಹಿರಣ್ಯಕೇಶಿ ನದಿಗೆ ನೀರನ್ನು ಹರಿಸಲಾಯಿತು.

ಈ ವೇಳೆ ರೈತ ಮುಖಂಡ ಮಹಾಂತೇಶ ಮಗದುಮ್ ಮಾತನಾಡಿ, ಬರಗಾಲದಿಂದ ತತ್ತರಿಸಿರುವ ಹಿರಣ್ಯಕೇಶಿ ನದಿಯ ಸುತ್ತಮುತ್ತಲಿನ 12 ಗ್ರಾಮಗಳಿಗೆ ಸಾಕಷ್ಟು ತೊಂದರೆಯಾಗಿ ಪರಿತಪ್ಪಿಸುವಂತಾಗಿತ್ತು. ಹಿರಣ್ಯಕೇಶಿ ನದಿಯ ಸುತ್ತಮುತ್ತಲಿನ ಗ್ರಾಮಗಳ ಭಾಗದ ರೈತರಿಗೆ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರು ಕಲ್ಪಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರೂ ಯಾರು ಸ್ಪಂದಿಸಲಿಲ್ಲ. ಅಲ್ಲದೇ 12 ಗ್ರಾಮಗಳ ರೈತರು ಕೂಡಿ ಹಿರಣ್ಯಕೇಶಿ ನದಿಗೆ ನೀರು ಹರಿಸುವಂತೆ ಹೋರಾಟ ಮಾಡಿದರೂ ಕೂಡಾ ಯಾವ ಅಧಿಕಾರಿ ಹಾಗೂ ಶಾಸಕರು ನಮ್ಮತ್ತ ಕಣ್ಣು ತೆರೆದು ನೋಡಲಿಲ್ಲ. ಇಲ್ಲಿನ ಸಮಸ್ಯೆ ಕುರಿತು ಸಚಿವ ಸತೀಶ್ ಜಾರಕಿಹೊಳಿ ಅವರಿಗೆ ಮಾಹಿತಿ ತಿಳಿಸಿದಾಗ ನಮ್ಮ ಸಮಸ್ಯೆಗೆ ಸ್ಪಂದಿಸಿದ ಸಚಿವ ಸತೀಶ್ ಜಾರಕಿಹೊಳಿ ಅವರು ಶೀಘ್ರವೇ ಹುಕ್ಕೇರಿ ತಾಲೂಕಿನ ಯರನಾಳ ಬ್ಯಾರೇಜನಿಂದ ಹಿರಣ್ಯಕೇಶಿ ನದಿಗೆ ನೀರು ಹರಿಸಿದ್ದಾರೆ ಎಂದರು.

ಸರಳತೆಯ ಸಾಹುಕಾರ್ ಎಂಬ ಹೆಸರು ಖ್ಯಾತಿ ಪಡೆದ ಸಚಿವ ಸತೀಶ್ ಜಾರಕಿಹೊಳಿ ಅವರು ರೈತರ ಪರವಾಗಿ ಹೆಚ್ಚು ಮುತವರ್ಜಿ ವಹಿಸಿ ಯರನಾಳ ಬ್ಯಾರೇಜನಿಂದ ಹಿರಣ್ಯಕೇಶಿ ನದಿಗೆ ನೀರು ಹರಿಸುವ ಕಾರ್ಯ ಮಾಡಿ ನಮ್ಮ ಕಣ್ಣೀರನ್ನು ಒರೆಸುವ ಕೆಲಸ ಮಾಡಿದ್ದಾರೆ. ಇಂದು ರೈತರ ಸಮಸ್ಯೆಗೆ ಸ್ಪಂದಿಸಿದ ಅಭಿವೃದ್ಧಿ ಹರಿಕಾರ ಸಚಿವ ಸತೀಶ್ ಜಾರಕಿಹೊಳಿ ಅವರಿಗೆ ಈ ಭಾಗದ ವಿವಿಧ ಗ್ರಾಮಗಳ ರೈತರು ಸಂತಸಪಟ್ಟು ಅಭಿನಂದನೆ ಸಲ್ಲಿಸಿದ್ದಾರೆ.

ಅಲ್ಲದೇ ಯರನಾಳ ಬ್ಯಾರೇಜನಿಂದ ಹಿರಣ್ಯಕೇಶಿ ನದಿಗೆ ನೀರು ಹರಿಸುವದರಿಂದ ಬರಗಾಲದಿಂದ ತತ್ತರಿಸಿರುವ ಯರನಾಳ, ಮದಮಕ್ಕನಾಳ, ಯರಗಟ್ಟಿ, ಬಸ್ತವಾಡ, ಬಡಕುಂದ್ರಿ, ಗೌಡವಾಡ, ಕುರಣಿ, ಅರ್ಜುನವಾಡ, ಕೋಚರಿ, ಚಿಕ್ಕಾಲಗುಡ್ಡ, ಹೆಬ್ಬಾಳ ಹಾಗೂ ಮಸರಗುಪ್ಪಿ ಸೇರಿ ಇತರೆ ಭಾಗದ ರೈತರಿಗೆ ಅನುಕೂಲವಾಗಲಿದೆ.

## ಚೆಕ್ ಪೋಸ್ಟ್ ಗಳಿಗೆ ಭೇಟಿ ನೀಡಿ ಪರಿಶೀಲಿಸಿದ ಜಿಪಂ ಸಿಇಒ ರಾಹುಲ್ ಶಿಂಧೆ




ರಾಯಬಾಗ: ರಾಯಬಾಗ ವಿಧಾನಸಭೆ ಮತಕ್ಷೇತ್ರದ ವ್ಯಾಪ್ತಿಯಲ್ಲಿನ ಕಬ್ಬೂರ ಹಾಗೂ ಕಂಕಣವಾಡಿಯಲ್ಲಿನ ಚೆಕ್ ಪೋಸ್ಟ್ ಗಳಿಗೆ ಗುರುವಾರ ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಚುನಾವಣಾಧಿಕಾರಿ ಆಗಿರುವ ಜಿಪಂ ಸಿಇಒ ರಾಹುಲ್ ಶಿಂಧೆ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಜಿಪಂ ಸಿಇಒ ರಾಹುಲ್ ಶಿಂಧೆ ಅವರು, ಚೆಕ್ ಪೋಸ್ಟ್ ಗಳಲ್ಲಿ ಬರುವ ವಾಹನಗಳನ್ನು ಸರಿಯಾಗಿ ಪರಿಶೀಲನೆ ನಡೆಸಬೇಕು. ಯಾವುದೇ ನಿಯಮಗಳ ಉಲ್ಲಂಘನೆ ಆಗದಂತೆ ನಿಗಾವಹಿಸಬೇಕು ಎಂದು ಸೂಚಿಸಿದರು.

ಬಳಿಕ ರಾಯಬಾಗ ಪಟ್ಟಣದ ತಹಶೀಲ್ದಾರರ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ಮತಗಟ್ಟೆ ಅಧಿಕಾರಿಗಳ ತರಬೇತಿ ಕಾರ್ಯಾಗಾರದಲ್ಲಿ ಭಾಗವಹಿಸಿದ ಜಿಪಂ ಸಿಇಒ ರಾಹುಲ್ ಶಿಂಧೆ ಅವರು, ತಮ್ಮ ವ್ಯಾಪ್ತಿಯಲ್ಲಿನ ಎಲ್ಲ ಮತಗಟ್ಟೆಗಳಲ್ಲಿನ ಮೂಲಭೂತ ಸೌಕರ್ಯಗಳ ಕುರಿತು ಖಚಿತಪಡಿಸಿಕೊಳ್ಳಬೇಕು.

ಮತದಾನಕ್ಕೆ ಯಾವುದೇ ರೀತಿಯ ತೊಂದರೆಯಾಗದಂತೆ ಸರಿಯಾಗಿ ನೋಡಿಕೊಳ್ಳಬೇಕು ಎಂದು ನಿರ್ದೇಶನ ನೀಡಿದರು.

ನಂತರ ರಾಯಬಾಗ ಪಟ್ಟಣದ ಮಹಾವೀರ ನ್ಯೂ ಇಂಗ್ಲಿಷ್ ಸೂಲ್ಕ್ ನಲ್ಲಿ ಮಸ್ಟರಿಂಗ್ ಮತ್ತು ಡಿಮಸ್ಟರಿಂಗ್ ಬಗ್ಗೆ ಸ್ಥಳಗಳ ಪರಿಶೀಲನೆ ನಡೆಸಿದರು.

ತಾಪಂ ಇಒ ಆನಂದ ಬಾಲಪ್ಪನ್ನವರ, ತಹಶೀಲ್ದಾರ ಪ್ರಶಾಂತ ಚನ್ನಗೊಂಡ, ಸಹಾಯಕ ನಿರ್ದೇಶಕ(ಗ್ರಾಉ) ಅರುಣ ಮಾಚಕನ್ನವರ, ಐಇಸಿ ಸಂಯೋಜಕ ಮುತ್ತುರಾಜ ಗದಾಡಿ ಮತ್ತಿತರರು ಉಪಸ್ಥಿತರಿದ್ದರು.

## ಬಡ ರೋಗಿಗಳಿಗೆ ಆಸರೆಯಾದ ಸತೀಶ್ ಜಾರಕಿಹೊಳಿ ಫೌಂಡೇಶನ್



ಬೆಳಗಾವಿ: ಸತೀಶ ಜಾರಕಿಹೊಳಿ ಫೌಂಡೇಶನ್ ವತಿಯಿಂದ ಮಾರನಾಂತಿಕ ಕಾಯಿಲೆಗಳಿಂದ ಬಳಲುತ್ತಿರುವ ಜಿಲ್ಲೆಯ ಬಡ ರೋಗಿಗಳಿಗೆ ವಿವಿಧ ಶಸ್ತ್ರ ಚಿಕಿತ್ಸೆಗಳನ್ನು ಉಚಿತ ಮಾಡಿಸುವ ಮೂಲಕ ಆಸರೆಯಾಗಿದೆ.

ಸತೀಶ್ ಜಾರಕಿಹೊಳಿ ಫೌಂಡೇಶನ್ ವತಿಯಿಂದ ಕರ್ನಾಟಕ ರಾಜ್ಯದ ಹಾಗೂ ಮಹಾರಾಷ್ಟ್ರದ ಗಡಿಭಾಗದ "ಸೂಪರ್ ಸ್ಪೆಷಾಲಿಟಿ" ಆಸ್ಪತ್ರೆಗಳಲ್ಲಿ ನಿರಂತರವಾಗಿ ಚಿಕಿತ್ಸೆಯನ್ನು ನೀಡುತ್ತಿದ್ದಾರೆ. ಸತೀಶ್ ಜಾರಕಿಹೊಳಿ ಫೌಂಡೇಶನ್ ವತಿಯಿಂದ ಹೃದಯರೋಗ ಶಸ್ತ್ರ ಚಿಕಿತ್ಸೆಯಲ್ಲಿ ಸುಮಾರು 40ರೋಗಿಗಳಿಗೆ ಉಚಿತ ಚಿಕಿತ್ಸೆ, ನರ ರೋಗ ಶಸ್ತ್ರ ಚಿಕಿತ್ಸೆಯಲ್ಲಿ 22 ರೋಗಿಗಳಿಗೆ ಉಚಿತ ಚಿಕಿತ್ಸೆ, ಚಿಕ್ಕ ಮಕ್ಕಳ ಶಸ್ತ್ರ ಚಿಕಿತ್ಸೆಯಲ್ಲಿ 58ರೋಗಿಗಳಿಗೆ ಉಚಿತ ಚಿಕಿತ್ಸೆ, ಕ್ಯಾನ್ಸರ್ ಶಸ್ತ್ರ ಚಿಕಿತ್ಸೆಯಲ್ಲಿ 70ರೋಗಿಗಳಿಗೆ ಉಚಿತ ಚಿಕಿತ್ಸೆ, ಎಲಬು ಮತ್ತು ಕಿಲುಬು ಶಸ್ತ್ರ ಚಿಕಿತ್ಸೆಯಲ್ಲಿ 43ರೋಗಿಗಳಿಗೆ ಉಚಿತ ಚಿಕಿತ್ಸೆ ಹಾಗೂ ಇನ್ನೂಳಿದ ವಿಭಾಗಗಳಲ್ಲಿ 140ಕ್ಕಿಂತ ಹೆಚ್ಚಿನ ರೋಗಿಗಳಿಗೆ ಉಚಿತ ಶಸ್ತ್ರ ಚಿಕಿತ್ಸೆಯನ್ನು ಸತೀಶ್ ಜಾರಕಿಹೊಳಿ ಫೌಂಡೇಶನ್ ವತಿಯಿಂದ ನೀಡಲಾಗಿದೆ.

ಸತೀಶ ಜಾರಕಿಹೊಳಿ ಫೌಂಡೇಶನ್ ವಿಶೇಷವಾಗಿ ಬಡ ಜನತೆಯ ವಿದ್ಯಾಭ್ಯಾಸ ಹಾಗೂ ಆರೋಗ್ಯಕ್ಕೆ ವಿಶೇಷ ಕಾಳಜಿ ವಹಿಸಿ ದೇಶದ ಅಭಿರುದ್ಧಿಯಲ್ಲಿ ತನ್ನದೆ ಆದ ಪ್ರಾಮಾಣಿಕ ಪ್ರಯತ್ನ ಮಾಡುತ್ತಿದೆ.

## ಲಕ್ಷಾಂತರ ಕಾರ್ಯಕರ್ತರ ಜೊತೆ ತೆರಳಿ ನಾಮಪತ್ರ ಸಲ್ಲಿಸಿದ ಕೈ ಅಭ್ಯರ್ಥಿ ಚಂದ್ರಪ್ಪ




ಚಿತ್ರದುರ್ಗ: ಲೋಕಸಭೆ ಚುನಾವಣೆಗೆ ಈಗಾಗಲೇ ದಿನಾಂಕ ಘೋಷಣೆ ಆಗಿದ್ದು, ಬಹುತೇಕ ಕ್ಷೇತ್ರಗಳಿಗೂ ಎಲ್ಲಾ ಪಕ್ಷಗಳಿಂದಲೂ ಅಭ್ಯರ್ಥಿಗಳ ಘೋಷಣೆ ಆಗಿದೆ. ಹಾಗೆಯೇ ನಾಮಪತ್ರ ಸಲ್ಲಿಸುತ್ತಿದ್ದಾರೆ. ಹಾಗೆಯೇ ಇದೀಗ ಕೋಟೆ ನಾಡು ಚಿತ್ರದುರ್ಗ ಕ್ಷೇತ್ರದಲ್ಲಿ ಚುನಾವಣೆಯ ಕಾವು ರಂಗೇರುತ್ತಿದ್ದು, ಇಂದು ಉಮೇದುವಾರಿಕೆ ಸಲ್ಲಿಸಲು ಕೊನೆ ದಿನವಾಗಿದ್ದ ಹಿನ್ನೆಲೆಯಲ್ಲಿ ಇತ್ತ ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಜಿಲ್ಲಾಧಿಕಾರಿ ಕಚೇರಿಗೆ ತೆರಳಿ ಚುನಾವಣೆ ಅಧಿಕಾರಿಗಳಿಗೆ ನಾಮಪತ್ರ ಸಲ್ಲಿಸಿದರು.

ನಾಮಪತ್ರ ಸಲ್ಲಿಕೆಗೂ ಮುನ್ನ ಬೆಳಗ್ಗೆ 11 ಗಂಟೆಗೆ ನಗರದ ಶ್ರೀ ನೀಲಕಂಠೇಶ್ವರ ದೇಗುಲದಲ್ಲಿ ವಿಶೇಷ ಪೂಜೆ ಸಲ್ಲಿಸಿದರು. ಬಳಿಕ ವಾಹನಗಳಲ್ಲಿ ಲಕ್ಷಾಂತರ ಕಾರ್ಯಕರ್ತರ ಜೊತೆ ನಗರದ ಪ್ರಮುಖ ಬೀದಿಗಳಲ್ಲಿ ಹಾಗೂ ಜಿಲ್ಲಾಧಿಕಾರಿ ಕಚೇರಿಯವರೆಗೂ ಬೃಹತ್ ರೋಡ್ ಶೋ ನಡೆಸಿ, ಶಕ್ತಿ ಪ್ರದರ್ಶನ ಮಾಡಿದರು.

ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಅವರಿಗೆ ನಾಮಪತ್ರ ಸಲ್ಲಿಸಲು ಸಚಿವ ಸತೀಶ್ ಜಾರಕಿಹೊಳಿ, ಶಾಸಕರಾದ ಟಿ. ರಘುಮೂರ್ತಿ, ಬಿ.ಜಿ.ಗೋವಿಂದಪ್ಪ, ಎನ್.ವೈ.ಗೋಪಾಲಕೃಷ್ಣ, ಟಿ.ಬಿ.ಜಯಚಂದ್ರ, ಪಾವಗಡ ವೆಂಕಟೇಶ್, ಕೆ.ಸಿ.ವೀರೇಂದ್ರ ಪಪ್ಪಿ, ಮಾಜಿ ಸಚಿವ ಹೆಚ್.ಆಂಜನೇಯ, ಮಾಜಿ ಶಾಸಕ ಎ.ವಿ.ಉಮಾಪತಿ ಸಾಥ್ ನೀಡಿದರು.

## ಒಂದಾದ ರಾಜಕೀಯ ಬದ್ಧ ವೈರಿಗಳು



ಬೈಲಹೊಂಗಲ: ಒಂದೇ ಪಕ್ಷದಲ್ಲಿದ್ದರೂ ರಾಜಕೀಯವಾಗಿ ಬದ್ಧ ವೈರಿಗಳಾಗಿದ್ದ, ಮಾಜಿ ಶಾಸಕರಾದ ಜಗದೀಶ ಮೆಟಗುಡ್ಡ ಮತ್ತು ಡಾ.ವಿಶ್ವನಾಥ ಪಾಟೀಲ ಬುಧವಾರ ಒಂದೇ ಕಾರಿನಲ್ಲಿ ಪ್ರಯಾಣಿಸಿ, ಬಿಜೆಪಿ ಅಭ್ಯರ್ಥಿ ಜಗದೀಶ ಶೆಟ್ಟರ್ ಪರ ಪ್ರಚಾರ ನಡೆಸಿದರು.

ಬೈಲಹೊಂಗಲಕ್ಕೆ ಬುಧವಾರ ಭೇಟಿ ನೀಡಿದ ಜಗದೀಶ ಶೆಟ್ಟರ್ ಅವರಿಗೆ ಮಾಜಿ ಶಾಸಕರಿಬ್ಬರೂ ಸಂಭ್ರಮದ ಸ್ವಾಗತ ನೀಡಿದರು. ಮೂವರೂ ನಾಯಕರು ಒಂದೇ ಕಾರಿನಲ್ಲಿ ಸಂಚರಿಸಿದರು. ಅವರೊಂದಿಗೆ ಜೆಡಿಎಸ್ ಜಿಲ್ಲಾ ಘಟಕದ ಅಧ್ಯಕ್ಷ ಶಂಕರ ಮಾಡಲಗಿ ಕೂಡ ಇದ್ದರು.

2013ರ ವಿಧಾನಸಭೆ ಚುನಾವಣೆಯಲ್ಲಿ ಡಾ.ವಿಶ್ವನಾಥ ಪಾಟೀಲ ಕೆಜೆಪಿಯಿಂದ ಆಯ್ಕೆಯಾಗಿದ್ದರು. ಬಿ.ಎಸ್. ಯಡಿಯೂರಪ್ಪ ಅವರು ಕೆಜೆಪಿಯನ್ನು ಬಿಜೆಪಿಯಲ್ಲಿ ವಿಲೀನಗೊಳಿಸಿದ ಬಳಿಕ 2018ರ ವಿಧಾನಸಭೆ ಚುನಾವಣೆಯಲ್ಲಿ ಡಾ.ವಿಶ್ವನಾಥ ಅವರಿಗೆ ಬಿಜೆಪಿ ಟಿಕೆಟ್ ನೀಡಲಾಗಿತ್ತು.

ಆಗ ಜಗದೀಶ ಮೆಟಗುಡ್ಡ ಬಂಡಾಯ ಅಭ್ಯರ್ಥಿಯಾಗಿ ನಿಂತರು. ಇಬ್ಬರ ಜಗಳದ ಮಧ್ಯೆ ಕಾಂಗ್ರೆಸ್‌ನ ಮಹಾಂತೇಶ ಕೌಜಲಗಿ ಗೆದ್ದರು.

2023ರ ಚುನಾವಣೆಯಲ್ಲಿ ಜಗದೀಶ ಮೆಟಗುಡ್ಡ ಅವರಿಗೆ ಬಿಜೆಪಿ ಟಿಕೆಟ್ ನೀಡಲಾಯಿತು. ಆಗ ಡಾ.ವಿಶ್ವನಾಥ ಬಂಡಾಯ ಸಾರಿದರು. ಈ ಇಬ್ಬರ ವೈರತ್ವದಿಂದ ಮತಗಳು ಒಡೆದು ಕಾಂಗ್ರೆಸ್‌ನ ಕೌಜಲಗಿ ಮತ್ತೆ ಗೆದ್ದರು.

ಹಾವು-ಮುಂಗುಸಿಯಂತೆ ಆಡುತ್ತಿದ್ದ ಇಬ್ಬರನ್ನೂ ಒಂದಾಗಿಸುವಲ್ಲಿ ಜಗದೀಶ ಶೆಟ್ಟರ್ ಯಶಸ್ವಿಯಾಗಿದ್ದಾರೆ. ಜೆಡಿಎಸ್ ಜಿಲ್ಲಾ ಘಟಕದ ಅಧ್ಯಕ್ಷ ಶಂಕರ ಮಾಡಲಗಿ ಕೂಡ ಬೈಲಹೊಂಗಲ ಕ್ಷೇತ್ರದ ಪ್ರಭಾವಿ ನಾಯಕ ಎಂದೇ ಗುರುತಿಸಿಕೊಂಡವರು. 2023ರ ವಿಧಾನಸಭೆ ಚುನಾವಣೆಯಲ್ಲಿ ಅವರೂ ಜೆಡಿಎಸ್‌ನಿಂದ ಸ್ಪರ್ಧಿಸಿದ್ದರು.

ಡಾ.ವಿಶ್ವನಾಥ ಹಾಗೂ ಶಂಕರ ಮಾಡಲಗಿ ಪಂಚಮಸಾಲಿ ಸಮುದಾಯದವರು. ಜಗದೀಶ ಮೆಟಗುಡ್ಡ ಬಣಜಿಗ ಸಮುದಾಯದವರು. ಬೈಲಹೊಂಗಲ ತಾಲ್ಲೂಕಿನಲ್ಲಿ ಇವೆರಡೂ ಸಮುದಾಯದ ಮತಗಳು ಗರಿಷ್ಠವಾಗಿವೆ ಎಂಬುದು ಗಮನಾರ್ಹ. ಜಗದೀಶ ಮೆಟಗುಡ್ಡ ಹಾಗೂ ಡಾ.ವಿಶ್ವನಾಥ ಇಬ್ಬರೂ ಈ ಸಲ ಬಿಜೆಪಿ ಟಿಕೆಟ್ ಆಕಾಂಕ್ಷಿಯೂ ಆಗಿದ್ದರು.

## ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ 7.84 ಕೋಟಿ ರೂ. ಒಡೆಯ



ಚಾಮರಾಜನಗರ: ಚಾಮರಾಜನಗರ (ಎಸ್ ಸಿ ಮೀಸಲು) ಕ್ಷೇತ್ರದಿಂದ ಸ್ಪರ್ಧಿಸಿರುವ ಸಮಾಜ ಕಲ್ಯಾಣ ಸಚಿವ ಎಚ್ .ಸಿ. ಮಹದೇವಪ್ಪ ಅವರ ಪುತ್ರ ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ 7.84 ಕೋಟಿ ಆಸ್ತಿ ಘೋಷಿಸಿದ್ದಾರೆ.

ಕುತೂಹಲಕಾರಿ ವಿಷಯವೆಂದರೆ ಅವರು ತಮ್ಮ ಹೆಸರಿನಲ್ಲಿ ಯಾವುದೇ ವಾಹನವಿಲ್ಲ. 42 ವರ್ಷದ ಸುನೀಲ್ ಬೋಸ್ ಅವರು ಅವಿವಾಹಿತ ಎಂದು ಘೋಷಿಸಿಕೊಂಡಿದ್ದಾರೆ ಮತ್ತು ವರುಣಾ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ನಂಜನಗೂಡು ತಾಲೂಕಿನ ಹದಿನಾರು ಗ್ರಾಮದ ಅಂಬೇಡ್ಕರ್ ಬೀದಿಯಲ್ಲಿ ವಾಸಿಸುತ್ತಿದ್ದಾರೆ. ಇವರ ವಿರುದ್ಧ ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಐಪಿಸಿ 171 (ಸಾರ್ವಜನಿಕ ಸೇವಕರು ವಂಚನೆಯ ಉದ್ದೇಶದಿಂದ ಟೋಕನ್ ಧರಿಸುವುದು ಅಥವಾ ಟೋಕನ್ ಸಾಗಿಸುವುದು) ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ಎಫ್‌ಐಆರ್‌ನ ಪ್ರಕಾರ, ಮಾರ್ಚ್ 28, 2017 ರಂದು ಮತ ಯಾಚನೆ ಮಾಡುವಾಗ ಸಾರ್ವಜನಿಕರಿಗೆ ಮತ್ತು ಪಕ್ಷದ ಕಾರ್ಯಕರ್ತರಿಗೆ ಮಜ್ಜಿಗೆ ಮತ್ತು ಹಣ್ಣುಗಳನ್ನು ಹಂಚಿದ್ದಕ್ಕಾಗಿ ಪ್ರಕರಣ ದಾಖಲಿಸಲಾಗಿದೆ.

ಮೈಸೂರಿನ ವಾಣಿ ವಿಲಾಸ ಮೊಹಲ್ಲದಲ್ಲಿ 2 ಕೋಟಿ ರೂ. ಮೌಲ್ಯದ ಮನೆಯನ್ನು ಬೋಸ್ ಹೊಂದಿದ್ದಾರೆ. ಕೈಯಲ್ಲಿ 9.9 ಲಕ್ಷ ರೂ. ನಗದು ಹೊಂದಿದ್ದು, ಬ್ಯಾಂಕ್‌ಗಳಲ್ಲಿ 6.98 ಲಕ್ಷ ರೂ. ಹಣವನ್ನು ಉಳಿತಾಯ ಖಾತೆಯಲ್ಲಿ ಹೊಂದಿದ್ದಾರೆ. ಇವರ ಬಳಿ 38 ಲಕ್ಷ ರೂ. ಮೌಲ್ಯದ ಚಿನ್ನಾಭರಣ, 2 ಲಕ್ಷ ರೂ. ಮೌಲ್ಯದ ಬೆಳ್ಳಿ ವಸ್ತುಗಳಿವೆ.

ಅವರ ಚರ ಆಸ್ತಿ ಮೌಲ್ಯ 3.53 ಕೋಟಿ, ಸ್ಥಿರಾಸ್ತಿ ಮೌಲ್ಯ 4.31 ಕೋಟಿ. ಭೂಮಿ ಅಭಿವೃದ್ಧಿಗೆ 85.50 ಲಕ್ಷ ರೂ. ಬಂಡವಾಳ ಹೂಡಿದ್ದಾರೆ. ಅವರು ಯಾವುದೇ ಬ್ಯಾಂಕ್ ಸಾಲವನ್ನು ಹೊಂದಿಲ್ಲದಿದ್ದರೂ, ಅವರು 5.56 ಕೋಟಿ ರೂ. ಸಾಲಗಾರರಾಗಿದ್ದಾರೆ. ಇವರ ಚರಾಸ್ತಿ 3.53 ಕೋಟಿ ರೂ. ಮೌಲ್ಯದಾಗಿದ್ದು, ಸ್ಥಿರಾಸ್ತಿ 4.31 ಕೋಟಿ ಮೌಲ್ಯದಾಗಿದೆ. ಹದಿನಾರು ಗ್ರಾಮದಲ್ಲಿ 1.38 ಎಕರೆ ಭೂಮಿ ಹಾಗೂ ಎಳಚಗೆರೆ ಗ್ರಾಮದಲ್ಲಿ 19 ಗುಂಟೆ ಭೂಮಿಯನ್ನು ಹೊಂದಿದ್ದಾರೆ. ಒಟ್ಟು 7.84 ಕೋಟಿ ರೂ. ಮೌಲ್ಯದ ಆಸ್ತಿಗೆ ಒಡೆಯನಾಗಿದ್ದರೂ ಸುನೀಲ್ ಬೋಸ್ ಬಳಿ ಸ್ವಂತ ಕಾರಿಲ್ಲ.

## ಕಾಂಗ್ರೆಸ್ ಗ್ಯಾರಂಟಿ ಯೋಜನೆಯಿಂದ ಬಡವರ ಮನೆ ಬೆಳಕು: ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ

ಬೆಳಗಾವಿ: ಕಾಂಗ್ರೆಸ್ ಗ್ಯಾರಂಟಿ ಯೋಜನೆಯಿಂದ ಬಡವರ ಮನೆ ಬೆಳಕಾಗಿದೆ. ಸಂವಿಧಾನ ಅಡಿಯಲ್ಲಿ ಪ್ರತಿಯೊಬ್ಬರಿಗೂ ನ್ಯಾಯ ದೊರಕಿದೆ. ಅದಕ್ಕಾಗಿ ಬಡವರ ಪರ, ನಿರಾಶ್ರಿತರ ಪರವಿರುವ ಕಾಂಗ್ರೆಸ್‌ಗೆ ಮತ ನೀಡುವ ಮೂಲಕ ನನ್ನನ್ನು ಬೆಂಬಲಿಸುವಂತೆ ಚಿಕ್ಕೋಡಿ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಮನವಿ ಮಾಡಿದರು.

ಚಿಕ್ಕೋಡಿ ಲೋಕಸಭೆ ವ್ಯಾಪ್ತಿಯ ಯಮಕನಮರಡಿ ವಿಧಾನಸಭಾ ಕ್ಷೇತ್ರದ ಸಲಾಮವಾಡಿ, ಕೋಟ, ನಾಗನೂರ ಕೆ. ಎಂ. ಹಾಗೂ ಮಣಗುತ್ತಿ ಗ್ರಾಮಗಳಲ್ಲಿ ಹಮ್ಮಿಕೊಳ್ಳಲಾದ ಪ್ರಚಾರ ಸಭೆಗಳಲ್ಲಿ ಮಾತನಾಡಿ, ಬಡವರ ಪರವಾದ ಕಾರ್ಯಕ್ರಮ ನೀಡುವುದು ಕಾಂಗ್ರೆಸ್ ಪಕ್ಷ ಮಾತ್ರ. ಇದನ್ನು ಮತದಾರರು ಬೆಂಬಲಿಸುವ ಮೂಲಕ ಪಕ್ಷ ಕ್ಕೆ ಶಕ್ತಿ ತುಂಬುವ ಕೆಲಸ ಮಾಡಬೇಕು. ಗ್ಯಾರಂಟಿ ಯೋಜನೆ ಫಲಾನುಭವಿಗಳಿಗೆ ಸಮರ್ಪಕವಾಗಿ ತಲುಪುತ್ತಿವೆ.

ಪ್ರತಿಯೊಬ್ಬರ ಏಳಿಗೆಗೆ ಯೋಜನೆಗಳು ಸಹಕಾರಿಯಾಗಿವೆ. ಕೊಟ್ಟ ಮಾತಿನಂತೆ ಸರ್ಕಾರ ಜನರಿಗೆ ಗ್ಯಾರಂಟಿ ಯೋಜನೆ ನೀಡಿದೆ. ಮುಂದಿನ ದಿನಗಳಲ್ಲೂ ಮಾದರಿ ರಾಜ್ಯವಾಗಿಸುವ ನಿಟ್ಟಿನಲ್ಲಿ ಹಲವಾರು ಅಭಿವೃದ್ಧಿ ಪರ ಯೋಜನೆ ಜಾರಿಗೊಳಿಸಲು ರಾಜ್ಯ ಸರ್ಕಾರ ಬದ್ಧವಾಗಿದೆ.

ಆದ್ದರಿಂದ ಈ ಬಾರಿ ಕೈ ಪಕ್ಷಕ್ಕೆ ಮತ ನೀಡಲು ಪ್ರತಿಯೊಬ್ಬರು ಮುಂದಾಗಬೇಕು ಎಂದರು.



ಶೈಕ್ಷಣಿಕ ಸೇರಿದಂತೆ ಕ್ರೀಡಾ ಪಟುಗಳಿಗೆ ಸತೀಶ ಜಾರಕಿಹೊಳಿ ಫೌಂಡೇಶನ್ ದಿಂದ ಸಹಾಯ-ಸಹಕಾರ ಮಾಡಲಾಗಿದೆ. ನಿಮ್ಮ ಮನೆ ಮಗಳಾದ ನನ್ನನ್ನು ಮತದಾರರು ಸಹಕರಿಸಬೇಕು. ಈ ಕ್ಷೇತ್ರದಿಂದ ಗೆಲ್ಲಲು ಶಕ್ತಿ ತುಂಬಬೇಕು ಎಂದ ಅವರು, ಬೇರುಮಟ್ಟದಿಂದ ಕಾಂಗ್ರೆಸ್ ಪಕ್ಷವನ್ನು ಬಲಪಡಿಸಲು ಕಾರ್ಯಕರ್ತರು ಸಿದ್ದರಾಗಬೇಕು.

ದೇಶದಲ್ಲಿ ಸ್ವಚ್ಛ ಆಡಳಿತ ನೀಡಿದವರು ಕಾಂಗ್ರೆಸ್, ದೇಶಕ್ಕೆ ಸ್ವಾತಂತ್ರ್ಯ ಸಿಗಲು ಹೋರಾಟ ಮಾಡಿದವರು ಕಾಂಗ್ರೆಸ್ . ಹೀಗಾಗಿ ಜಿಲ್ಲೆ ಸೇರಿದಂತೆ ದೇಶದ ಅಭಿವೃದ್ಧಿಗೆ ಕಾರಣವಾಗಿರುವ ಕಾಂಗ್ರೆಸ್ ಪಕ್ಷದ ಗೆಲುವಿಗೆ ಪಣತೊಟ್ಟು ನನ್ನನ್ನು ಆಯ್ಕೆ ಮಾಡಬೇಕು ಎಂದು ಕರೆ ನೀಡಿದರು.

ಕಾಂಗ್ರೆಸ್ ಯೋಜನೆಗಳ ಫಲಾನುಭವಿಗಳಿಗೆ ಸರ್ಕಾರ ಜಾರಿಗೆ ತಂದಿರುವ ಯೋಜನೆಗಳ ಅರಿವು ಮೂಡಿಸುವ ಮಹತ್ತರವಾದ ಜವಾಬ್ದಾರಿ ಮಹಿಳಾ ಮುಖಂಡರು ಹಾಗೂ ಕಾರ್ಯಕರ್ತೆಯರ ಮೇಲಿದೆ ಎಂದ ಅವರು, ದೇಶದ ಭದ್ರ ಬುನಾದಿಗೆ ಯುವಕರು ರಾಜಕೀಯಕ್ಕೆ ಬರಬೇಕಾಗಿದೆ. ಹೀಗಾಗಿ ಚಿಕ್ಕೋಡಿ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸಲು ನನಗೆ ಅವಕಾಶ ಸಿಕ್ಕಿದೆ , ತಂದೆಯರಿಗೆ ತೋರಿದ ಅಭಿಮಾನ- ಬೆಂಬಲ ನಿಮ್ಮ ಮನೆ ಮಗಳಾದ ನನಗೂ ನೀಡಿ, ಕ್ಷೇತ್ರದ ಜನರ ಸೇವೆ ಮಾಡಲು ಮತದಾರರು ಆಶೀರ್ವಾದ ಮಾಡಬೇಕು ಎಂದರು.

ಇದೇ ವೇಳೆ ವಿವಿಧ ಗ್ರಾಮಗಳಲ್ಲಿ ಕೈಬ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರನ್ನು ಮಹಿಳೆಯರು ಸನ್ಮಾನಿಸಿದರು. ಈ ಸಂದರ್ಭದಲ್ಲಿ ವಿವಿಧ ಗ್ರಾಮದ ಮುಖಂಡರು ಹಾಗೂ ಹಿರಿಯರು ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಉಪಸ್ಥಿತರಿದ್ದರು.

## ತೋಟಗಾರಿಕೆ ತರಬೇತಿ ಕೇಂದ್ರ: ನೇರ ಸಂದರ್ಶನ

**ಬೆಳಗಾವಿ:** ತೋಟಗಾರಿಕೆ ಇಲಾಖೆಯ ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆಯಡಿ, ತೋಟಗಾರಿಕೆ ವಿಸ್ತರಣೆ ಮತ್ತು ತರಬೇತಿ ಕಾರ್ಯಕ್ರಮದಡಿ 2024-25 ನೇ ಸಾಲಿನಲ್ಲಿ ಬೆಳಗಾವಿ ಜಿಲ್ಲೆಯ ಪುರುಷ ಹಾಗೂ ಮಹಿಳಾ ರೈತ ಮಕ್ಕಳಿಗೆ ಹುಕ್ಕೇರಿ ತಾಲ್ಲೂಕಿನ ಹಿಡಕಲ್ ಡ್ಯಾಂ ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ 10 ತಿಂಗಳ ತೋಟಗಾರಿಕೆ ತರಬೇತಿಗಾಗಿ ಅರ್ಜಿ ಅಹ್ವಾನಿಸಲಾಗಿತ್ತು.

2024ರ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ನೀತಿ ಸಂಹಿತೆ ಜಾರಿಯಲ್ಲಿ ಇರುವುದರಿಂದ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಏ.6 ರಂದು ಸಂದರ್ಶನದ ಬದಲಾಗಿ ಜೂ.25 ರಂದು ಪರಿಷ್ಕರಿಸಲಾಗಿರುತ್ತದೆ.

ಆದ್ದರಿಂದ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ಜೂ.25 ರಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ರಾವ) ಬೆಳಗಾವಿರವರ ಕಛೇರಿಯಲ್ಲಿ ಮುಂಜಾನೆ 11 ಗಂಟೆಗೆ ನೇರವಾಗಿ ಮೂಲ ದಾಖಲಾತಿಗಳೊಂದಿಗೆ ಸಂದರ್ಶನಕ್ಕೆ ಹಾಜರಾಗಬೇಕು.

ಹೆಚ್ಚಿನ ಮಾಹಿತಿಗಾಗಿ ಆಯಾ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಅವರ ಕಛೇರಿಯಲ್ಲಿ ವಿಚಾರಿಸಬಹುದು. ಮೊಬೈಲ್ ಸಂಖ್ಯೆ 8197840336, 8867887191 ಅಥವಾ 9742414741 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸರ್ಕಾರಿ ಕಚೇರಿಯಲ್ಲಿ ಡಾ.ಬಾಬು ಜಗಜೀವನರಾಮ ಜಯಂತಿ ಆಚರಿಸಲು ಸೂಚನೆ

**ಬೆಳಗಾವಿ:** ಡಾ. ಬಾಬು ಜಗಜೀವನರಾಮ ಅವರ 117ನೇ ಜನ್ಮ ದಿನಾಚರಣೆಯ ಅಂಗವಾಗಿ ಏ.5 ರಂದು ಬೆಳಗಾವಿಯ ಎಲ್ಲಾ ಗ್ರಾಮ ಪಂಚಾಯತ, ಶಾಲಾ-ಕಾಲೇಜುಗಳಲ್ಲಿ ಹಾಗೂ ಸಂಘ ಸಂಸ್ಥೆಗಳಲ್ಲಿ ಡಾ.ಬಾಬು ಜಗಜೀವನರಾಮ ಅವರ ಜಯಂತಿಯನ್ನು ಆಚರಿಸಬೇಕು ಎಂದು ಇಲಾಖೆ ಮುಖ್ಯಸ್ಥರು, ಪಂಚಾಯತ ಅಭಿವೃದ್ಧಿ ಅಧಿಕಾರಿಗಳಿಗೆ, ಜಿಲ್ಲೆಯ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರಿಗೆ, ಶಾಲೆಯ ಮುಖ್ಯೋಪಾಧ್ಯಾಯರಿಗೆ ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು ಸೂಚಿಸಿದ್ದಾರೆ.

## ಎಲ್ಲಾ ಸರ್ಕಾರಿ ಕಚೇರಿಯಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಜಯಂತಿ ಆಚರಿಸಲು ಸೂಚನೆ

**ಬೆಳಗಾವಿ:** ಡಾ.ಬಿ.ಆರ್. ಅಂಬೇಡ್ಕರ್ ಅವರ 133ನೇ ಜನ್ಮ ದಿನಾಚರಣೆಯ ಅಂಗವಾಗಿ ಏ.14 ರಂದು ಬೆಳಗಾವಿಯ ಎಲ್ಲಾ ಗ್ರಾಮ ಪಂಚಾಯತ, ಶಾಲಾ-ಕಾಲೇಜುಗಳಲ್ಲಿ ಹಾಗೂ ಸಂಘ ಸಂಸ್ಥೆಗಳಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಜಯಂತಿಯನ್ನು ಆಚರಿಸಬೇಕು ಎಂದು ಇಲಾಖೆ ಮುಖ್ಯಸ್ಥರಿಗೆ, ಪಂಚಾಯತ ಅಭಿವೃದ್ಧಿ ಅಧಿಕಾರಿಗಳಿಗೆ, ಜಿಲ್ಲೆಯ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರಿಗೆ, ಶಾಲೆಯ ಮುಖ್ಯೋಪಾಧ್ಯಾಯರಿಗೆ ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು ಸೂಚಿಸಿದ್ದಾರೆ.

## ಶೀಘ್ರಲಿಪಿಗಾರ ಹುದ್ದೆ ಅರ್ಜಿ ಸಲ್ಲಿಸುವ ಕೊನೆ ದಿನಾಂಕ ಮುಂದುಡಿಕೆ

**ಬೆಳಗಾವಿ:** ಬೆಳಗಾವಿ ಜಿಲ್ಲಾ ನ್ಯಾಯಾಲಯದಲ್ಲಿ 5 ಖಾಲಿ ಇರುವ ಶೀಘ್ರಲಿಪಿ ಗಾರರ ಹುದ್ದೆಗೆ ಫೆ.27 ರಂದು ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. ಮತ್ತೆ ಜಿಲ್ಲಾ ನ್ಯಾಯಾಂಗ ಘಟಕದಲ್ಲಿ ಹಿಂಬಾಕಿ ಉಳಿದಿರುವ 13 ಶೀಘ್ರಲಿಪಿಗಾರರ ಹುದ್ದೆಗಳಿಗೂ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಸಲುವಾಗಿ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಹಾಗೂ ಆನ್‌ಲೈನ್ ಶುಲ್ಕ ಪಾವತಿಸಲು ಏ.14 ಮತ್ತ ಏ.15 ನಿಗಧಿಪಡಿಸಲಾಗಿತ್ತು. ಈಗ ತಿದ್ದುಪಡಿ ಮಾಡಿ, ಕೇವಲ ಶೀಘ್ರಲಿಪಿಗಾರರ ಹಿದ್ದೆಗಳಿಗೆ ಮಾತ್ರ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಏ.21 ರವರೆಗೆ ಹಾಗೂ ಆನ್‌ಲೈನ್ ಮೂಲಕ ಅರ್ಜಿ ಶುಲ್ಕ ಪಾಚತಿಸಲು ಏ.22 ರವರೆಗೆ ವಿಸ್ತರಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು ಬೆಳಗಾವಿ ಜಿಲ್ಲಾ ನ್ಯಾಯಾಲಯದ ವೆಬ್‌ಸೈಟ್ **https://belagavi.dcourts.govt.in/notice-category/recuitments/** ನಲ್ಲಿ ಅರ್ಜಿ ಸಲ್ಲಿಸಲು ಸೂಚಿಸಲಾಗಿದೆ. ಹಾಗೂ ಆನ್‌ಲೈನ್ ಮೂಲಕ ಹೊರತುಪಡಿಸಿ ಖುದ್ದಾಗಿ, ಅಂಚೆ ಮೂಲಕ ಅಥವಾ ಬೇರೆ ಯಾವುದೇ ರೀತಿಯಲ್ಲಿ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುದಿಲ್ಲ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎಂಬ್ರಾಯ್ಡರಿ (ಆರಿ ವರ್ಕ್) & ಫ್ಯಾಬ್ರಿಕ್ ಪೇಟಿಂಗ್‌ಗಳ ಉಚಿತ ತರಬೇತಿಗೆ ಅರ್ಜಿ ಆಹ್ವಾನ

**ಬೆಳಗಾವಿ:** ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್‌ನ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಎಂಬ್ರಾಯ್ಡರಿ (ಆರಿ ವರ್ಕ್) & ಫ್ಯಾಬ್ರಿಕ್ ಪೇಟಿಂಗ್ ಕುರಿತು 30 ದಿನಗಳ ಉಚಿತ ತರಬೇತಿಯು ಮೇ 15 ರಿಂದ ಆರಂಭವಾಗಲಿದ್ದು, ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವತಿಯರಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಅಭ್ಯರ್ಥಿಗಳು ಆಧಾರ್ ಕಾರ್ಡ್‌ನ್ನು ಹೊಂದಿರಬೇಕು ಹಾಗೂ ಬಿಪಿಎಲ್ ಕಾರ್ಡ್‌ನ್ನು ಹೊಂದಿರುವ ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು. ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣ ಪತ್ರವನ್ನು ವಿತರಿಸಲಾಗುವುದು.

ಆಸಕ್ತರು ಅಭ್ಯರ್ಥಿಗಳು ಮೇ.8 ಒಳಗಾಗಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಅಥವಾ ಮೊಬೈಲ್ ನಂ: 9380162042, 9740982585, 9113880324 ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕರಾದ ರವಿಕುಮಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಏ.18 ರಂದು ಜಾಹೀರ ಲೀಲಾವ

**ಬೆಳಗಾವಿ:** ಪ್ರಧಾನ ದಿವಾಣಿ ನ್ಯಾಯಾಧೀಶರು ಹಾಗೂ ಪ್ರ.ದ.ನ್ಯಾದಂ.ಗಳು ಚಿಕ್ಕೋಡಿರವರ ನ್ಯಾಯಾಲಯದಲ್ಲಿ ಏ.18 ರಂದು ಮಧ್ಯಹ್ನ 4 ಗಂಟೆಗೆ ಜಾಹೀರ ಲೀಲಾವನ್ನು ಏರ್ಪಡಿಸಲಾಗಿದೆ.

ಎಲ್.ಜಿ, ನೋಕಿಯಾ, ಸ್ಯಾಮಸಂಗ್, ಕಾರ್ಬನ್, ಮೈಕ್ರೋಮ್ಯಾಕ್ಸ್ ಲಾವಾ ಕಂಪನಿ ಮೊಬೈಲ್ ಸೇರಿದಂತೆ ಅನೇಕ ಕಂಪನಿಯ ಮೊಬೈಲ್‌ಗಳು ಹಾಗೂ ಕಬ್ಬಿಣದ ವಸ್ತುಗಳು ಜಾಹೀರ ಲೀಲಾವದಲ್ಲಿ ಇರುತ್ತವೆ ಎಂದು ಚಿಕ್ಕೋಡಿ ಪ್ರಧಾನ ದಿವಾಣಿ ನ್ಯಾಯಾದೀಶರು ಹಾಗೂ ಪ್ರ.ದ.ನ್ಯಾದಂ.ಗಳಾದ ಅಶೋಕ ಆರ್.ಎಚ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೈಲಹೊಂಗಲ ತಾಲೂಕಿನಲ್ಲಿ ಕಾಂಗ್ರೆಸ್ ಅಭ್ಯರ್ಥಿಗೆ ಭಾರೀ ಬೆಂಬಲ

**ಬೈಲಹೊಂಗಲ:** ಬೆಳಗಾವಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಪರ ಬೈಲಹೊಂಗಲ ತಾಲೂಕಿನ ವಿವಿಧ ಹಳ್ಳಿಗಳಲ್ಲಿ ಬುಧವಾರ ಪ್ರಚಾರ ಕೈಗೊಳ್ಳಲಾಗಿದ್ದು, ಎಲ್ಲೆಡೆ ಭಾರೀ ಬೆಂಬಲ ವ್ಯಕ್ತವಾಗಿದೆ.

ಬೈಲಹೊಂಗಲ ತಾಲೂಕಿನ ಬೈಲವಾಡ, ದೇವಲಾಪುರ, ಆನಿಗೋಳ ಮತ್ತಿತರ ಕಡೆಗಳಲ್ಲಿ ಮತಯಾಚಿಸಲಾಯಿತು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ಶಾಸಕ ಮಹಾಂತೇಶ ಕೌಜಲಗಿ, ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್, ಪಕ್ಷದ ಮುಖಂಡರಾದ ಈಶ್ವರ ಉಳ್ಳೆಗಡ್ಡಿ, ಬೆಳಗಾವಿ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕಾರ್ತಿಕ ಪಾಟೀಲ ಮೊದಲಾದವರು ಪ್ರಚಾರದಲ್ಲಿ ಭಾಗಿಯಾಗಿದ್ದರು.



ಎಲ್ಲ ಊರುಗಳಲ್ಲಿ ಸೇರಿದ್ದ ಅಪಾರ ಜನಸ್ತೋಮ, ಸಂಪೂರ್ಣವಾಗಿ ಕಾಂಗ್ರೆಸ್ ಗೆ ಬೆಂಬಲ ಸೂಚಿಸಿದರು. ಗ್ಯಾರಂಟಿ ಯೋಜನೆಗಳಿಂದ ಪ್ರತಿ ಕುಟುಂಬಕ್ಕೆ ಪ್ರಯೋಜನವಾಗಿದೆ. ಕಾಂಗ್ರೆಸ್ ಪಕ್ಷ ನುಡಿದಂತೆ ನಡೆದು ನಮಗೆಲ್ಲ ಬದುಕು ಕಟ್ಟಿಕೊಟ್ಟಿದೆ. ಕ್ಷೇತ್ರದಲ್ಲಿ ಕೂಡ ಕಾಂಗ್ರೆಸ್ ಅವಧಿಯಲ್ಲಿ ಸಾಕಷ್ಟು ಅಭಿವೃದ್ಧಿ ಯೋಜನೆಗಳಾಗಿವೆ. ಸ್ಥಳೀಯ ಅಭ್ಯರ್ಥಿಯಾಗಿರುವ ಮೃಣಾಲ ಹೆಬ್ಬಾಳಕರ್ ಅವರಿಗೆ ನಾವೆಲ್ಲ ಮತ ನೀಡಿ ಹೆಚ್ಚಿನ ಬಹುಮತದಿಂದ ಆಯ್ಕೆ ಮಾಡುತ್ತೇವೆ ಎಂದು ಜನರು ಅಭಯನೀಡಿದರು.

ಲಕ್ಷ್ಮೀ ಹೆಬ್ಬಾಳಕರ್ ಮಾತನಾಡಿ, ಕಾಂಗ್ರೆಸ್ ಪಕ್ಷ ನಿಮ್ಮ ಕಷ್ಟ ಸುಖದಲ್ಲಿ ಸದಾ ಜನರ ಜೊತೆಯಲ್ಲಿರಲಿದೆ. ಸ್ಥಳೀಯ ಶಾಸಕ ಮಹಾಂತೇಶ ಕೌಜಲಗಿ ಕೂಡ ಉತ್ತಮವಾಗಿ ಕೆಲಸ ಮಾಡುತ್ತಿದ್ದು, ಒಳ್ಳೆಯ ಹೆಸರು ಗಳಿಸಿಕೊಂಡಿದ್ದಾರೆ. ಜನರೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದಾರೆ. ಮೃಣಾಲ ಹೆಬ್ಬಾಳಕರ್ ಯುವಕನಾಗಿದ್ದು, ಕೆಲಸ ಮಾಡುವ ಉತ್ಸಾಹ ಹೊಂದಿದ್ದಾನೆ. ಅವನಿಗೆ ಮತ ನೀಡಿ ಆಶೀರ್ವದಿಸಿ ಎಂದು ಕೋರಿದರು.

ಮಹಾಂತೇಶ ಕೌಜಲಗಿ ಮಾತನಾಡಿ, ಲಕ್ಷ್ಮೀ ಹೆಬ್ಬಾಳಕರ್ ಅವರು ಬೆಳಗಾವಿ ಗ್ರಾಮೀಣ ಕ್ಷೇತ್ರದಲ್ಲಿ ಹಿಂದೆಂದೂ ಕಾಣದಷ್ಟು ಅಭಿವೃದ್ಧಿ ಮಾಡುವ ಮೂಲಕ ಮನೆಮಗಳೆನಿಸಿದ್ದಾರೆ. ಅವರ ಪುತ್ರ ಮೃಣಾಲ್ ಕೂಡ ಉತ್ತಮ ಸಂಸ್ಕೃತಿ ಹೊಂದಿರುವ ಒಳ್ಳೆಯ ಗುಣ ಹೊಂದಿರುವ ಯುವಕನಾಗಿದ್ದು, ಲೋಕಸಭೆಗೆ ಆಯ್ಕೆಯಾದಲ್ಲಿ ಕ್ಷೇತ್ರದಲ್ಲಿ ಅಭಿವೃದ್ಧಿಯಾಗಲಿದೆ. ಎಲ್ಲರೂ ಅವರಿಗೆ ಮತ ನೀಡುವ ಮೂಲಕ ಲೋಕಸಭೆಗೆ ಕಳಿಸೋಣ ಎಂದರು.

ಮೃಣಾಲ ಹೆಬ್ಬಾಳಕರ್ ಮಾತನಾಡಿ, ಲೋಕಸಭೆಗೆ ಆಯ್ಕೆಯಾದಲ್ಲಿ ಉತ್ತಮವಾಗಿ ಕೆಲಸ ಮಾಡಿ ಜಿಲ್ಲೆಗೆ ಹೆಸರು ತಂದುಕೊಡುತ್ತೇನೆ. ಕ್ಷೇತ್ರದಲ್ಲಿ ಹಿಂದೆಂದೂ ಆಗದಷ್ಟ ಕೆಲಸ ಮಾಡಿ ತೋರಿಸುತ್ತೇನೆ ಎಂದರು.

## ಡಾ. ಜಿನದತ್ತ ದೇಸಾಯಿ ಮತ್ತು ಪಿ.ಪಿ.ದೊಡ್ಡಣ್ಣವರ ಅವರ ಜನ್ಮ ದಿನಾಚರಣೆ



ಬೆಳಗಾವಿ: ಭರತೇಶ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಡಾ. ಜಿನದತ್ತ ದೇಸಾಯಿ ಹಾಗೂ ಮಾಜಿ ಅಧ್ಯಕ್ಷರಾದ ಪುಷ್ಪದಂತ ದೊಡ್ಡಣ್ಣವರ ಅವರ ಜನ್ಮದಿನಾಚನರಣೆಯನ್ನು ಏಪ್ರಿಲ 3ರಂದು ಭರತೇಶ ಶಿಕ್ಷಣ ಸಂಸ್ಥೆಯ ಅರಹಂತಗಿರಿ ಆವರಣದಲ್ಲಿ ಆಚರಿಸಲಾಯಿತು.

ಸಮಾರಂಭದಲ್ಲಿ ಭರತೇಶ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ವಿನೋದ ದೊಡ್ಡಣ್ಣವರ ಅವರು ಮತನಾಡಿ, ಡಾ.ಜಿನದತ್ತ ದೇಸಾಯಿ ಹಾಗೂ ಪುಷ್ಪದಂತ ದೊಡ್ಡಣ್ಣವರ ಅವರು ಭರತೇಶ ಶಿಕ್ಷಣ ಸಂಸ್ಥೆಯ ಬೆಳವಣಿಗೆಯಲ್ಲಿ ಸಾಕಷ್ಟು ಕೊಡುಗೆಗಳನ್ನು ನೀಡಿದ್ದಾರೆ. ಅವರ ಪ್ರೇರಣೆಯಿಂದ ಇದು ಸಂಸ್ಥೆಯು ಹೆಮ್ಮರವಾಗಿ ಬೆಳೆದಿದೆ ಎಂದು ಹೇಳಿದ ಅವರು ಮುಂಬರುವ ದಿನಗಳಲ್ಲಿ ಸಂಸ್ಥೆಯ ವತಿಯಿಂದ ಇನ್ನೂ ಹೆಚ್ಚಿನ ಕಾರ್ಯಗಳನ್ನು ಕೈಗೊಳ್ಳುವುದಾಗಿ ಹೇಳಿದರು.

ಇದೇ ಸಂದರ್ಭದಲ್ಲಿ ಸಂಸ್ಥೆಯಲ್ಲಿ ಶಿಕ್ಷಣ ಪಡೆಯುತ್ತಿರುವ ಅನಾಥ ಮಕ್ಕಳಿಗೆ ವಿಶೇಷ ಕೊಡುಗೆಗಳನ್ನು ನೀಡಲಾಯಿತು. ಪ್ರಾಚಾರ್ಯ ಸುನಿತಾ ದೇಶಪಾಂಡೆ ಅತಿಥಿಗಳನ್ನು ಸ್ವಾಗತಿಸಿದರು. ಎಸ್.ಎನ್.ಅಕ್ಕಿ ಹಾಗೂ ಎ.,ಎ.ಸನದಿ ಅವರು ಅತಿಥಿಗಳನ್ನು ಪರಿಚಯಿಸಿದರು. ಈ ಸಂದರ್ಭದಲ್ಲಿ ಸಂಸ್ಥೆಯ ಉಪಾಧ್ಯಕ್ಷ ಶ್ರೀಪಾಲ ಖೆಮಲಾಪೂರೆ, ಆಡಳಿತ ಮಂಡಳಿಯ ಸದಸ್ಯರಾದ ಪ್ರಕಾಶ ಉಪಾಧ್ಯೆ, ಅಶೋಕ ದಾನವಡೆ, ಸಂಜೀವ ದೊಡ್ಡಣ್ಣವರ, ಹೀರಾಚಂದ ಕಲಮನಿ ಶರದ ಪಾಟೀಲ, ಕೊಡಚವಾಡ, ರಾಮಗೊಂಡಾ ಸೇರಿದಂತೆ ಮೊದಲಾದವರು ಉಪಸ್ಥಿತರಿದ್ದರು.

## ಸುರಕ್ಷಿತವಾಗಿ ಮಗು ಹೊರಕ್ಕೆ: ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಸಂತಸ



ಬೆಳಗಾವಿ: ವಿಜಯಪುರ ಜಿಲ್ಲೆಯ ಇಂಡಿ ತಾಲೂಕಿನ ಲಚ್ಯಾಣ ಗ್ರಾಮದಲ್ಲಿ ಕೊಳವೆ ಬಾವಿಗೆ ಬಿದ್ದಿದ್ದ 2 ವರ್ಷದ ಮಗು ಸಾತ್ವಿಕ್ ರಕ್ಷಣಾ ಕಾರ್ಯಾಚರಣೆ ಯಶಸ್ವಿಯಾಗಿ, ಮಗುವನ್ನು ರಕ್ಷಣಾ ಸಿಬ್ಬಂದಿಗಳು ಸುರಕ್ಷಿತವಾಗಿ ಹೊರತೆಗೆದಿರುವುದಕ್ಕೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಸಂತಸ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಬೆಳಗಾವಿಯಲ್ಲಿ ಹೇಳಿಕೆ ಬಿಡುಗಡೆ ಮಾಡಿರುವ ಸಚಿವರು, ಕೋಟಿ ಕೋಟಿ ಜನರ ಪ್ರಾರ್ಥನೆಗೆ ಫಲ ಸಿಕ್ಕಿದೆ. ದೇವರ ದಯೆಯಿಂದ, ರಕ್ಷಣಾ ಸಿಬ್ಬಂದಿಯ ಶ್ರಮದಿಂದ ಮಗು ಸುರಕ್ಷಿತವಾಗಿ ಹೊರಗೆ ಬಂದಿದೆ. ನಮ್ಮೆಲ್ಲರ ಆತಂಕ ದೂರವಾಗಿದೆ. ರಕ್ಷಣಾ ಸಿಬ್ಬಂದಿಗೆ ನಾನು ಅಭಿನಂದನೆ ಮತ್ತು ಧನ್ಯವಾದಗಳನ್ನು ಸಲ್ಲಿಸುತ್ತೇನೆ ಎಂದು ಸಚಿವರು ತಿಳಿಸಿದ್ದಾರೆ.

ಮನೆ ಬಳಿ ಆಟವಾಡುತ್ತಿದ್ದ 2 ವರ್ಷದ ಮಗು ಸಾತ್ವಿಕ್ ಆಕಸ್ಮಿಕವಾಗಿ ಬುಧವಾರ ಸಂಜೆ ಕೊಳವೆ ಬಾವಿಗೆ ಬಿದ್ದಿತ್ತು. ಮಗು ರಕ್ಷಣೆಗಾಗಿ ಎನ್ ಡಿ ಆರ್ ಎಫ್, ಎಸ್ ಡಿ ಆರ್ ಎಫ್ ತಂಡ ನಿರಂತರವಾಗಿ ರಕ್ಷಣಾ ಕಾರ್ಯಾಚರಣೆ ನಡೆಸಿ ಅಂತಿಮವಾಗಿ ಮಗುವನ್ನು ಸುರಕ್ಷಿತವಾಗಿ ಹೊರತಂದಿದ್ದಾರೆ. ಕೊಟ್ಯಂತರ ಜನರು ಮಗುವಿನ ಸುರಕ್ಷತೆಗಾಗಿ ಪ್ರಾರ್ಥಿಸುತ್ತಿದ್ದರು.

## ಜೈನ ಮುನಿಗಳ ಆಶಿರ್ವಾದ ಪಡೆದ ಮೃಣಾಲ ಹೆಬ್ಬಾಳಕರ್



ಬೆಳಗಾವಿ: ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಹಾಗೂ ಬೆಳಗಾವಿ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಗುರುವಾರ ಬೆಳಗಾವಿಯ ಪಾಂಗುಳ ಗಲ್ಲಿಯಲ್ಲಿರುವ ಚಂದ್ರ ಪ್ರಭು ಶ್ವೇತಾಂಬರ ಜೈನ ಬಸದಿಗೆ ತೆರಳಿ, ಪರಮ ಪೂಜ್ಯ ಕುಂದ ಕುಂದ ಸುರೇಶ್ವರ ಜೀ ಮಹಾರಾಜ ಸಾಹೇಬ್, ಪರಮ ಪೂಜ್ಯ ಆಚಾರ್ಯ ವಿಜ್ಞಾನಪ್ರಭಾ ಸುರೇಶ್ವರ ಜೀ ಮಹಾರಾಜ ಸಾಹೇಬ್ ಹಾಗೂ ಇವರ ಶಿಷ್ಯರಾದ ಪರಮ ಪೂಜ್ಯ ಮುನಿ ನಿರಮೋಹಪ್ರಭಾ ಅವರ ದರ್ಶನ ಪಡೆದು, ಈ ಎಲ್ಲ ಆಚಾರ್ಯರ ಆಶೀರ್ವಾದ ಹಾಗೂ ಮಾರ್ಗದರ್ಶನ ಪಡೆದರು.

## ಕಾಗವಾಡ: ಕಾಂಗ್ರೆಸ್ ಮುಖಂಡನ ಬರ್ಬರ ಹತ್ಯೆ

ಕಾಗವಾಡ: ಕಾಗವಾಡ ತಾಲ್ಲೂಕಿನ ಖಿಳೇಗಾಂವ ಗ್ರಾಮದ ಕಾಂಗ್ರೆಸ್ ಮುಖಂಡ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಅಣ್ಣಪ್ಪ ಬಸಪ್ಪ ನಿಂಬಾಳ (58) ಅವರನ್ನು ಬುಧವಾರ ಬರ್ಬರವಾಗಿ ಕೊಚ್ಚಿ ಕೊಲೆ ಮಾಡಲಾಗಿದೆ.



ಅಣ್ಣಪ್ಪ ಅವರು ಬುಧವಾರ ಸಂಜೆ ದೇವಸ್ಥಾನಕ್ಕೆ ಹೋಗಿ ಮರಳುತ್ತಿದ್ದ ವೇಳೆ ಆರು ಮಂದಿ ಮುಸುಕುಧಾರಿಗಳ ಗುಂಪು ಅವರ ಮೇಲೆ ದಾಳಿ ಮಾಡಿದೆ. ನಡು ರಸ್ತೆಯಲ್ಲಿ ಮಾರಕಾಸ್ತ್ರಗಳಿಂದ ಕೊಚ್ಚಿ ಪರಾರಿಯಾಗಿದೆ. ರಕ್ತದ ಮಡುವಿನಲ್ಲಿ ಬಿದ್ದಿದ್ದ ಅಣ್ಣಪ್ಪ ಅವರನ್ನು ಅಥಣಿ ಆಸ್ಪತ್ರೆಗೆ ಸಾಗಿಸಲಾಯಿತು. ಮಾರ್ಗ ಮಧ್ಯದಲ್ಲೇ ಅವರು ಉಸಿರು ಬಿಟ್ಟರು ಎಂದು ಮೂಲಗಳು ತಿಳಿಸಿವೆ.

ಅಣ್ಣಪ್ಪ ಅವರು ಶಾಸಕರಾದ ಲಕ್ಷ್ಮಣ ಸವದಿ ಹಾಗೂ ರಾಜು ಕಾಗೆ ಅವರ ಆಪ್ತರಾಗಿದ್ದರು. ಕೊಲೆ ವಿಷಯ ತಿಳಿದು ಶಾಸಕ ಸವದಿ ಆಸ್ಪತ್ರೆಗೆ ಭೇಟಿ ನೀಡಿದರು.

ಕೊಲೆಗೆ ನಿಖರ ಕಾರಣ ಗೊತ್ತಾಗಿಲ್ಲ ಎಂದು ಅಥಣಿ ಪೊಲೀಸರು ತಿಳಿಸಿದ್ದಾರೆ. ಗ್ರಾಮದಲ್ಲಿ ಆತಂಕದ ವಾತಾವರಣ ಮನೆ ಮಾಡಿದ್ದು, ಪೊಲೀಸ್ ಬಿಗಿ ಬಂದೋಬಸ್ತ್ ಏರ್ಪಡಿಸಲಾಗಿದೆ.

## ಲೋಕಾಯುಕ್ತ ಜನ ಸಂಪರ್ಕ ಸಭೆ

ಬೆಳಗಾವಿ: ಬೆಳಗಾವಿ ಜಿಲ್ಲೆಯ ಯರಗಟ್ಟಿ ತಾಲೂಕಿನ ಪ್ರವಾಸಿ ಮಂದಿರದಲ್ಲಿ ಏ.10 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ಬೆಳಗಾವಿ ಲೋಕಾಯುಕ್ತ ಅಧಿಕಾರಿಗಳು ಯರಗಟ್ಟಿ ತಾಲೂಕಿನ ಎಲ್ಲ ತಾಲೂಕಾ ಮಟ್ಟದ ಅಧಿಕಾರಿಗಳ ಸಮಕ್ಷಮದಲ್ಲಿ ಲೋಕಾಯುಕ್ತ ಜನ ಸಂಪರ್ಕ ಸಭೆಯನ್ನು ಹಮ್ಮಿಕೊಳ್ಳಲಾಗಿದೆ.

ಸರ್ಕಾರಿ ಕಛೇರಿಯಲ್ಲಿಯ ಅಧಿಕಾರಿಗಳು ಸಾರ್ವಜನಿಕರ ಅಧಿಕೃತ ಕೆಲಸಗಳನ್ನು ಮಾಡಿಕೊಡುವಲ್ಲಿ ವಿಳಂಬ ನೀತಿ ಅನುಸರಿಸುತ್ತಿದ್ದಲ್ಲಿ, ಸರ್ಕಾರಿ ಅಧಿಕಾರಿಗಳು ಕೆಲಸ ಮಾಡಿಕೊಡುವಲ್ಲಿ ಹಣಕ್ಕೆ ಬೇಡಿಕೆ ಇಟ್ಟಲ್ಲಿ, ಒತ್ತಾಯಿಸಿದಲ್ಲಿ ಅಥವಾ ಸರ್ಕಾರಿ ಅಧಿಕಾರಿಯ ಅಕ್ರಮ ಆಸ್ತಿ ಸಂಪಾದನೆ ಬಗ್ಗೆ ಮಾಹಿತಿ ಇದ್ದಲ್ಲಿ, ಲೋಕಾಯುಕ್ತ ಅಧಿಕಾರಿಗಳೊಂದಿಗೆ ನೇರವಾಗಿ/ಗುಪ್ತವಾಗಿ ಮಾಹಿತಿ ನೀಡಿ ಸ್ಥಳದಲ್ಲಿಯೇ ಅಧಿಕಾರಿಗಳಿಂದ ಪರಿಹರಿಸಿಕೊಳ್ಳಬಹುದು.

ಅರ್ಜಿ ಸಲ್ಲಿಸಲು ಇಚ್ಛಿಸುವವರು ನಿಗದಿತ ನಮೂನೆಯ ಅರ್ಜಿಯೊಂದಿಗೆ ಹಾಜರಿರಲು ಈ ಮೂಲಕ ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ 0831-2950756 ಅಥವಾ 0831-2421922 ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ. ಸದರಿ ಸಭೆಯ ಸದುಪಯೋಗ ಪಡಿಸಿಕೊಳ್ಳಲು ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

## ನರೇಗಾ ಕಾಮಗಾರಿ ಸ್ಥಳದಲ್ಲಿಯೇ ಮತದಾನ ಜಾಗೃತಿ



ಹುಕ್ಕೇರಿ: ತಾಲೂಕಿನ ಹುನ್ನೂರ ಗುಡ್ಡದಲ್ಲಿ ಉದ್ಯೋಗ ಖಾತರಿ ಯೋಜನೆಯ ಕಾಮಗಾರಿ ಸ್ಥಳದಲ್ಲಿಯೇ ಬುಧವಾರ ಕೂಲಿ ಕಾರ್ಮಿಕರಿಗೆ ಮತದಾನ ಜಾಗೃತಿ ಮೂಡಿಸಲಾಯಿತು.

ನರೇಗಾ ಯೋಜನೆಯಡಿ ಇಂಗು ಗುಂಡಿಗಳ ನಿರ್ಮಾಣ ಕಾಮಗಾರಿಯಲ್ಲಿ ತೊಡಗಿರುವ ಶಿರಢಾಣ, ಹೊಸೂರ ಗ್ರಾಮ ಪಂಚಾಯಿತಿಗಳ ಕೂಲಿಕಾರರಿಗೆ ಮತ ಮಹತ್ವ ಕುರಿತು ಅರಿವು ಮೂಡಿಸಲಾಯಿತು. ಇದೇ ವೇಳೆ ಪ್ರತಿಜ್ಞಾ ವಿಧಿ ಸಹ ಬೋಧಿಸಲಾಯಿತು.

ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಟಿ.ಆರ್. ಮಲ್ಲಾಡದ ಮಾತನಾಡಿ, ಈ ವರ್ಷದಿಂದ ನರೇಗಾ ಕೂಲಿ ದಿನಕ್ಕೆ 316 ರಿಂದ 349 ಗೆ ಹೆಚ್ಚಿಸಲಾಗಿದೆ. ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು ನರೇಗಾ ಯೋಜನೆಯಲ್ಲಿ ಭಾಗವಹಿಸಬೇಕು. ಮತದಾನ ಮಾಡುವದು ಪ್ರತಿಯೊಬ್ಬ ನಾಗರಿಕನ ಕರ್ತವ್ಯ. ಪ್ರತಿ ಮತವೂ ಅಮೂಲ್ಯವಾಗಿದೆ.

ಆದ ಕಾರಣ ಎಲ್ಲರೂ ತಪ್ಪದೇ ಮೇ 7 ರಂದು ಮತಗಟ್ಟೆಗಳಿಗೆ ಹೋಗಿ ಮತದಾನ ಮಾಡಿ ತಮ್ಮ ಹಕ್ಕನ್ನು ಚಲಾಯಿಸಬೇಕು ಎಂದರು.

ನರೇಗಾ ಸಹಾಯಕ ನಿರ್ದೇಶಕ ಮಾತನಾಡಿ, ಕೂಲಿಕಾರರು ಯಾವುದೇ ಆಸೆ ಆಮಿಷಗಳಿಗೆ ಒಳಗಾಗದೇ ನಿರ್ಭಿತಿಯಿಂದ ಮತ ಚಲಾಯಿಸಬೇಕು. ಪ್ರತಿ ಮನೆ ಮನೆಗೆ ತೆರಳಿ ಮತದಾನ ಕುರಿತು ಅರಿವು ಮೂಡಿಸುವ ಕೆಲಸ ಮಾಡಲಾಗುತ್ತಿದೆ. ಈ ಸಲ ಹೆಚ್ಚು ಪ್ರತಿಶತ ಮತದಾನ ಮಾಡಲು ಕ್ರಮ ಕೈಕೊಳ್ಳಲಾಗಿದೆ ಎಂದರು.

## ಕೊಳವೆ ಬಾವಿಯಿಂದ ಸುರಕ್ಷಿತವಾಗಿ ಮಗು ಹೊರಕ್ಕೆ ತೆಗೆದ ರಕ್ಷಣಾ ಸಿಬ್ಬಂದಿಗೆ ಅಭಿನಂದನೆ ಸಲ್ಲಿಸಿದ ಸಚಿವ ಸತೀಶ್ ಜಾರಕಿಹೊಳಿ



ಬೆಳಗಾವಿ: ವಿಜಯಪುರ ಜಿಲ್ಲೆಯ ಇಂಡಿ ತಾಲೂಕಿನ ಲಚ್ಯಾಣ ಗ್ರಾಮದಲ್ಲಿ ಕೊಳವೆ ಬಾವಿಗೆ ಬಿದ್ದಿದ್ದ 2 ವರ್ಷದ ಮಗು ಸಾತ್ವಿಕ್ ನ್ನು ಸುರಕ್ಷಿತವಾಗಿ ಹೊರಕ್ಕೆ ತೆಗೆದ ರಕ್ಷಣಾ ಸಿಬ್ಬಂದಿಗೆ ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅಭಿನಂದನೆ ಸಲ್ಲಿಸಿದ್ದಾರೆ. ಈ ಕುರಿತು ಹೇಳಿಕೆ ನೀಡಿರುವ ಸಚಿವರು, ಕೊಳವೆ ಬಾವಿಗೆ ಬಿದ್ದಿದ್ದ ಮಗುವನ್ನು ಎನ್ ಡಿ ಆರ್ ಎಫ್, ಎಸ್ ಡಿ ಆರ್ ಎಫ್ ತಂಡ ನಿರಂತರವಾಗಿ ರಕ್ಷಣಾ ಕಾರ್ಯಾಚರಣೆ ನಡೆಸಿ ಕೊನೆಗೂ ಯಶಸ್ವಿಯಾಗಿ ರಕ್ಷಣಾ ಕಾರ್ಯ ನಡೆಸಿ ಹೊರ ತರಲಾಗಿದೆ. ಇವರ ಕಾರ್ಯಕ್ಕೆ ಅಭಿನಂದನೆ ಮತ್ತು ಧನ್ಯವಾದಗಳನ್ನು ತಿಳಿಸಿದ್ದಾರೆ.

# ಮನರೇಗಾ ಕಾಮಗಾರಿ ಪರಿಶೀಲಿಸಿದ ಜಿಪಂ ಸಿಇಒ ರಾಹುಲ್ ಶಿಂಧೆ

ರಾಯಬಾಗ: ರಾಯಬಾಗ ತಾಲೂಕಿನ ಮೊರಬ ಹಾಗೂ ಕೋಳಿಗುಡ್ಡ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಮನರೇಗಾ ಯೋಜನೆಯಡಿ ಕೈಗೊಂಡ ವಿವಿಧ ಕಾಮಗಾರಿಗಳನ್ನು ಬುಧವಾರ ಜಿಪಂ ಸಿಇಒ ರಾಹುಲ್ ಶಿಂಧೆ ಭೇಟಿ ನೀಡಿ ಪರಿಶೀಲಿಸಿದರು.

ಮೊರಬ ಗ್ರಾಪಂ ವ್ಯಾಪ್ತಿಯ ಕೂಸಿನ ಮನೆಗೆ ಭೇಟಿ ನೀಡಿ ಪರಿಶೀಲಿಸಿದ ಜಿಪಂ ಸಿಇಒ ರಾಹುಲ್ ಶಿಂಧೆ ಅವರು, ಮನರೇಗಾ ಕೂಲಿಕಾರರ ಕೆಲಸದ ಸಮಯದಲ್ಲಿ ಅವರ ಮಕ್ಕಳ ಪಾಲನೆ ಮತ್ತು ಪೋಷಣೆ ಮಾಡುವ ಉದ್ದೇಶದಿಂದ ಪ್ರಾರಂಭಿಸಿರುವ ಕೂಸಿನ ಮನೆ ಚೆನ್ನಾಗಿ ನಿರ್ವಹಿಸಿಕೊಂಡು ಹೋಗಬೇಕು ಎಂದು ಸೂಚಿಸಿದ



ಅವರು, ಕೂಸಿನ ಮನೆ ನಿರ್ವಹಣೆ ಕುರಿತು ಪ್ರಶಂಸೆ ವ್ಯಕ್ತಪಡಿಸಿದರು.

ಬಳಿಕ ಮೊರಬ ಗ್ರಾಪಂ ವ್ಯಾಪ್ತಿಯಲ್ಲಿನ ಕಾಲುವೆ ಹೊಳೆತ್ತುವ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿದ ಜಿಪಂ ಸಿಇಒ ರಾಹುಲ್ ಶಿಂಧೆ ಅವರು, 400 ಜನ ಕೂಲಿಕಾರರನ್ನು ಕಂಡು ಹರ್ಷ ವ್ಯಕ್ತಪಡಿಸಿದರು. ಜಿಲ್ಲೆಯಲ್ಲಿ ಬರಗಾಲ ಆವರಿಸಿರುವುದರಿಂದ ಮನರೇಗಾದಡಿ ಅರ್ಹ ಕೂಲಿಕಾರರಿಗೆ ಕೆಲಸ ನೀಡಬೇಕು. ಈಗಾಗಲೇ ಕೆಲಸ ಬರುವ ಎಲ್ಲ ಕೂಲಿಕಾರರಿಗೆ ಕುಡಿಯುವ ನೀರು, ಪ್ರಥಮ ಚಿಕಿತ್ಸಾ ಕಿಟ್ ಸೇರಿದಂತೆ ಕಾಮಗಾರಿ ಸ್ಥಳ ಅಗತ್ಯ ಸೌಕರ್ಯ ಒದಗಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇದೇ ವೇಳೆ ಮನರೇಗಾ ಕೂಲಿಕಾರರಿಗೆ ಮತದಾನದ ಕುರಿತು ಜಾಗೃತಿ ಮೂಡಿಸಿದ ಜಿಪಂ ಸಿಇಒ ರಾಹುಲ್ ಶಿಂಧೆ ಅವರು, ಲೋಕಸಭೆ ಚುನಾವಣೆಗೆ ಮೇ 7 ರಂದು ನಡೆಯಲಿರುವ ಮತದಾನದ ದಿನದಂದು ತಪ್ಪದೇ ಎಲ್ಲರೂ ಮತದಾನ ಮಾಡಬೇಕು. ಜತೆಗೆ ತಾವೂ ಕೂಡ ಮತ್ತೊಬ್ಬರಿಗೆ ಮತದಾನ ಮಾಡುವಂತೆ ತಿಳುವಳಿಕೆ ಮಾಡಬೇಕು ಎಂದು ತಿಳಿಸಿದರು.

ಬಳಿಕ ಕೋಳಿಗುಡ್ಡ ಗ್ರಾಪಂ ವ್ಯಾಪ್ತಿಯಲ್ಲಿ ಮನರೇಗಾದಡಿ ಕೈಗೊಂಡ ಪವಿತ್ರ ವನ ಸೇರಿದಂತೆ ವಿವಿಧ ಕಾಮಗಾರಿಗಳನ್ನು ಜಿಪಂ ಸಿಇಒ ರಾಹುಲ್ ಶಿಂಧೆ ಪರಿಶೀಲಿಸಿ, ಪ್ರಶಂಸೆ ವ್ಯಕ್ತಪಡಿಸಿದರು.

ಈ ವೇಳೆ ತಾಪಂ ಇಒ ಆನಂದ ಬಾಲಪ್ಪನ್ನವರ, ಸಹಾಯಕ ನಿರ್ದೇಶಕ(ಗ್ರಾಉ) ಅರುಣ ಮಾಚಕನ್ನವರ, ಗ್ರಾಪಂ ಅಧ್ಯಕ್ಷ ಶರಣಗೌಡ ಪಾಟೀಲ, ಐಇಸಿ ಸಂಯೋಜಕ ಮುತ್ತುರಾಜ ಗದಾಡಿ, ಪಿಡಿಒಗಳಾದ ರಾಘವೇಂದ್ರ ಮೊರಬ, ಯಲ್ಲಾಲಿಂಗ ಅಸೊಡಿ ಮೊದಲಾದವರು ಉಪಸ್ಥಿತರಿದ್ದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089